ಕನ್ನಡ ದಿನಪತ್ರಿಕೆ

18 ಫೆಬ್ರುವರಿ । ರವಿವಾರ
18 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 02 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

# ಇಸ್ರೋ ಮತ್ತೊಂದು ಮೈಲುಗಲ್ಲು: ಉಪಗ್ರಹ ಯಶಸ್ವಿ

**ಬೆಂಗಳೂರು:** ಜನವರಿ 1 ರಂದು ಕಪ್ಪು ಕುಳಿಗಳು ಮತ್ತು ನ್ಯೂಟ್ರಾನ್ ನಕ್ಷತ್ರಗಳನ್ನು ಅಧ್ಯಯನ ಮಾಡಲು ಉಪಗ್ರಹ ಉಡಾವಣೆ ಮಾಡಿದ್ದ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ(ಇಸ್ರೋ) ಶನಿವಾರ ಮತ್ತೊಂದು ಮೈಲುಗಲ್ಲು ಸಾಧಿಸಿದೆ. ಇಸ್ರೋ ಇಂದು ಸಂಜೆ ಭಾರತದ ವಿಶೇಷ ಹವಾಮಾನ ಉಪಗ್ರಹವಾದ ಖಿಓಖಂಖಿ-3ಆಖ ಅನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ. ಈ ಉಪಗ್ರಹವು ಅಸ್ತಿತ್ವದಲ್ಲಿರುವ ಕಕ್ಷೆಯಲ್ಲಿನ ಖಿಓಖಂಖಿ-3ಆ ಮತ್ತು 3ಆಖ ಉಪಗ್ರಹಗಳಿಗೆ ಸೇವೆಗಳ ನಿರಂತರತೆಯನ್ನು ಒದಗಿಸುತ್ತದೆ ಮತ್ತು ಖಿಓಖಂಖಿ ವ್ಯವಸ್ಥೆಯ ಸಾಮರ್ಥ್ಯಗಳನ್ನು ಗಣನೀಯವಾಗಿ ಹೆಚ್ಚಿಸುತ್ತದೆ. ಆಂಧ್ರಪ್ರದೇಶದ ಶ್ರೀಹರಿಕೋಟದಲ್ಲಿರುವ ಸತೀಶ್ ಧವನ್ ಸಂಶೋಧನಾ ಕೇಂದ್ರದಿಂದ ಇನ್‌ಸ್ಯಾಟ್-3ಡಿಎಸ್ ಉಪಗ್ರಹವನ್ನು ಹೊತ್ತ ಜಿಎಸ್‌ಎಲ್‌ವಿ ರಾಕೆಟ್ (ಉಖಐಗಿ ಖಿಂಥಿಇಜಣ) ಯಶಸ್ವಿಯಾಗಿ ನಭಕ್ಕೆ ಹಾರಿದೆ ಎಂದು ಇಸ್ರೋ ಎಕ್ಸ್ ನಲ್ಲಿ ತಿಳಿಸಿದೆ.



INSAT-3DS ಉಪಗ್ರಹ ಉಡಾವಣೆ

**ಇಸ್ರೋ ಮಿಷನ್ ಯಶಸ್ವಿ:** ಎಲ್-1 ಪಾಯಿಂಟ್ ಸೇರಿದ ಆದಿತ್ಯ ನೌಕೆ; ಪ್ರಧಾನಿ ಮೋದಿ ಮೆಚ್ಚುಗೆ


ಜಿಎಸ್‌ಎಲ್‌ವಿ-ಎಫ್ 14 ರಾಕೆಟ್ ಮೂಲಕ ಇನ್‌ಸ್ಯಾಟ್-3ಡಿಎಸ್ ಉಪಗ್ರಹ ಉಡಾವಣೆಯಾದ ಕೆಲವೇ ನಿಮಿಷಗಳಲ್ಲಿಯೇ ಕಕ್ಷೆ ಸೇರಿತು. ಭಾರತದ ಹವಾಮಾನ, ಹವಾಮಾನ ಮುನ್ಸೂಚನೆಗಳನ್ನು ನೀಡುವ ದಿಸೆಯಲ್ಲಿ ಈ ಉಪಗ್ರಹ ಹೆಚ್ಚು ಪ್ರಾಮುಖ್ಯತೆ ಪಡೆದಿದೆ. ಈ ಉಪಗ್ರಹವು ಭೂ ವಿಜ್ಞಾನ ಸಚಿವಾಲಯದ(MoES) ಬಳಕೆದಾರ-ಧನಸಹಾಯದ ಯೋಜನೆಯಾಗಿದ್ದು, 2275 ಕೆಜಿಯಷ್ಟು ಲಿಫ್ಟ್-ಆಫ್ ಮಾಸ್ ಹೊಂದಿದೆ. ಉಪಗ್ರಹ ತಯಾರಿಕೆಗೆ ಭಾರತೀಯ ಕೈಗಾರಿಕೆಗಳು ಗಣನೀಯ ಕೊಡುಗೆ ನೀಡಿವೆ ಎಂದು ಇಸ್ರೋ ಪ್ರಕಟಣೆಯಲ್ಲಿ ತಿಳಿಸಿದೆ. INSAT-3DS ಉಪಗ್ರಹವನ್ನು ಹವಾಮಾನ ಮುನ್ಸೂಚನೆ ಮತ್ತು ವಿಪತ್ತು ಎಚ್ಚರಿಕೆಗಾಗಿ ಹವಾಮಾನ ವೀಕ್ಷಣೆಗಳು, ಭೂಮಿ ಮತ್ತು ಸಾಗರ ಮೇಲ್ಮೈಗಳ ಮೇಲ್ವಿಚಾರಣೆಗಾಗಿ ವಿನ್ಯಾಸಗೊಳಿಸಲಾಗಿದೆ. ಉಪಗ್ರಹ ಉಡಾವಣೆಯ ನಂತರ ದೇಶವನ್ನುದ್ದೇಶಿಸಿ ಮಾತನಾಡಿದ ಇಸ್ರೋ ಅಧ್ಯಕ್ಷ ಎಸ್ ಸೋಮನಾಥ್ ಅವರು, ಉಪಗ್ರಹವನ್ನು ಉತ್ತಮ ಕಕ್ಷೆಯಲ್ಲಿ ಇರಿಸಲಾಗಿದೆ ಮತ್ತು "ಉತ್ತಮ ಸ್ಥಿತಿಯಲ್ಲಿದೆ" ಎಂದು ಹೇಳಿದರು. ಉಪಗ್ರಹ ಉತ್ತಮವಾಗಿ ಕಾರ್ಯನಿರ್ವಹಿಸಿದೆ ಮತ್ತು ಅದರಲ್ಲಿ ಕೆಲಸ ಮಾಡಿದ ಎಲ್ಲಾ ತಂಡಗಳು ಮತ್ತು ಇಲಾಖೆಗಳನ್ನು ನಾನು ಅಭಿನಂದಿಸುತ್ತೇನೆ ಎಂದಿದ್ದಾರೆ.

# ಬೆಂಗಳೂರಿಗೆ ಬಂದ ಬ್ರೆಜಿಲ್ ಪ್ರಜೆ ದೇಹದೊಳಗಿತ್ತು 9.2 ಕೋಟಿ ಮೌಲ್ಯದ ಕೊಕೈನ್

**ಬೆಂಗಳೂರು:** ದೇಹದೊಳಗೆ ಕೊಕೈನ್ ಮರೆಮಾಚಿಕೊಂಡು ನಗರಕ್ಕೆ ಬಂದಿದ್ದ ಬ್ರೆಜಿಲ್ ಪ್ರಜೆಯನ್ನು ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಡಿಆರ್‌ಐ ಅಧಿಕಾರಿಗಳು ಬಂಧಿಸಿ 9.2 ಕೋಟಿ ಮೌಲ್ಯದ ಕ್ಯಾಪ್ಸುಲ್ಸ್‌ನ್ನು ಹೊರತೆಗೆಸಿದ್ದಾರೆ. ಬ್ರೆಜಿಲ್ ದೇಶದ ಪ್ರಜೆ ವೆನೆಜುವೆಲಾದಿಂದ ದುಬೈಗೆ ಹೋಗಿ ಅಲ್ಲಿಂದ ವಿಮಾನದಲ್ಲಿ ನಗರಕ್ಕೆ ಬಂದಿದ್ದಾನೆ. ವಿಮಾನ ನಿಲ್ದಾಣದಲ್ಲಿ ಡಿಆರ್‌ಐ ಅಧಿಕಾರಿಗಳು ಈ ಪ್ರಯಾಣಿಕನನ್ನು ತಪಾಸಣೆ ನಡೆಸಿದಾಗ ಅನುಮಾನ ಬಂದಿದೆ. ತಕ್ಷಣ ಆಸ್ಪತ್ರೆಗೆ ಕರೆದೊಯ್ದು ಸ್ಕ್ಯಾನಿಂಗ್ ಮಾಡಿಸಿದಾಗ ಆತನ ದೇಹದೊಳಗೆ 920 ಗ್ರಾಂ ನಾರ್ಕೋಟಿಕ ಕ್ಯಾಪ್ಸುಲ್ಗಳು ಪತ್ತೆಯಾಗಿವೆ. ಆರೋಪಿಯು ದೇಹದೊಳಗೆ ಮರೆಮಾಚಿಕೊಂಡು ಅಕ್ರಮವಾಗಿ ನಿಕೋಟಿನ್ ಅಂಶವಿದ್ದ ಕ್ಯಾಪ್ಸುಲ್ಗಳನ್ನು ಸಾಗಾಟಕ್ಕೆ ಯತ್ನಿಸಿರುವುದು ಗೊತ್ತಾಗಿದೆ.

ವೈದ್ಯರು ಆತನ ದೇಹದಲ್ಲಿದ್ದ ಕ್ಯಾಪ್ಸುಲ್ಗಳನ್ನು ಹೊರತೆಗೆದಿದ್ದು, ಅವುಗಳ ಮೌಲ್ಯ 9.2 ಕೋಟಿ ರೂ.ಗಳೆಂದು ಅಂದಾಜಸಲಾಗಿದೆ. ಡಿಆರ್‌ಐ ಅಧಿಕಾರಿಗಳು ಆರೋಪಿಯನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆಗೊಳಪಡಿಸಿ ಮಾಹಿತಿಗಳನ್ನು ಪಡೆದುಕೊಳ್ಳುತ್ತಿದ್ದಾರೆ.

# ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಝಡ್ ಪ್ಲಸ್ ಸೆಕ್ಯುರಿಟಿ



**ನವದೆಹಲಿ:** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಭದ್ರತೆ ಹೆಚ್ಚಳವಾಗಿದ್ದು, ಕಳೆದ ಮೂರು ದಿನದಿಂದ ಖರ್ಗೆಗೆ ಚಿ+ ಸೆಕ್ಯುರಿಟಿ ನೀಡಲಾಗಿದೆ. ಸ್ಟೇಟ್ ಸೆಕ್ಯುರಿಟಿ ಜೊತೆಗೆ ಸಿಆರ್ ಪಿಎಫ್ ಚಿ+ ಸಕ್ಯೂರಿಟಿ ಸಹ ನಿಯೋಜನೆ ಮಾಡಲಾಗಿದೆ. ಹೆಚ್ಚುವರಿಯಾಗಿ 8 ಜನ ಸಿಆರ್‌ಪಿಎಫ್ (CRPF) ಗನ್ ಮ್ಯಾನ್ ಗಳ ನಿಯೋಜಿಸಲಾಗಿದೆ.

ಇತ್ತೀಚೆಗೆ ಮಲ್ಲಿಕಾರ್ಜುನ ಖರ್ಗೆಗೆ ಬೆದರಿಕೆ ಕರೆ ಬಂದಿದೆ ಎನ್ನಲಾಗಿದೆ. ಆ ಕಾರಣಕ್ಕೆ ಕಳೆದ ಮೂರು ದಿನದಿಂದ Z+ ಸೆಕ್ಯುರಿಟಿ ನೀಡಲಾಗಿದೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಝಡ್ ಪ್ಲಸ್ ಸೆಕ್ಯುರಿಟಿ

ಬೆಂಗಳೂರು ನಿವಾಸಕ್ಕೂ ದ+ ಸೆಕ್ಯುರಿಟಿ ನಿಯೋಜಿಸಲಾಗಿದೆ. ಹೆಚ್ಚುವರಿಯಾಗಿ 8 ಜನ ಸಿಆರ್ ಪಿಎಫ್ ಗನ್ ಮ್ಯಾನ್ ಗಳ ನಿಯೋಜನೆ ಮಾಡಲಾಗಿದೆ. ಇತ್ತೀಚೆಗೆ ಮಲ್ಲಿಕಾರ್ಜುನ ಖರ್ಗೆಗೆ ಜೀವ ಬೆದರಿಕೆ ಬಂದಿದೆ ಎನ್ನಲಾಗಿದೆ. ಆ ಕಾರಣಕ್ಕೆ ಚಿ+ ಸೆಕ್ಯುರಿಟಿ ನೀಡಲಾಗಿದೆ ಎಂದು ತಿಳಿದುಬಂದಿದೆ.

# ಹಳೇ ಹುಬ್ಬಳ್ಳಿ ಗಲಭೆ ಆರೋಪಿಗಳ ಬಿಡುಗಡೆಗೆ ಕಾಂಗ್ರೆಸ್ ಸಹಕರಿಸಿದೆ



**ಹುಬ್ಬಳ್ಳಿ:** ಕಾಂಗ್ರೆಸ್ಗೆ ಮೊದಲಿನಿಂದಲೂ ಗಲಭೆ ಆರೋಪಿಗಳ ಪರ ಸಹಾನುಭೂತಿ ಇದ್ದುದ್ದರಿಂದ ಹಳೇ ಹುಬ್ಬಳ್ಳಿ ಗಲಭೆಯ ಆರೋಪಿಗಳ ಬಿಡುಗಡೆಗೆ ಸಹಕರಿಸಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಆರೋಪಿಸಿದ್ದಾರೆ. ಸುದ್ದಿಗಾರರರೊಂದಿಗೆ ಮಾತನಾಡಿದ ಸಚಿವರು, ಹಳೇ ಹುಬ್ಬಳ್ಳಿ ಗಲಭೆ ಪ್ರಕರಣದಲ್ಲಿ ಹೈಕೋರ್ಟ್ 111 ಜನ ಆರೋಪಿಗಳಿಗೆ ಜಾಮೀನು ನೀಡಿದ್ದು, ಇದಕ್ಕೆ ರಾಜ್ಯ ಕಾಂಗ್ರೆಸ್ ಸರ್ಕಾರದ ಬೇಜವಾಬ್ದಾರಿಯೇ ಕಾರಣ ಎಂದು ದೂರಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪಿಗಳ ವಿರುದ್ಧ ಸರ್ಕಾರ ಸರಿಯಾದ ವಾದ ಮಂಡಿಸದೇ ಇರುವುದೇ ಹೈಕೋರ್ಟ್ ಜಾಮೀನು ನೀಡಲು ಕಾರಣವಾಗಿದೆ ಎಂದು ಅಭಿಪ್ರಾಯಿಸಿದ್ದಾರೆ.

ಬಿಡುಗಡೆಗೆ ಕಾಂಗ್ರೆಸ್ ಸರ್ಕಾರ ಯತ್ನಿಸುತ್ತಿತ್ತು. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಬಂದಾಗಿನಿಂದಲೂ ಆರೋಪಿಗಳ ಬಿಡುಗಡೆಗಾಗಿ ಲೆಟರ್ ಕೊಡುವುದು, ಒತ್ತಾಯ ಮಾಡುವುದು ನಡದೇ ಇತ್ತು ಎಂದು ಆರೋಪಿಸಿದ್ದಾರೆ. ಹಳೇ ಹುಬ್ಬಳ್ಳಿ ಗಲಭೆ ಪ್ರಕರಣದಲ್ಲಿ ಭಾಗಿಯಾದ ಆರೋಪಿಗಳ ಮೇಲೆ ದೇಶ ದ್ರೋಹದ ಆರೋಪಗಳಿದ್ದವು. ಕಾಂಗ್ರೆಸ್ ಸರ್ಕಾರ ಸರಿಯಾಗಿ ವಾದ ಮಂಡಿಸದೆ ಬಿಡುಗಡೆಗೊಳಿಸಿದಂತಾಗಿದೆ. ಮುಂದಿನ ದಿನಗಳಲ್ಲಿ ಇದರ ಪರಿಣಾಮವನ್ನು ಸರ್ಕಾರ ಅನುಭವಿಸಲಿದೆ ಎಂದು ಎಚ್ಚರಿಸಿದ್ದಾರೆ. ಹಳೇ ಹುಬ್ಬಳ್ಳಿ ಗಲಭೆ ಪ್ರಕರಣದಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಮೇಲೆ ಹಲ್ಲೆ ನಡೆಸಿದ್ದಲ್ಲದೆ, ಕಲ್ಲು ತೂರಾಟ ಮಾಡಿ ಪೊಲೀಸ್ ವಾಹನಗಳು ಜಖಂಗೊಳಿಸಿ, ಸಾರ್ವಜನಿಕ ಆಸ್ತಿಪಾಸ್ತಿಗೂ ಹಾನಿಗೊಳಿಸಿದ್ದರು. ಹೀಗಿದ್ದರೂ ಕಾಂಗ್ರೆಸ್ ಸರ್ಕಾರ ಇವರ ಬಿಡುಗಡೆಗೆ ಸಹಕರಿಸಿದೆ ಎಂದು ಆರೋಪಿಸಿದ್ದಾರೆ.

# ಪಟಾಕಿ ಸ್ಫೋಟ 10 ಮಂದಿ ಸಾವು

**ವಿರುದುನಗರ(ತಮಿಳುನಾಡು):** ವಿರುದುನಗರ ಜಿಲ್ಲೆಯ ವೆಂಬಕೊಟ್ಟೈ ಬಳಿಯ ರಾಮುತೇವನಪಟ್ಟಿಯಲ್ಲಿರುವ ಪಟಾಕಿ ಘಟಕದ ವಿನ್ನರ್‌ನಲ್ಲಿ ಇಂದು ಹಠಾತ್ ಸ್ಫೋಟ ಸಂಭವಿಸಿ 10 ಮಂದಿ ಸಾವನ್ನಪ್ಪಿ ಹಲವರು ಗಾಯಗೊಂಡಿದ್ದಾರೆ. ತೀವ್ರ ಸುಟ್ಟಗಾಯಗಳಿಂದ ಬಳಲುತ್ತಿದ್ದ ಕಾರ್ಮಿಕರನ್ನು ಶಿವಕಾಶಿ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು ಅವರಲ್ಲಿ ಹಲವರ ಸ್ಥಿತಿ ಗಂಭೀರವಾಗಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಸಾಧ್ಯತೆಯಿದೆ.

ಈ ಘಟಕವನ್ನು ವಿಜಯ್ ಒಡೆತನದ ಖಾಸಗಿ ಪಟಾಕಿ ಕಾರ್ಖಾನೆ ಎಂದು ಹೇಳಲಾಗಿದ್ದು,ಇದರ ಒಳಗೆ ಸಿಕ್ಕಿಕೊಂಡಿರುವ ಕಾರ್ಮಿಕರನ್ನು ರಕ್ಷಣೆ ಮಾಡಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಸ್ಫೋಟದ ಬಳಿಕ ಹೊತ್ತಿ ಉರಿಯುತ್ತಿರುವ ಪಟಾಕಿ ತಯಾರಿಕಾ ಕಾರ್ಖಾನೆ ಬೆಂಕಿ ನಂದಿಸಲು ಪೊಲೀಸರು, ಅಗ್ನಿಶಾಮಕ ಸಿಬ್ಬಂದಿಗಳು ಧಾವಿಸಿದ್ದಾರೆ. ಸ್ಫೋಟದ ನಂತರ ಸುಮಾರು 3 ಕಟ್ಟಡಗಳು ನೆಲಸಮವಾಗಿವೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಸ್ಫೋಟಕ್ಕೆ ಕಾರಣ ಏನು? ಎಂಬ ಬಗ್ಗೆ ಯಾವುದೇ ಮಾಹಿತಿ ಬಂದಿಲ್ಲ.

ಘಟನೆಯಲ್ಲಿ ಹಲವರು ಗಾಯಗೊಂಡಿದ್ದು, ಅವರನ್ನು ಶಿವಕಾಶಿ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲು ಮಾಡಲಾಗಿದೆ. ಅಪಘಾತದ ಸ್ಥಳದಲ್ಲಿ ಅಗ್ನಿಶಾಮಕ ದಳ ಮತ್ತು ರಕ್ಷಣಾ ಸಿಬ್ಬಂದಿ ತೀವ್ರ ಕಾರ್ಯಾಚರಣೆಯಲ್ಲಿ ತೊಡಗಿದೆ. ಎಂದಿನಂತೆ ಇಂದು ಸಹ ಕಾರ್ಖಾನೆಗೆ ಆಗಮಿಸಿದ್ದ ಕಾರ್ಮಿಕರು, ತಮ್ಮ ತಮ್ಮ ಕೆಲಸದಲ್ಲಿ ತೊಡಗಿದ್ದರು. ಈ ವೇಳೆ ಔಷಧಿ ಮಿಶ್ರಣದಲ್ಲಿ ಘರ್ಷಣೆ ಉಂಟಾಗಿ ಏಕಾಏಕಿ ಸ್ಫೋಟಗೊಂಡಿದೆ ಎನ್ನಲಾಗಿದೆ. ಸ್ಫೋಟದ ತೀವ್ರತೆಗೆ ಪಟಾಕಿ ಕಾರ್ಖಾನೆಯ ಜೊತೆಗೆ ನಾಲ್ಕು ಕಟ್ಟಡಗಳು ಸಹ ನಾಶವಾಗಿವೆ. ಘಟನೆ ಬಳಿಕ ಸ್ಥಳದಿಂದ ಹಲವರು ಓಡಿ ಹೋಗುತ್ತಿರುವುದು ಕಂಡು ಬಂದಿದೆ. ಪೊಲೀಸರು ಹಾಗೂ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ದುರ್ಘಟನೆಯಲ್ಲಿ ಏಳು ಜನರು ಸ್ಥಳದಲ್ಲೇ ಮೃತಪಟ್ಟರೆ, ಮೂವರು ಆಸ್ಪತ್ರೆಗೆ ಸಾಗಿಸುವ ಮಾರ್ಗ ಮಧ್ಯೆ ಕೊನೆಯುಸಿರೆಳೆದಿದ್ದಾರೆ. ಸುದ್ದಿ ತಿಳಿದು ಎಐಎಡಿಎಂಕೆ ನಾಯಕ ಎಡಪ್ಪಾಡಿ ಪಳನಿಸಾಮಿ ಮತ್ತು ಎಎಂಎಂಕೆ ಪ್ರಧಾನ ಕಾರ್ಯದರ್ಶಿ ಟಿಟಿವಿ ದಿನಕರನ್ ಅವರು ಸಾಮಾಜಿ ಜಾಲತಾಣದಲ್ಲಿ ಸಂತಾಪ ಸೂಚಿಸಿದ್ದಾರೆ.

# ಲೋಕಸಭೆ ಚುನಾವಣೆಗೆ ಕಮಲ ಕಹಳೆ




**ಬೆಂಗಳೂರು:** ಮುಂದಿನ ಲೋಕಸಭಾ ಚುನಾವಣೆಯ ದ್ವಿಗ್ವಿಜಯಕ್ಕೆ ರೂಪಿಸಬೇಕಾದ ರಣತಂತ್ರಗಳ ಬಗ್ಗೆ ದೆಹಲಿಯಲ್ಲಿಂದು ಬಿಜೆಪಿಯ ರಾಷ್ಟ್ರೀಯ ಕಾರ್ಯಕಾರಿಣಿ ಹಾಗೂ ಸಮಾವೇಶದಲ್ಲಿ ಸುದೀರ್ಘ ಸಮಾಲೋಚನೆಗಳು ನಡೆದಿವೆ.ನವದೆಹಲಿಯ ಭಾರತ್ ಮಂಟಪ್‌ನಲ್ಲಿಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಅವರ ಅಧ್ಯಕ್ಷತೆಯಲ್ಲಿ ಪ್ರಧಾನಿ ನರೇಂದ್ರ ಮೋದಿಯ ಉಪಸ್ಥಿತಿಯಲ್ಲಿ 2 ದಿನಗಳ ಬಿಜೆಪಿಯ ರಾಷ್ಟ್ರೀಯ ಕಾರ್ಯಕಾರಿಣಿಯ ಸಭೆ ನಡೆದಿದ್ದು, ಸಭೆಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಹ್ಯಾಟ್ರಿಕ್ ಗೆಲುವು ಸಾಧಿಸಿ ಮತ್ತೆ ಕೇಂದ್ರದಲ್ಲಿ ಅಧಿಕಾರದ ಗದ್ದುಗೆ ಏರಲು ಏನೆಲ್ಲಾ ರಣತಂತ್ರಗಳನ್ನು ರೂಪಿಸಬೇಕು ಎಂಬ ಬಗ್ಗೆ ಪ್ರಮುಖವಾಗಿ ಚರ್ಚೆ ನಡೆದಿದೆ.ಕಳೆದ 10 ವರ್ಷಗಳಲ್ಲಿ ಪ್ರಧಾನಿ ನರೇಂದ್ರಮೋದಿ ನೇತೃತ್ವದ ಕೇಂದ್ರ ಸರ್ಕಾರದ ಸಾಧನೆಗಳ ಪರಾಮರ್ಶೆಯು ನಡೆದಿದ್ದು, ಕೇಂದ್ರ ಸರ್ಕಾರದ ಸಾಧನೆಗಳನ್ನು ಮನೆ ಮನೆಗೆ ತಲುಪಿಸುವ ನಿಟ್ಟಿನಲ್ಲಿ ರೂಪಿಸಬೇಕಾದ ಕಾರ್ಯಕ್ರಮಗಳ ಬಗ್ಗೆಯೂ ಚರ್ಚೆಗಳು ನಡೆದಿವೆ.ಲೋಕಸಭಾ ಚುನಾವಣೆಯ ಹೊಸ್ತಿಲಲ್ಲಿ ನಡೆದಿರುವ ಬಿಜೆಪಿಯ ರಾಷ್ಟ್ರೀಯ ಕಾರ್ಯಕಾರಿಣಿ ಅತ್ಯಂತ ಮಹತ್ವದ್ದಾಗಿದ್ದು, ಚುನಾವಣೆ ಗೆಲುವಿನ ಕಾರ್ಯತಂತ್ರಗಳು ಕಾರ್ಯಕಾರಿ ಣಿಯಲ್ಲಿ ರೂಪಿತವಾಗಲಿವೆ.ಈ ಎರಡು ದಿನಗಳ ಕಾರ್ಯಕಾರಿಣಿ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್‌ಸಿಂಗ್ ಸೇರಿದಂತೆ ಎಲ್ಲ ಕೇಂದ್ರ ಸಚಿವರು, ಬಿಜೆಪಿಯ ರಾಷ್ಟ್ರೀಯ ಪದಾಧಿಕಾರಿಗಳು, ಕಾರ್ಯಕಾರಿಣಿ ಸದಸ್ಯರುಗಳು, ರಾಷ್ಟ್ರೀಯ ಮಂಡಳಿ ಸದಸ್ಯರುಗಳು, ಬಿಜೆಪಿ ಆಡಳಿತವಿರುವ ರಾಜ್ಯಗಳ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಎಲ್ಲ ರಾಜ್ಯಗಳ ಬಿಜೆಪಿ ಅಧ್ಯಕ್ಷರುಗಳು, ಮಾಜಿ ಮುಖ್ಯಮಂತ್ರಿಗಳು, ಹಿರಿಯ ಮುಖಂಡರುಗಳು ಸೇರಿದಂತೆ 11 ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದು, ಎರಡು ದಿನ ಲೋಕಸಭಾ ಚುನಾವಣೆಯ ತಯಾರಿ ಬಗ್ಗೆ ಸುದೀರ್ಘ ಚರ್ಚೆ ನಡೆದಿದೆ.ಈ ಕಾರ್ಯಕಾರಿಣಿಯ ಕೊನೆಯ ದಿನವಾದ ನಾಳೆ ರಾಜಕೀಯ, ಆರ್ಥಿಕ, ಸಾಮಾಜಿಕ ವಿಚಾರಗಳಿಗೆ ಸಂಬಂಧಿಸಿದಂತೆ ನಿರ್ಣಯಗಳನ್ನು ಅಂಗೀಕರಿಸ ಲಾಗುತ್ತಿದ್ದು, ಜತೆಗೆ ರಾಮಮಂದಿರಕ್ಕೆ ಸಂಬಂಧಿಸಿದಂತೆಯೂ ವಿಶೇಷ ನಿರ್ಣಯ ಅಂಗೀಕಾರವಾಗಲಿದೆ.

# ಕುಪೇಂದ್ರರೆಡ್ಡಿ ಗೆಲುವಿಗೆ ಜೆಡಿಎಸ್-ಬಿಜೆಪಿ ರಣತಂತ್ರ

ಬೆಂಗಳೂರು: ವಿಧಾನಸಭೆಯಿಂದ ರಾಜ್ಯಸಭೆಗೆ ಫೆ.27ರಂದು ನಡೆಯುವ ಚುನಾವಣೆಯಲ್ಲಿ ಮಿತ್ರ ಪಕ್ಷಗಳ ಇಬ್ಬರು ಅಭ್ಯರ್ಥಿಗಳ ಗೆಲುವಿನ ಕಾರ್ಯತಂತ್ರದ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಗಂಭೀರ ಚರ್ಚೆ ನಡೆಸಿದ್ದಾರೆ. ನಿನ್ನೆ ಖಾಸಗಿ ಹೋಟೆಲ್ನಲ್ಲಿ ಸಭೆ ಸೇರಿದ್ದ ಉಭಯ ಪಕ್ಷಗಳ ನಾಯಕರು ಇಬ್ಬರು ಅಭ್ಯರ್ಥಿಗಳ ಗೆಲುವಿನ ಸಾಧ್ಯಸಾಧ್ಯತೆಗಳ ಬಗ್ಗೆ ಸಮಾಲೋಚನೆ ನಡೆಸಿದ್ದಾರೆ.

ಬಿಜೆಪಿ ಅಭ್ಯರ್ಥಿ ನಾರಾಯಣ ಸಾ ಕೆ.ಬಾಂಡಗೆ ಅವರು ಗೆಲುವು ಸುಲಭವಾಗಲಿದೆ. ಅವರ ಗೆಲುವಿಗೆ ಅಗತ್ಯವಿರುವ 45 ಶಾಸಕರ ಮತಗಳನ್ನು ಚಲಾಯಿಸುವುದು, ಉಳಿದ ಬಿಜೆಪಿ ಶಾಸಕರ ಹೆಚ್ಚುವರಿ ಮತಗಳನ್ನು ಕುಪೇಂದ್ರ ರೆಡ್ಡಿ ಅವರಿಗೆ ಚಲಾಯಿಸಲು ನಿರ್ಧರಿಸಲಾಗಿದೆ. ಆದರೂ ಕುಪೇಂದ್ರ ರೆಡ್ಡಿ ಅವರ ಗೆಲುವಿಗೆ ಕೊರತೆಯಾಗುವ ಮತಗಳನ್ನು ಗಳಿಸುವುದು ಹೇಗೆ ಎಂಬ ಬಗ್ಗೆ ಚರ್ಚೆ ನಡೆಸಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ.ಕುಮಾರಸ್ವಾಮಿ, ಬಸವರಾಜ ಬೊಮ್ಮಾಯಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಅಭ್ಯರ್ಥಿ ಕುಪೇಂದ್ರ ರೆಡ್ಡಿ ಸೇರಿದಂತೆ ಉಭಯ ಪಕ್ಷಗಳ ನಾಯಕರು ಖಾಸಗಿ ಹೋಟೆಲ್ನಲ್ಲಿ ಸಭೆ ಸೇರಿ ಚರ್ಚಿಸಿದ್ದಾರೆ. ಕಾಂಗ್ರೆಸ್ನಲ್ಲಿರುವ ಅಸಮಾಧಾನಿತ ಶಾಸಕರ ಮತ ಪಡೆಯುವುದು ಹೇಗೆ? ಪಕ್ಷೇತರ ಶಾಸಕರ ಮತ ಪಡೆಯುವುದು ಸೇರಿದಂತೆ

# ಎಲ್ಲ ಗ್ರಾ.ಪಂ.ಗಳಲ್ಲಿ ಬಜೆಟ್ ಮಂಡನೆ ಕಡ್ಡಾಯ



**ಬೆಂಗಳೂರು:** ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳು ಬಜೆಟ್ ಮಂಡಿಸುವುದನ್ನು ಕಡ್ಡಾಯಗೊಳಿಸಲಾಗಿದೆ. ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳು ಮುಂದಿನ ಆರ್ಥಿಕ ವರ್ಷದಲ್ಲಿ ಬಜೆಟ್‌ನ್ನು ಕಡ್ಡಾಯವಾಗಿ ಮಂಡಿಸುವಂತೆ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ ಖರ್ಗೆ ಅವರು ರಾಜ್ಯದ ಎಲ್ಲ ಗ್ರಾ.ಪಂ. ಅಧ್ಯಕ್ಷರಿಗೆ ಪತ್ರ ಬರೆದು ಸೂಚನೆ ನೀಡಿದ್ದಾರೆ.

ರಾಜ್ಯದ ಎಲ್ಲ ಗ್ರಾಮ ಪಂಚಾಯ್ತಿಗಳು ಮುಂದಿನ ಆರ್ಥಿಕ ವರ್ಷದಲ್ಲಿ ವಿವಿಧ ಬಾಬ್ತುಗಳಡಿ ಲಭ್ಯವಾಗುವ ಅನುದಾನ ಹಾಗೂ ಕೈಗೊಳ್ಳಬೇಕಾದ ಅಭಿವೃದ್ಧಿ ಯೋಜನೆಗಳನ್ನು ಒಳಗೊಂಡಂತೆ ಗ್ರಾಮ ಪಂಚಾಯ್ತಿಯ ಬಜೆಟ್‌ನ್ನು ಕಡ್ಡಾಯವಾಗಿ ತಯಾರಿಸಿ ಬರುವ ಮಾರ್ಚ್ 10 ರೊಳಗೆ ಪಂಚಾಯ್ತಿ ಸಭೆಯಲ್ಲಿ ಮಂಡಿಸಿ ಅನುಮೋದನೆ ಪಡೆಯಬೇಕು ಎಂದು ಸಚಿವ ಪ್ರಿಯಾಂಕ ಖರ್ಗೆ ಪಂಚಾಯ್ತಿ ಅಧ್ಯಕ್ಷರುಗಳಿಗೆ ಬರೆದಿರುವ ಪತ್ರದಲ್ಲಿ ತಿಳಿಸಿದ್ದಾರೆ. ರಾಜ್ಯ ಹಾಗೂ ಕೇಂದ್ರ ಸರ್ಕಾರ ನೀಡುವ ಶಾಸನ ಬದ್ಧ ಅನುದಾನ, ವಿವಿಧ ಯೋಜನೆಗಳಡಿ ದೊರೆಯುವ ಅನುದಾನದ ಜತೆಗೆ ಸ್ವಂತ ಸಂಪನ್ಮೂಲ ಕ್ರೂಢೀಕರಣ ಸೇರಿದಂತೆ ಎಲ್ಲ ಮೂಲಗಳ ಸಂಪನ್ಮೂಲ ಕ್ರೂಢೀಕರಿಸಿ ಬಜೆಟ್ ಸಿದ್ದಪಡಿಸಿ ಪಂಚಾಯ್ತಿಗಳ ಸಭೆಯಲ್ಲಿ ಅನುಮೋದನೆ ಪಡೆದುಕೊಳ್ಳಬೇಕು ಎಂದು ಅವರು ಅಧ್ಯಕ್ಷರುಗಳಿಗೆ ಬರೆದಿರುವ ಪತ್ರದಲ್ಲಿ ಹೇಳಿದ್ದಾರೆ.

# ಕರಾವಳಿಯಿಂದ 'ಲೋಕ ಕಹಳೆ' ಕಾಂಗ್ರೆಸ್ ಚಾಲನೆ

**ಬೆಂಗಳೂರು:** ಲೋಕಸಭೆ ಚುನಾವಣೆಗೆ ಕಾರ್ಯಕರ್ತರ ರಾಜ್ಯಮಟ್ಟದ ಸಮಾವೇಶದ ಮೂಲಕ ಕಾಂಗ್ರೆಸ್ ರಣಕಹಳೆ ಮೊಳಗಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಂಪುಟದ ಎಲ್ಲಾ ಸಚಿವರು, ಶಾಸಕರು, ಕೆಪಿಸಿಸಿ ಪದಾಕಾರಿಗಳು, ಎಐಸಿಸಿ ಕಾರ್ಯದರ್ಶಿಗಳು, ಪ್ರಮುಖ ನಾಯಕರು ರಾಜ್ಯಮಟ್ಟದ ಸಮಾವೇಶದಲ್ಲಿ ಪಾಲ್ಗೊಂಡಿದ್ದರು.

ಕೋಮು ಸೂಕ್ಷ್ಮ ಹಾಗೂ ಬಿಜೆಪಿಯ ಭದ್ರಕೋಟೆಯಾಗಿರುವ ಕರಾವಳಿ ಭಾಗದಿಂದಲೇ ಕಾಂಗ್ರೆಸ್ ತನ್ನ ಚುನಾವಣಾ ಪ್ರಚಾರಕ್ಕೆ ಚಾಲನೆ ನೀಡಿದೆ. ಕಳೆದ ತಿಂಗಳೇ ನಡೆಯಬೇಕಿದ್ದ ಬೃಹತ್ ಕಾರ್ಯಕ್ರಮ ಕೆಲವು ಕಾರಣಗಳಿಂದ ಮುಂದೂಡಿಕೆಯಾಗಿತ್ತು. ಬಜೆಟ್ ಮಂಡನೆ ಬಳಿಕ ನಡೆಯುತ್ತಿರುವ ಈ ಸಮಾವೇಶ ಕಾಂಗ್ರೆಸ್ಗೆ ಆನೆ ಬಲ ತಂದುಕೊಟ್ಟಂತಾಗಿದೆ. ರಾಜ್ಯದ ಎಲ್ಲಾ ಭಾಗಗಳಿಂದಲೂ ಪಕ್ಷದ ಕಾರ್ಯಕರ್ತರು ಸಮಾವೇಶಕ್ಕಾಗಿ ಮಂಗಳೂರಿಗೆ ಆಗಮಿಸಿದ್ದರು. ಕಾಂಗ್ರೆಸ್ ಸರ್ಕಾರ ರಾಜ್ಯದ ಪ್ರತಿಯೊಂದು ಬಡ ಕುಟುಂಬಕ್ಕೂ ವರ್ಷಕ್ಕೆ 50 ರಿಂದ 55 ಸಾವಿರ ರೂ.ಗಳಷ್ಟು ಆರ್ಥಿಕ ನೆರವನ್ನು ನೀಡುತ್ತಿದೆ. ಇದಕ್ಕಾಗಿ ಬಜೆಟ್ನಲ್ಲಿ 52 ಸಾವಿರ ಕೋಟಿ ರೂ.ಗಳನ್ನು ಮೀಸಲಿಡಲಾಗಿದೆ.

# ಹುಂಡಿ ಹಣ ದೇವಾಲಯಗಳ ಅಭಿವೃದ್ಧಿಗೆ ಮಾತ್ರ ಸೀಮಿತ



**ಬೆಂಗಳೂರು:** ದೇವಸ್ಥಾನಗಳಿಂದ ಸಂಗ್ರಹಿಸಿದ ಹಣವನ್ನು ಅಲ್ಪಸಂಖ್ಯಾತರ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಖರ್ಚು ಮಾಡುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ ಪ್ರಮುಖರೊಬ್ಬರಿಗೆ ಮುಜರಾಯಿ ಹಾಗೂ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ತಿರುಗೇಟು ನೀಡಿದ್ದು, ಚುನಾವಣೆ ಕಾಲದಲ್ಲಿ ಈ ರೀತಿ ಜನರನ್ನು ದಾರಿ ತಪ್ಪಿಸುವುದು ಪ್ರಯೋಜನಕಾರಿಯಲ್ಲ ಎಂದು ಹೇಳಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪ್ರಮುಖರೊಬ್ಬರು ಪೋಸ್ಟ್ ಮಾಡಿ, ಕರ್ನಾಟಕ ಸರ್ಕಾರ ತನ್ನ ಬಜೆಟ್ನಲ್ಲಿ 330 ಕೋಟಿ ರೂ. ಗಳನ್ನು ವಕ್ ಆಸ್ತಿಗಳ ಅಭಿವೃದ್ಧಿ, ಹಜ್ ಭವನಗಳ ನಿರ್ಮಾಣ ಮತ್ತು ಕ್ರಿಶ್ಚಿಯನ್ ಸಮುದಾಯದ ಅಭಿವೃದ್ಧಿಗೆ ನೀಡಿದೆ. ಕರ್ನಾಟಕ ರಾಜ್ಯಕ್ಕೆ ಎ ಮತ್ತು ಬಿ ದರ್ಜೆಯ ದೇವಸ್ಥಾನಗಳಿಂದ 400 ಕೋಟಿ ಸೇರಿ 450 ಕೋಟಿ ರೂ.ಗೂ ಹೆಚ್ಚು ಆದಾಯ ಧಾರ್ಮಿಕ ದತ್ತಿ ಇಲಾಖೆಗೆ ಬರುತ್ತಿದೆ. ಇದಕ್ಕಾಗಿಯೇ ಹಿಂದೂ ದೇವಾಲಯಗಳನ್ನು ಸರ್ಕಾರದಿಂದ ಮುಕ್ತಗೊಳಿಸುವ ಮಸೂದೆಗೆ ವಿರೋಧ ವ್ಯಕ್ತವಾಗುತ್ತಿದೆ. ಇದು ಶೇ.101 ರಷ್ಟು ಜಾತ್ಯತೀತತೆ ಎಂದು ಲೇವಡಿ ಮಾಡಿದ್ದರು. ಜೊತೆಗೆ ದಕ್ಷಿಣ ಕನ್ನಡ, ಉಡುಪಿ, ಮಂಗಳೂರು, ಉತ್ತರ ಕನ್ನಡ, ತುಮಕೂರಿನ ಜಿಲ್ಲೆಗಳ ದೇವಾಲಯಗಳ ಸಂಖ್ಯೆ ಮತ್ತು ಅದರಿಂದ ಬರುತ್ತಿರುವ ಆದಾಯದ ಪಟ್ಟಿಯನ್ನು ಲಗತ್ತಿಸಿದ್ದರು. ಇದಕ್ಕೆ ತೀಕ್ಷ್ಣವಾಗಿ ಪ್ರತಿಕ್ರಿಯಿಸಿರುವ ರಾಮಲಿಂಗಾರೆಡ್ಡಿ, ಜವಾಬ್ದಾರಿಯುತ ಸ್ಥಾನದಲ್ಲಿರುವವರು ಕನ್ನಡಿಗರು ಹಾಗೂ ದೇಶವನ್ನು ಈ ರೀತಿ ದಾರಿ ತಪ್ಪಿಸುವುದು ಸರಿಯಲ್ಲ ಎಂದು ಆಕ್ಷೇಪಿಸಿದ್ದಾರೆ. ನಾನು ಮತ್ತೊಮ್ಮೆ ಪುನರುಚ್ಚರಿಸುತ್ತಿದ್ದೇನೆ, ಧಾರ್ಮಿಕ ದತ್ತಿ ಇಲಾಖೆಯಿಂದ ಸ್ವೀಕರಿಸಲಾಗುತ್ತಿರುವ ಹಣವನ್ನು ಹಿಂದೂ ದೇವಾಲಯಗಳಿಗೆ ಮಾತ್ರವೇ ಬಳಕೆ ಮಾಡಲಾಗುತ್ತಿದೆ. ಒಂದು ಪೈಸೆಯನ್ನೂ ಅನ್ಯ ಧರ್ಮೀಯ ಧಾರ್ಮಿಕ ಕೇಂದ್ರಗಳಿಗೆ ಬಳಸುತ್ತಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ದೇವಸ್ಥಾನಗಳಿಂದ ಸಂಗ್ರಹವಾಗುವ ಆದಾಯವನ್ನು ಆಯಾ ದೇವಸ್ಥಾನಗಳ ಅಭಿವೃದ್ಧಿಗಾಗಿಯೇ ಬಳಸಲಾಗುತ್ತಿದೆ. ಅಪಪ್ರಚಾರಗಳು ರಾಜಕೀಯ ಷಡ್ಯಂತ್ರವಾಗಿವೆ. ಲೋಕಸಭೆ ಚುನಾವಣೆ ಸಮೀಪಿಸುತ್ತಿರುವಂತೆ ಬಿಜೆಪಿಯ ಮಿತ್ರರು ಈ ರೀತಿ ತಪ್ಪು ದಾರಿಗೆಳೆಯುವ ಪ್ರಯತ್ನ ಮಾಡುತ್ತಿದ್ದಾರೆ.

ಕಳೆದ ವಿಧಾನಸಭೆ ಚುನಾವಣೆಯಲ್ಲೂ ಇಂತಹದ್ದೇ ಪ್ರಯತ್ನಗಳ ಮೂಲಕ ಹಿಂದುತ್ವದ ನಾಟಕವಾಡಲಾಗಿತ್ತು. ಆದರೆ ರಾಜ್ಯದ ಜನ ಸತ್ಯ ತಿಳಿದುಕೊಂಡಿದ್ದರು. ಅಪಪ್ರಚಾರಗಳಿಗೆ ಕಿವಿಗೊಡಲಿಲ್ಲ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಮಂಡಿಸಿದ ಬಜೆಟ್ ಜನಸ್ನೇಹಿಯಾಗಿದೆ. ಬಿಜೆಪಿ ಮತ್ತು ವಿಪಕ್ಷಗಳಿಗೆ ಬಜೆಟ್ ವಿರೋಧಿಸಲು ಸಕಾರಣಗಳು ಸಿಗುತ್ತಿಲ್ಲ. ಅದಕ್ಕಾಗಿ ಇಂತಹ ನಾಟಕೀಯ ನಡವಳಿಕೆಯನ್ನು ಅನುಸರಿಸುತ್ತಿದ್ದಾರೆ ಎಂದು ರಾಮಲಿಂಗಾರೆಡ್ಡಿ ಕಿಡಿಕಾರಿದ್ದಾರೆ.

# ಫೆ. 25 ರಾಷ್ಟ್ರೀಯ ಐಕ್ಯತಾ ಸಮಾವೇಶ

**ಬೆಂಗಳೂರು:** ಬೆಂಗಳೂರಿನಲ್ಲಿ ಈ ತಿಂಗಳ 25 ರಂದು ಸಂವಿಧಾನ ಮತ್ತು ರಾಷ್ಟ್ರೀಯ ಐಕ್ಯತಾ ಸಮಾವೇಶ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ವಿಧಾನಸೌಧದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿ ರಾಷ್ಟ್ರೀಯ ಐಕ್ಯತಾ ಸಮಾವೇಶದ ಬಗ್ಗೆ ವಿವರ ನೀಡಿದ ಅವರು, ಭಾರತದ ಸಂವಿಧಾನ ಜಾರಿಗೆ ಬಂದು 75 ವರ್ಷಗಳಾಗಿವೆ. ಅಮೃತ ಉತ್ಸವದ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂಬ ತೀರ್ಮಾನ ಮಾಡಿ 31 ಜಿಲ್ಲೆಗಳಲ್ಲಿ ಸಂವಿಧಾನ ಜಾಥಾ ಮಾಡುವ ಕಾರ್ಯಕ್ರಮವನ್ನು ಜನವರಿ 26 ರಿಂದ ಹಮ್ಮಿಕೊಳ್ಳಲಾಗಿತ್ತು. ಈ ಜಾಥಾ ಈ ತಿಂಗಳ 25ಕ್ಕೆ ಅಂತ್ಯವಾಗಲಿದ್ದು, ಬೆಂಗಳೂರಿನಲ್ಲಿ ಈ ತಿಂಗಳ 24 ಮತ್ತು 25 ರಂದು ಸಂವಿಧಾನ ಮತ್ತು ರಾಷ್ಟ್ರೀಯ ಐಕ್ಯತಾ ಸಮಾವೇಶ ನಡೆಯಲಿದೆ ಎಂದರು. ಈ ಸಮಾವೇಶದಲ್ಲಿ ಖ್ಯಾತ ಚಿಂತಕರುಗಳಾದ ಪ್ರೊ. ಅಸುತೋಷ್, ಪ್ರಶಾಂತ್ ಭೂಷಣ್, ಮೇದ ಪಾಟ್ಕರ್ ಸೇರಿದಂತೆ ಅನೇಕ ಜನ ಮೇಧಾವಿಗಳು, ಸಾಮಾಜಿಕ ಹೋರಾಟಗಾರರು ಪಾಲ್ಗೊಂಡು ಸಂವಿಧಾನದ ಬಗ್ಗೆ ಬೆಳಕು ಚೆಲ್ಲುವ ಕೆಲಸ ಮಾಡಲಿದ್ದಾರೆ ಎಂದರು. ಫೆ. 24 ರಂದು ರಾಷ್ಟ್ರೀಯ ಐಕ್ಯತಾ ಸಮಾವೇಶಕ್ಕೆ ಚಾಲನೆ ನೀಡಲಾಗುತ್ತಿದ್ದು, 25 ರಂದು ಬೃಹತ್ ರ್ಯಾಲಿಯನ್ನು ಆಯೋಜಿಸಲಾಗಿದೆ ಎಂದರು. ಸಂವಿಧಾನದಲ್ಲಿ ಏನಿದೆ, ಜನರ ಹಕ್ಕುಗಳು ಏನು, ಬಾಬಾ ಸಾಹೇಬ್ ಅಂಬೇಡ್ಕರ್ ಕೊಟ್ಟಿರುವ ಅಸ್ತ್ರಗಳ ಬಗ್ಗೆ ಜನರಿಗೆ ಮಾಹಿತಿ ನೀಡಲು ಈ ಸಮಾವೇಶಗಳನ್ನು ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

# ಈ ಐದು ಲಕ್ಷಣಗಳು ನಿಮ್ಮನ್ನು ಕಾಡುತ್ತಿದ್ದರೆ ಬುದ್ಧಿಮಾಂದ್ಯತೆ ಇರಬಹುದು ಇರಲಿ ಎಚ್ಚರ

ಎಂದಿಗೂ ಮರೆಯಲಾಗದವರು ನಮ್ಮ ನಡುವೆ ಯಾರೂ ಇಲ್ಲ. ಕೆಲವೊಮ್ಮೆ ಇಟ್ಟ ವಸ್ತುಗಳು ಎಲ್ಲಿಟ್ಟಿದ್ದೇವೆ ಎಂದು ತಿಳಿಯುವುದಿಲ್ಲ, ತೀವ್ರ ಹುಟುಕಾಟ ನಡೆಸಲಾಗುತ್ತದೆ. ಆದರೆ ಈ ಮರೆವಿನ ಅಭ್ಯಾಸವೂ ಒಂದು ಕಾಯಿಲೆಯಾಗಿರಬಹುದು ಎಂದು ನಿಮಗೆ ತಿಳಿದಿದೆಯೇ?

ಎಂದಿಗೂ ಮರೆಯಲಾಗದವರು ನಮ್ಮ ನಡುವೆ ಯಾರೂ ಇಲ್ಲ. ಕೆಲವೊಮ್ಮೆ ನಿಮ್ಮ ಕಾರಿನ ಕೀಲಿಯನ್ನು ಎಲ್ಲೋ ಇಟ್ಟು ನಂತರ ಅದನ್ನು ಮರೆತುಬಿಡುತ್ತೀರಿ. ಕೆಲವೊಮ್ಮೆ ನಿಮ್ಮ ಸೆಲ್ ಫೋನ್ ಅನ್ನು ಎಲ್ಲಿ ಇರಿಸಿದ್ದೀರಿ ಎಂಬುದು ನಿಮಗೆ ನೆನಪಿರುವುದಿಲ್ಲ. ವರ್ಷಗಳ ನಂತರ ಹಳೆಯ ಶಾಲಾ ಸ್ನೇಹಿತ ಅಥವಾ ಸಹೋದ್ಯೋಗಿಯ ಹೆಸರು ನಿಮಗೆ ನೆನಪಿಲ್ಲದಿರಬಹುದು.

ನಮ್ಮ ದಿನಚರಿಯಲ್ಲಿ ಈ ಸಣ್ಣ ವಿಷಯಗಳನ್ನು ಮರೆತುಬಿಡುವುದು ಸಾಮಾನ್ಯ ಅಭ್ಯಾಸವಾಗಿದೆ. ಆದರೆ ತೀರಾ ಮರೆವಿನ ಅಭ್ಯಾಸವೂ ಒಂದು ಕಾಯಿಲೆಯಾಗಿರಬಹುದು ಎಂದು ನಿಮಗೆ ತಿಳಿದಿದೆಯೇ? ಇದನ್ನು ಬುದ್ಧಿಮಾಂದ್ಯತೆ ಎಂದು ಕರೆಯಲಾಗುತ್ತದೆ. ಇದು ನಿಮ್ಮ ಜೀವನದ ಮೇಲೆ ಹೆಚ್ಚಿನ ಪರಿಣಾಮ ಬೀರುತ್ತದೆ. ಬುದ್ಧಿಮಾಂದ್ಯತೆ ಎಂದರೇನು ಮತ್ತು ಈ ರೋಗದ ಬಗ್ಗೆ ನಿಮ್ಮನ್ನು ಎಚ್ಚರಿಸುವ 5 ಆರಂಭಿಕ ರೋಗಲಕ್ಷಣಗಳನ್ನು ಕಂಡುಹಿಡಿಯೋಣ.

ಬುದ್ಧಿಮಾಂದ್ಯತೆಯ ಲಕ್ಷಣಗಳ ಮೊದಲು, ಬುದ್ಧಿಮಾಂದ್ಯತೆ ಎಂದರೇನು ಎಂದು ತಿಳಿಯೋಣ. ಬುದ್ಧಿಮಾಂದ್ಯತೆ ಎಂಬ ಪದವು ಡಿ ಮತ್ತು ಮೆಂಟಿಯಾದಿಂದ ಕೂಡಿದೆ. ಡಿ ಎಂದರೆ ಇಲ್ಲದೆ, ಮೆಂಟಿಯಾ ಎಂದರೆ ಮನಸ್ಸು. ಬುದ್ಧಿಮಾಂದ್ಯತೆ ಎನ್ನುವುದು ರೋಗಲಕ್ಷಣಗಳ ಗುಂಪಿನ ಹೆಸರು. ಇವು ಮೆದುಳಿಗೆ ಹಾನಿ ಉಂಟುಮಾಡಬಹುದು.

ನಮ್ಮ ದೇಹವು ನಮ್ಮ ಮನಸ್ಸಿನಿಂದ ನಿಯಂತ್ರಿಸಲ್ಪಡುವುದರಿಂದ ಬುದ್ಧಿಮಾಂದ್ಯತೆಯಿಂದ ಬಳಲುತ್ತಿರುವ ವ್ಯಕ್ತಿಯು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ತೊಂದರೆಗಳನ್ನು ಎದುರಿಸಬಹುದು. ನೆನಪಿನ ಶಕ್ತಿಯೂ ಕುಂಠಿತವಾಗಬಹುದು.

ಈ ಕಾಯಿಲೆಯಿಂದ ಬಳಲುತ್ತಿರುವವರು ಅವರು ಯಾವ ನಗರದಲ್ಲಿ ವಾಸಿಸುತ್ತಿದ್ದಾರೆ ಅಥವಾ ಯಾವ ವರ್ಷ ಅಥವಾ ತಿಂಗಳು ಎಂಬುದನ್ನು ಹೆಚ್ಚಾಗಿ ಮರೆತುಬಿಡುತ್ತಾರೆ. ಬುದ್ಧಿಮಾಂದ್ಯತೆಯನ್ನು ಸಾಮಾನ್ಯವಾಗಿ ವೃದ್ಧಾಪ್ಯದ ಕಾಯಿಲೆ ಎಂದು ಪರಿಗಣಿಸಲಾಗುತ್ತದೆ.



**ಬುದ್ಧಿಮಾಂದ್ಯತೆಯ ಐದು ಲಕ್ಷಣಗಳು**

**ಮೆಮೊರಿ ದುರ್ಬಲತೆ:** ಬುದ್ಧಿಮಾಂದ್ಯತೆಯಲ್ಲಿನ ಮೆಮೊರಿ ದುರ್ಬಲತೆಯನ್ನು ಅದರ ಮೊದಲ ಮತ್ತು ಅಗ್ರಗಣ್ಯ ಲಕ್ಷಣಗಳಲ್ಲಿ ಒಂದು ಎಂದು ಪರಿಗಣಿಸಲಾಗಿದೆ. ಬುದ್ಧಿಮಾಂದ್ಯತೆಯಿಂದ ಬಳಲುತ್ತಿರುವ ವ್ಯಕ್ತಿಗೆ ಮಾಹಿತಿ ಅಥವಾ ಏನನ್ನಾದರೂ ನೆನಪಿಟ್ಟುಕೊಳ್ಳಲು ಕಷ್ಟವಾಗುತ್ತದೆ. ಅವರು ಮಾರ್ಗಗಳನ್ನು ನೆನಪಿಟ್ಟುಕೊಳ್ಳುವುದಿಲ್ಲ, ಜನರನ್ನು ಗುರುತಿಸುವಲ್ಲಿ ತೊಂದರೆ ಹೊಂದುತ್ತಾರೆ.

ಲೆಕ್ಕಾಚಾರಗಳು ನೆನಪಿಲ್ಲದಂತಹ ಲಕ್ಷಣಗಳು ಕಾಣಿಸಿಕೊಳ್ಳಬಹುದು. ಕೆಲವೊಮ್ಮೆ ಜನರು ಘಟನೆ ಅಥವಾ ಮಾಹಿತಿಯನ್ನು ಮರೆತು ನಂತರ ಅದನ್ನು ನೆನಪಿಸಿಕೊಳ್ಳುತ್ತಾರೆ, ಅಂತಹ ಸ್ಥಿತಿಯನ್ನು ಬುದ್ಧಿಮಾಂದ್ಯತೆ ಎಂದು ಕರೆಯಲಾಗುವುದಿಲ್ಲ.

ಭಾಷೆಯನ್ನು ಅರ್ಥಮಾಡಿಕೊಳ್ಳುವಲ್ಲಿ ಮತ್ತು **ಮಾತನಾಡುವಲ್ಲಿ ತೊಂದರೆಗಳು:** ಆಕ್ಸ್‌ಫರ್ಡ್ ಸಂಶೋಧಕರ ಹೊಸ ಸಂಶೋಧನೆಯು ಗದ್ದಲದ ವಾತಾವರಣದಲ್ಲಿ ಭಾಷಣವನ್ನು ಗುರುತಿಸಲು ಅಸಮರ್ಥತೆ ಕೂಡ ಬುದ್ಧಿಮಾಂದ್ಯತೆಯ ಭಾಗವಾಗಿದೆ ಎಂದು ಸೂಚಿಸುತ್ತದೆ. ಭಾಷೆಯನ್ನು ಅರ್ಥಮಾಡಿಕೊಳ್ಳಲು ಅಸಮರ್ಥತೆಯನ್ನು ಸಾಮಾನ್ಯವಾಗಿ ಶ್ರವಣ ನಷ್ಟದ ಸಂಕೇತವೆಂದು ಪರಿಗಣಿಸಲಾಗುತ್ತದೆ, ಆದರೆ ಆಕ್ಸ್‌ಫರ್ಡ್ ಸಂಶೋಧಕರು ಇದನ್ನು ಬುದ್ಧಿಮಾಂದ್ಯತೆಗೆ ಸಹ ಸಂಪರ್ಕಿಸಿದ್ದಾರೆ. ಸಂಶೋಧಕರ ಪ್ರಕಾರ, ಶ್ರವಣ ಸಮಸ್ಯೆ ಇಲ್ಲದವರಿಗೆ ಬುದ್ಧಿಮಾಂದ್ಯತೆ ಬರುವ ಸಾಧ್ಯತೆ ಎರಡು ಪಟ್ಟು ಹೆಚ್ಚು.

**ದೈನಂದಿನ ಕಾರ್ಯಗಳಲ್ಲಿ ತೊಂದರೆ:** ಬುದ್ಧಿಮಾಂದ್ಯತೆಯೊಂದಿಗೆ, ಒಂದು ಕಪ್ ಚಹಾವನ್ನು ತಯಾರಿಸುವುದರಿಂದ ಹಿಡಿದು ಕಂಪ್ಯೂಟರ್ ಅನ್ನು ನಿರ್ವಹಿಸುವವರೆಗೆ ಮೂಲಭೂತ ಕಾರ್ಯಗಳನ್ನು ಮಾಡುವುದು ಕಷ್ಟಕರವಾಗಿರುತ್ತದೆ. ಬುದ್ಧಿಮಾಂದ್ಯತೆಯು ನೀವು ವರ್ಷಗಳಿಂದ ಮಾಡುತ್ತಿರುವ ನಿಮ್ಮ ದೈನಂದಿನ ಕಾರ್ಯಗಳನ್ನು ಪೂರ್ಣಗೊಳಿಸಲು ಸವಾಲಾಗಬಹುದು.

**ಮಾತನಾಡಲು ತೊಂದರೆ:** ಬುದ್ಧಿಮಾಂದ್ಯತೆ ಹೊಂದಿರುವ ಜನರು ಸಂಭಾಷಣೆಯಲ್ಲಿ ತೊಡಗಿಸಿಕೊಳ್ಳಲು ಅಥವಾ ಅವರ ಆಲೋಚನೆಗಳನ್ನು ಪದಗಳಲ್ಲಿ ಇರಿಸಲು ಕಷ್ಟವಾಗಬಹುದು. ಅವರು ಏನು ಮಾತನಾಡುತ್ತಿದ್ದರು ಅಥವಾ ಇನ್ನೊಬ್ಬರು ಏನು ಹೇಳಿದರು ಎಂಬುದನ್ನು ಅವರು ಮರೆತುಬಿಡಬಹುದು. ಅಂತಹ ವ್ಯಕ್ತಿಯೊಂದಿಗೆ ಮಾತುಕತೆ ನಡೆಸುವುದು ಕಷ್ಟ. ಅನೇಕ ಜನರು ಪದಗಳನ್ನು ತಪ್ಪಾಗಿ ಉಚ್ಚರಿಸುತ್ತಾರೆ ಅಥವಾ ವ್ಯಾಕರಣದ ತಪ್ಪುಗಳನ್ನು ಮಾಡುತ್ತಾರೆ ಎಂದು ಗಮನಿಸುತ್ತಾರೆ.

**ಮನಸ್ಥಿತಿಯ ಏರುಪೇರು:** ಆಗಾಗ್ಗೆ ಮೂಡ್ ಸ್ವಿಂಗ್ ಆಗುತ್ತಿದ್ದರೆ ನೀವು ಬುದ್ಧಿಮಾಂದ್ಯತೆಯ ಲಕ್ಷಣಗಳನ್ನು ಸುಲಭವಾಗಿ ಗುರುತಿಸಬಹುದು. ಕೆಲವೊಮ್ಮೆ ನೀವು ಹರ್ಷಚಿತ್ತದಿಂದ ಮತ್ತು ಪೂರ್ಣ ಜೀವನವನ್ನು ಅನುಭವಿಸಬಹುದು. ಇತರ ಸಮಯಗಳಲ್ಲಿ ನೀವು ಗಂಭೀರವಾಗಿ ಕಾಣಿಸಬಹುದು. ಬುದ್ಧಿಮಾಂದ್ಯತೆಯಿಂದಾಗಿ, ವ್ಯಕ್ತಿತ್ವದಲ್ಲಿ ಕ್ರಮೇಣ ಬದಲಾವಣೆ ಕಂಡುಬರಬಹುದು. ಖಿನ್ನತೆಯಿರುವ ಜನರು ಸಹ ಬುದ್ಧಿಮಾಂದ್ಯತೆಯ ಅಪಾಯವನ್ನು ಹೊಂದಿರುತ್ತಾರೆ.

# ಗಂಟೆಗಟ್ಟಲೆ ಇಯರ್‌ಫೋನ್ ಬಳಕೆ, ಮಾನಸಿಕ ಆರೋಗ್ಯದ ಮೇಲೂ ಪರಿಣಾಮ ಬೀರುತ್ತೆ


ಮೊದಮೊದಲು ಯಾವ ಪ್ರದೇಶದಲ್ಲಿ ಹೆಚ್ಚು ಶಬ್ದವಿರುತ್ತದೋ ಅಲ್ಲಿ ಮಾತುಗಳು ಸುಲಭವಾಗಿ ಕೇಳುವಂತೆ ಮಾಡಲು ಇಯರ್ ಫೋನ್ ಬಳಕೆ ಮಾಡುತ್ತಿದ್ದರು.

ಮೊದಮೊದಲು ಯಾವ ಪ್ರದೇಶದಲ್ಲಿ ಹೆಚ್ಚು ಶಬ್ದವಿರುತ್ತದೋ ಅಲ್ಲಿ ಮಾತುಗಳು ಸುಲಭವಾಗಿ ಕೇಳುವಂತೆ ಮಾಡಲು ಇಯರ್ ಫೋನ್ ಬಳಕೆ ಮಾಡುತ್ತಿದ್ದರು.

ದಿನದಿಂದ ದಿನಕ್ಕೆ ಕೇವಲ ಮಾತನಾಡುವುದಷ್ಟೇ ಅಲ್ಲದೆ, ಹಾಡುಗಳನ್ನು ಕೇಳಲು ಕೂಡ ಬಳಕೆ ಮಾಡಿದರು, ಈಗ ಸಿನಿಮಾ ನೋಡಲು, ವಿಡಿಯೋ, ರೀಲ್ಸ್ ನೋಡಲು, ದಾರಾವಾಹಿಗಳು ವೀಕ್ಷಿಸಲು ಒಟ್ಟಿನಲ್ಲಿ ಎಲ್ಲಾ ಸಂದರ್ಭದಲ್ಲಿಯೂ ಇಯರ್ ಫೋನ್ ಅನ್ನು ಬಳಕೆ ಮಾಡಲಾಗುತ್ತಿದೆ.

ಇಡೀ ದಿನವೂ ಕಿವಿಯಲ್ಲಿ ಇಯರ್ ಫೋನ್ ಹಾಕಿಕೊಂಡಿದ್ದರೆ ಕಿವುಡುತನ ಮಾತ್ರವಲ್ಲದೆ ಮಾನಸಿಕ ಸಮಸ್ಯೆಯೂಕೂಡ ಹೆಚ್ಚಾಗುತ್ತದೆ. ಮೆದುಳಿಗೆ ಹಾನಿ-





ಇಯರ್‌ಫೋನ್‌ಗಳನ್ನು ದೀರ್ಘಕಾಲ ಬಳಸುವುದರಿಂದ ಮೆದುಳಿನ ಮೇಲೆ ಪರಿಣಾಮ ಬೀರುತ್ತದೆ. ಇಯರ್ ಫೋನ್ ಅಥವಾ ಹೆಡ್‌ಫೋನ್‌ಗಳಿಂದ ಹೊರಹೊಮ್ಮುವ ವಿದ್ಯುತ್ಕಾಂತೀಯ ಅಲೆಗಳು ನಮ್ಮ ಮೆದುಳಿನ ಮೇಲೆ ಕೆಟ್ಟ ಪರಿಣಾಮ ಬೀರುತ್ತವೆ.

ಇದಲ್ಲದೆ, ಜೋರಾಗಿ ಸಂಗೀತದಿಂದಾಗಿ, ಮೆದುಳಿನ ಕೋಶಗಳ ಮೇಲಿನ ಪದರವು ನಾಶವಾಗುತ್ತದೆ, ಇದರಿಂದಾಗಿ ಕಿವಿ ಮತ್ತು ಮೆದುಳಿನ ಸಂಪರ್ಕವು ದುರ್ಬಲಗೊಳ್ಳುತ್ತದೆ.

ಕಿವುಡುತನ-ದೀರ್ಘಕಾಲದವರೆಗೆ ಇಯರ್‌ಫೋನ್‌ಗಳನ್ನು ಬಳಸುವುದರಿಂದ ನೀವು ಕಿವುಡುತನಕ್ಕೆ ಬಲಿಯಾಗಬಹುದು. ವಾಸ್ತವವಾಗಿ, ಏರ್ ಫೋನ್ ಅನ್ನು ದೀರ್ಘಕಾಲದವರೆಗೆ ಇಡುವುದರಿಂದ ಕಿವಿಗಳ ನರಗಳ ಮೇಲೆ ಒತ್ತಡ ಉಂಟಾಗುತ್ತದೆ, ಇದರಿಂದಾಗಿ ನರಗಳಲ್ಲಿ ಊತದ ಸಮಸ್ಯೆ ಹೆಚ್ಚಾಗುತ್ತದೆ. ಕಂಪನದಿಂದಾಗಿ ಶ್ರವಣ ಕೋಶಗಳು ಹೆಚ್ಚು ಸೂಕ್ಷ್ಮವಾಗುತ್ತವೆ, ಇದರಿಂದಾಗಿ ನೀವು ಕಿವುಡರಾಗಬಹುದು. ಅಧ್ಯಯನದ ಪ್ರಕಾರ, ಒಬ್ಬ ವ್ಯಕ್ತಿಯು 2 ಗಂಟೆಗಳಿಗಿಂತ ಹೆಚ್ಚು ಕಾಲ 90 ಡೆಸಿಬಲ್‌ಗಿಂತ ಹೆಚ್ಚು ಹಾಡನ್ನು ಕೇಳಿದರೆ, ಅವನು ಆಗುವ ಸಾಧ್ಯತೆ ಹೆಚ್ಚು. ಇದಲ್ಲದೆ ಇನ್ನೂ ಅನೇಕ ರೋಗಗಳು ಹಿಡಿತದಲ್ಲಿ ಬರಬಹುದು.

ವಾಸ್ತವವಾಗಿ, ಕಿವಿಗಳ ಶ್ರವಣ ಸಾಮರ್ಥ್ಯವು ಕೇವಲ 90 ಡೆಸಿಬಲ್ ಆಗಿದೆ, ಇದು ನಿರಂತರವಾಗಿ ಹಾಡುಗಳನ್ನು ಕೇಳುವ ಮೂಲಕ ಕಾಲಾನಂತರದಲ್ಲಿ 40 ರಿಂದ 50 ಡೆಸಿಬಲ್ಗಳಿಗೆ ಕಡಿಮೆಯಾಗುತ್ತದೆ, ಇದ-ರಿಂದಾಗಿ ವ್ಯಕ್ತಿಯು ದೂರದ ಶಬ್ದಗಳನ್ನು ಕೇಳುವುದಿಲ್ಲ. ಟಿನ್ನಿಟಸ್-ಟಿನ್ನಿಟಸ್ ಸಮಸ್ಯೆಯೂ ಇರಬಹುದು. ಇದು ಶಿಳ್ಳೆ ಅಥವಾ ಗಾಳಿ ಕಿವಿಯೊಳಗೆ ನಿರಂತರವಾಗಿ ಬೀಸುವಂತೆ ಮಾಡುವ ಕಾಯಿಲೆಯಾಗಿದೆ. ಕಿವಿಯ ಒಳಭಾಗದಲ್ಲಿರುವ ಕೋಕ್ಲಿಯಾ ಕೋಶಗಳ ನಾಶದಿಂದಾಗಿ ಈ ಶಬ್ದ ಬರುತ್ತದೆ. ಸೋಂಕು ನಾವು ನಿರಂತರವಾಗಿ ಇಯರ್‌ಫೋನ್‌ಗಳನ್ನು ಧರಿಸಿದಾಗ, ಕಿವಿಯ ವ್ಯಾಕ್ಸ್ ಮತ್ತು ಇತರ ಕೊಳೆಗಳು ಅವುಗಳ ಬೊಕ್ಕೆಗಳಲ್ಲಿ ಸಿಲುಕಿಕೊಳ್ಳುತ್ತವೆ. ಇಯರ್ ಫೋನ್ ಗಳನ್ನು ಕ್ಲೀನ್ ಮಾಡದೆ ನಿರಂತರವಾಗಿ ಬಳಸುವುದರಿಂದ ಕಿವಿಯೊಳಗೆ ಫಂಗಲ್ ಮತ್ತು ಬ್ಯಾಕ್ಟೀ-ರಿಯಾದ ಸೋಂಕು ಉಂಟಾಗುತ್ತದೆ. ಇದಲ್ಲದೆ ಇಯರ್ ಫೋನ್‌ಗಳು ಸಹ ಅನೇಕ ಬಾರಿ ವಿನಿಮಯಗೊಳ್ಳುತ್ತವೆ, ಇದರಿಂದಾಗಿ ಸೋಂಕಿನ ಅಪಾಯವೂ ಉಳಿದಿದೆ.ತಲೆನೋವು ಇಯರ್ ಫೋನ್‌ನಿಂದ ಹೊರಬರುವ ವಿದ್ಯುತ್ಕಾಂತೀಯ ತರಂಗಗಳಿಂದಾಗಿ, ವ್ಯಕ್ತಿಯ ಮೆದುಳಿನ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ, ಇದರಿಂದಾಗಿ ಅವನು ತಲೆನೋವು ಅಥವಾ ನಿದ್ರಾಹೀನತೆ ಸಮಸ್ಯೆ ಕಾಡುವುದು.

## ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರು ಭೇಟಿ ಪರಿಶೀಲನೆ

# ಕೈದಿಗಳ ಮಕ್ಕಳ ಬಗ್ಗೆ ಕಾಳಜಿ ವಹಿಸಿ



ಬಳ್ಳಾರಿ: ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೋಸಂಭೆ ಅವರು ಭೇಟಿ ನೀಡಿ, ಮಹಿಳಾ ಮತ್ತು ಪುರುಷ ಕೈದಿಗಳ ಕೋಣೆಗಳ ಪರಿಶೀಲನೆ ನಡೆಸಿ ಅವರ ಆರೋಗ್ಯ, ಆಹಾರ, ಮೂಲ ಸೌಕರ್ಯದ ಜೊತೆಗೆ ಅವರ ಮಕ್ಕಳ ಕುರಿತು ವಿಚಾರಣೆ ನಡೆಸಿದರು.

ಬಳಿಕ ಗ್ರಂಥಾಲಯ ವೀಕ್ಷಿಸಿ ಎಲ್ಲ ದಿನ ಪತ್ರಿಕೆಗಳು ಮತ್ತು ಉತ್ತಮ ಪುಸ್ತಕಗಳನ್ನು ಖರೀದಿಸಿ ಅವರ ಜ್ಞಾನಾರ್ಜನೆಗೆ ಅವಕಾಶ ಮಾಡುವ ಜೊತೆಗೆ ಸನ್ನಡತೆಯಿಂದ ಅವರ ಮನಪರಿವರ್ತನೆ ಮಾಡುವಲ್ಲಿ ಅಧಿಕಾರಿಗಳು ಶ್ರಮಿಸಬೇಕು ಎಂದರು.

ನಂತರ ಕಾರಾಗೃಹ ಮತ್ತು ಮಕ್ಕಳ ರಕ್ಷಣಾ ಘಟಕದ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿದರು. ಕೈದಿಗಳೊಂದಿಗೆ ಸಂವಾದ ನಡೆಸಿ ಅವರ ಮಕ್ಕಳ ಮಾಹಿತಿ ಕಲೆ ಹಾಕಬೇಕು.

ಅವರ ಮಕ್ಕಳ ಶಿಕ್ಷಣ, ಆರೋಗ್ಯ ಮತ್ತು ರಕ್ಷಣೆಯ ಜೊತೆಗೆ ಮಕ್ಕಳ ಸ್ಥಿತಿಗತಿಗಳ ಕುರಿತು ಪರಿಹಾರ ಕ್ರಮಗಳನ್ನು ಕೈಗೊಂಡು ಅವರ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಭಾಗಿಯಾಗಬೇಕು ಎಂದು ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ನಿಕಟಪೂರ್ವ ಸದಸ್ಯ ರಾಘವೇಂದ್ರ ಹೆಚ್.ಸಿ ಕಾರಾಗೃಹದ ಸಹಾಯಕ ಅಧೀಕ್ಷಕರಾದ ಅಂಬ-ರೀಷ್ ಪೂಜಾರಿ, ಮಕ್ಕಳ ರಕ್ಷಣಾಧಿಕಾರಿಗಳು, ಅಸಂಸ್ಥಿಕ ರಕ್ಷಣಾಧಿಕಾರಿ ಮೌನೇಶ್ ಪೊತದಾರ್ ಸೇರಿದಂತೆ ಕಾರಾಗೃಹದ ಅಧಿಕಾರಿಗಳು ಇದ್ದರು.

# ವ್ಯಾಯಾಮ, ಜಿಮ್ ಮಧ್ಯದಲ್ಲೇ ಬಿಟ್ಟರೆ ಯಾಕೆ ದಪ್ಪಗಾಗುತ್ತಾರೆ?




ಕೆಲವಷ್ಟು ಮಂದಿ ಜಿಮ್ ಗೆ ಹೋಗಿ ಮಧ್ಯದಲ್ಲೇ ಬಿಟ್ಟು ಬಿಡುತ್ತಾರೆ. ಇವರ ದೇಹಾಕೃತಿ ಸ್ವಲ್ಪ ದಿನಗಳಲ್ಲೇ ವಿಪರೀತ ಊದಿಕೊಂಡಿರುವುದನ್ನು ನೀವು ನೋಡಿರಬಹುದು. ನಿತ್ಯ ಜಿಮ್, ವ್ಯಾಯಾಮ ಮಾಡುವವರು ಕೆಲವು ದಿನಗಳ ಮಟ್ಟಿಗೆ ವಿಶ್ರಾಂತಿ ಪಡೆದುಕೊಂಡರೆ ಅಥವಾ ಅದನ್ನು ನಿಲ್ಲಿಸಿದರೆ ಅವರು ವಿಪರೀತ ದಪ್ಪವಾಗುವುದನ್ನು ನೀವು ಕಂಡಿರಬಹುದು.

ಇದಕ್ಕೆ ಮುಖ್ಯ ಕಾರಣ ಅವರಿಗೆ ಹಸಿವಾಗುವುದು. ನಿಯಮಿತವಾಗಿ ನಡೆ-ಯುತ್ತಿದ್ದ ದೇಹದ ವ್ಯಾಯಾಮ ನಿಂತ ಕಾರಣ ಹೊಟ್ಟೆ ವಿಪರೀತ ಹಸಿದುಕೊಳ್ಳುತ್ತದೆ. ಪರಿಣಾಮ ಅವರು ಹೆಚ್ಚು ತಿಂದು ಕೊಬ್ಬು ಬೆಳೆಯುತ್ತದೆ. ವ್ಯಾಯಾಮ ಮಾಡುವುದರಿಂದ ದೇಹದ ಹಸಿವಿನ ಹಾರ್ಮೋನ್ ಕಡಿಮೆ ಪ್ರಮಾಣದಲ್ಲಿ ಬಿಡುಗಡೆಯಾಗುತ್ತದೆ.

ವ್ಯಾಯಾಮ ಮಾಡಿದಾಗ ಹೆಚ್ಚು ಬೆವರುವುದರಿಂದ ಹೆಚ್ಚಿನ ನೀರು ಕುಡಿಯಬೇಕಾಗುತ್ತದೆ. ಇದರಿಂದ ಹಸಿವು ಸಹಜವಾಗಿಯೇ ಕಡಿಮೆಯಾಗುತ್ತದೆ. ವ್ಯಾಯಾಮ ಇಲ್ಲದಾಗ ಹಸಿವು ಹೆಚ್ಚಲು ಇದೂ ಒಂದು ಕಾರಣ.

ವ್ಯಾಯಾಮ ಮಾಡದಿರುವಾಗ ದೇಹ ಅನಾರೋಗ್ಯಕರ ಆಹಾರವನ್ನು ಸೇವನೆ ಮಾಡುವಂತೆ ಉತ್ತೇಜಿಸುತ್ತದೆ ಎನ್ನುತ್ತದೆ ಇತ್ತೀಚಿನ ಸಂಶೋಧನೆ.

# ಮೊಟ್ಟೆ ಮತ್ತು ಪನೀರ್ ಒಟ್ಟಿಗೆ ತಿಂದರೆ ಕಡಿಮೆಯಾಗುತ್ತ ತೂಕ? ಇಲ್ಲಿದೆ ಅಸಲಿ ಸತ್ಯ...!



ಸದ್ಯ ಜಗತ್ತಿನಾದ್ಯಂತ ಬೊಜ್ಜಿನ ಸಮಸ್ಯೆ ಬಹುತೇಕರನ್ನು ಕಾಡುತ್ತಿದೆ. ತೂಕ ಇಳಿಸುವುದೇ ಬಹಳ ದೊಡ್ಡ ಸವಾಲಾಗಿ ಪರಿಣಮಿಸಿದೆ. ಎಷ್ಟೇ ಪ್ರಯತ್ನ ಮಾಡಿದ್ರೂ ಕೆಲವೊಮ್ಮೆ ತೂಕ ಕಡಿಮೆ ಮಾಡಿಕೊಳ್ಳುವುದು ಅಸಾಧ್ಯವೆನಿಸುತ್ತದೆ. ಕೆಲವರು ತೂಕವನ್ನು ನಿಯಂತ್ರಿಸಲು ಮೊಟ್ಟೆ ಮತ್ತು ಪನೀರ್ ಸೇವನೆ ಮಾಡುತ್ತಾರೆ. ಇವೆರಡರಲ್ಲೂ ಕ್ಯಾಲೋರಿ ಕಡಿಮೆ ಮತ್ತು ಹೆಚ್ಚಿನ ಪ್ರೋಟೀನ್ ಇರುತ್ತದೆ.

ಪ್ರೋಟೀನ್ ತಡವಾಗಿ ಜೀರ್ಣವಾದಾಗ, ಅದು ತೂಕವನ್ನು ಕಳೆದುಕೊಳ್ಳಲು ಸಹಾಯ ಮಾಡುತ್ತದೆ. ಇದರ ಹೊರತಾಗಿ ಈ ಎರಡೂ ವಸ್ತುಗಳು ಹಸಿವನ್ನು ಕಡಿಮೆ ಮಾಡುವ ಹಾರ್ಮೋನುಗಳನ್ನು ಹೆಚ್ಚಿಸುತ್ತವೆ. ಪನೀರ್ ಮತ್ತು ಮೊಟ್ಟೆಯನ್ನು ಒಟ್ಟಿಗೆ ತಿನ್ನುವುದರಿಂದ ದೇಹಕ್ಕೆ ಏನಾದರೂ ಪ್ರಯೋಜನವಿದೆಯೇ ಅಥವಾ ಇಲ್ಲವೇ ಎಂಬ ಗೊಂದಲ ಬಹುತೇಕರಲ್ಲಿದೆ.

**ಮೊಟ್ಟೆ ತೂಕವನ್ನು ಹೇಗೆ ಕಡಿಮೆ ಮಾಡುತ್ತದೆ?** ಮೊಟ್ಟೆಯು ನಮ್ಮ ದೇಹಕ್ಕೆ ತುಂಬಾ ಪ್ರಯೋಜನಕಾರಿ ಆಹಾರ ಎಂಬುದರಲ್ಲಿ ಯಾವುದೇ ಸಂದೇಹವಿಲ್ಲ. ಮೊಟ್ಟೆ ತಿನ್ನುವುದರಿಂದ ನಮ್ಮ ದೇಹದಲ್ಲಿನ ಅಗತ್ಯ ಅಮೈನೋ ಆಮ್ಲಗಳ ಸಮತೋಲನವನ್ನು ಕಾಪಾಡಿಕೊಳ್ಳಬಹುದು. ಮೊಟ್ಟೆ ನಮ್ಮ ಚಯಾಪಚಯವನ್ನು ಹೆಚ್ಚಿಸುವ ಮೂಲಕ ತೂಕವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತದೆ. ಇದು ನಿಮ್ಮ ಸೊಂಟ ಮತ್ತು ಹೊಟ್ಟೆಯ ಸುತ್ತಲಿನ ಕೊಬ್ಬನ್ನು ಕಡಿಮೆ ಮಾಡುತ್ತದೆ.

ಪನೀರ್ ತೂಕವನ್ನು ಹೇಗೆ ಕಡಿಮೆ ಮಾಡುತ್ತದೆ? ಪನೀರ್ ನಮಗೆ ತ್ವರಿತ ಶಕ್ತಿಯ ಮೂಲವಾಗಿದೆ. ಇದ-ರಿಂದ ನಾವು ದೈನಂದಿನ ಜೀವನದ ಚಟುವಟಿಕೆಗಳನ್ನು ಸುಲಭವಾಗಿ ಮಾಡಬಹುದು. ಆದರೆ ಪನೀರ್‌ನ ಅನೇಕ ರುಚಿಕರವಾದ ವಸ್ತುಗಳು ವಾಸ್ತವವಾಗಿ ತೂಕವನ್ನು ಹೆಚ್ಚಿಸುತ್ತವೆ. ವಿಶೇಷವಾಗಿ ಎಣ್ಣೆ ಮತ್ತು ಮಸಾಲೆಗಳನ್ನು ಬಳಸುವ ಪಾಕವಿಧಾನಗಳಿಂದ ನಾವು ದೂರವಿರಬೇಕು.

ತೂಕ ಇಳಿಸಿಕೊಳ್ಳಲು ಬಯಸುವವರು ಪನೀರ್ ಟಿಕ್ಕಾದಂತಹ ಆರೋಗ್ಯಕರ ಆಯ್ಕೆಗಳನ್ನು ಆರಿಸಿಕೊಳ್ಳಬೇಕು. ಆದರೆ ಒಂದೇ ದಿನ ಅತಿಯಾಗಿ ಪನೀರ್ ತಿನ್ನುವುದನ್ನು ತಪ್ಪಿಸಿ. ಜಾಸ್ತಿ ಸೇವನೆ ಮಾಡಿದರೆ ಅದು ಪ್ರಯೋಜನಗಳ ಬದಲಿಗೆ ಹಾನಿಯನ್ನು ಉಂಟುಮಾಡಬಹುದು.

ಪನೀರ್ ಮತ್ತು ಮೊಟ್ಟೆಗಳನ್ನು ಒಟ್ಟಿಗೆ ತಿನ್ನುವುದು ಪ್ರಯೋಜನಕಾರಿಯೇ? ಪ್ರೋಟೀನ್ ಭರಿತ ಮೊಟ್ಟೆಗಳು ಮತ್ತು ಪನೀರ್ ತೂಕವನ್ನು ಕಡಿಮೆ ಮಾಡಲು ಮತ್ತು ಸ್ನಾಯುಗಳನ್ನು ಬಲಪಡಿಸಲು ಬಹಳ ಮುಖ್ಯ. ತೂಕ ಇಳಿಸಿಕೊಳ್ಳಲು ಇವೆರಡೂ ಸರಿಯಾದ ಆಯ್ಕೆ. ಪ್ರೋಟೀನ್ ನಿಧಾನವಾಗಿ ಜೀರ್ಣವಾಗುವುದರಿಂದ ಹೊಟ್ಟೆಯು ದೀರ್ಘಕಾಲದವರೆಗೆ ತುಂಬಿರುತ್ತದೆ. ಮೊಟ್ಟೆ ಮತ್ತು ಪನೀರ್ ಅನ್ನು ಒಟ್ಟಿಗೆ ತಿಂದರೆ ಯಾವುದೇ ಸಮಸ್ಯೆಯಾಗುವುದಿಲ್ಲ. ಆದರೆ ಮಿತವಾಗಿ ಸೇವನೆ ಮಾಡಿ, ಅತಿಯಾಗಿ ತಿಂದರೆ ಬೇರೆ ಸಮಸ್ಯೆಗಳಾಗುತ್ತವೆ.

# ರಕ್ತ ಶುದ್ಧಿಯಾಗಲು ಈ ಆಹಾರ ಸೇವಿಸಿ

ನಮ್ಮ ದೇಹದಲ್ಲಿನ ರಕ್ತ ಶುದ್ಧವಾಗಿದ್ದರೆ ಅನಾರೋಗ್ಯದಿಂದ ದೂರವಿರಬಹುದು. ಸಾಕಷ್ಟು ಸಮಸ್ಯೆಗಳಿಗೆ ನಮ್ಮ ಅಶುದ್ಧವಾದ ರಕ್ತವೇ ಕಾರಣವಾಗುತ್ತದೆ. ರೋಗನಿರೋಧಕ ಶಕ್ತಿ, ಜೀವಕೋಶ, ಹಾರ್ಮೋನ್ಸ್ ಇವೆಲ್ಲದಕ್ಕೆ ರಕ್ತವೇ ಕಾರಣವಾಗಿರುತ್ತದೆ.

ನಾವು ತಿನ್ನುವ ಆಹಾರ, ಜೀವನ ಪದ್ಧತಿ ಇವೆಲ್ಲದರ ಕಾರಣದಿಂದ ದೇಹದಲ್ಲಿ ಟಾಕ್ಸಿನ್ ಹೆಚ್ಚಾಗುತ್ತದೆ. ಆಗಾಗ ನಮ್ಮ ದೇಹವನ್ನು ಡಿಟಾಕ್ಸಿಫಿಕೇಷನ್ ಮಾಡುತ್ತಿರಬೇಕು,

ನಮ್ಮ ರಕ್ತವನ್ನು ಶುದ್ಧೀಕರಿಸಿದರೆ ನಮ್ಮ ಕಿಡ್ನಿ, ಲಿವರ್, ಹೃದಯ ಎಲ್ಲವೂ ಚೆನ್ನಾಗಿ ಕಾರ್ಯ ನಿರ್ವಹಿಸುತ್ತದೆ. ಈ ರಕ್ತವನ್ನು ನೈಸರ್ಗಿಕವಾಗಿ ಹೇಗೆ ಶುದ್ಧೀಕರಿಸಬಹುದು



ಎಂಬುದಕ್ಕೆ ಇಲ್ಲಿದೆ ನೋಡಿ ಮಾಹಿತಿ.

ಹೂಕೋಸು ಇದು ರಕ್ತವನ್ನು ಶುದ್ಧೀಕರಿಸುವುದರಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ನಮ್ಮ ದೇಹದಲ್ಲಿನ ಟಾಕ್ಸಿನ್ ಅನ್ನು ಕಡಿಮೆ ಮಾಡುತ್ತದೆ. ಈ ತರಕಾರಿಯಲ್ಲಿ ಕ್ಯಾಲ್ಸಿಯಂ, ವಿಟಮಿನ್ ಸಿ, ಓಮೇಗಾ-3 ಫ್ಯಾಟಿ ಆಯಸಿಡ್, ಡಯೆಟ್ರಿ ಫೈಬರ್, ಪೋಟ್ಯಾಷಿಯಂ ಅಧಿಕವಾಗಿರುತ್ತದೆ. ದಿನನಿತ್ಯ ಇದನ್ನು ಸೇವಿಸುವುದರಿಂದ ದೇಹದಲ್ಲಿನ ರಕ್ತವನ್ನು ಶುದ್ಧೀಕರಿಸಿ ನಮ್ಮ ರೋಗನಿರೋಧಕ ಶಕ್ತಿಯನ್ನು ಹೆಚ್ಚಿಸುತ್ತದೆ.

ಇನ್ನು ಸೇಬು, ಪ್ಲಮ್ಸ್, ಮರಸೇಬು, ಸೀಬೆಹಣ್ಣು ಇದರಲ್ಲಿ ಫೈಬರ್ ಅಂಶ ಜಾಸ್ತಿ ಇರುತ್ತದೆ. ರಕ್ತದಲ್ಲಿ ಫ್ಯಾಟ್ ಅಂಶ ಮಾತ್ರವಲ್ಲದೇ, ಮೆಟಲ್ಸ್, ಅಪಾಯಕಾರಿ ಕೆಮಿಕಲ್ಸ್, ಕಲ್ಮಷಗಳು ಇರುತ್ತದೆ.

ಇದನ್ನೆಲ್ಲಾ ನಿವಾರಿಸಲು ಸಾಕಷ್ಟು ನಾರಿನಾಂಶ ಹೆಚ್ಚಿರುವ ಹಣ್ಣು- ತರಕಾರಿಗಳನ್ನು ಸೇವಿಸಬೇಕು. ಸ್ಟ್ರಾಬೆರಿ, ಬ್ಲೂಬೆರಿ, ಬ್ಲ್ಯಾಕ್ ಬೆರಿ ಗಳನ್ನು ಹೆಚ್ಚೆಚ್ಚು ನಿಮ್ಮ ಡಯೆಟ್ ನಲ್ಲಿ ಸೇರಿಸಿಕೊಳ್ಳಿ. ಇದು ನಿಮ್ಮ ಲಿವರ್ ನ ಆರೋಗ್ಯವನ್ನು ಕಾಪಾಡುತ್ತದೆ.

ಕರ್ನಾಟಕ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯನಿರ್ವಾಹಕ ಅಭಿಯಂತರರ ಕಚೇರಿ, ಕನೀನಿನಿ
ಘಟಪ್ರಭಾ ವಿಭಾಗ ನಂ. 2, ಹಿಡಕಲ್‌ಡ್ಯಾಂ ಕಚೇರಿ ದೂರವಾಣಿ ಸಂ: 08333-2200119/ಫ್ಯಾಕ್ಸ ಸಂ:08333-263405/
ಇ-ಮೇಲ್:eegrbc2@gmail.com

ಸಂ: ಕನೀನಿನಿ/ಜಿಆರ್‌ಬಿಸಿ-2/ಡಿಬಿ/ಟೆಂಡರ್/2023-24/2883 ದಿನಾಂಕ: 16-02-2024

ಅಲ್ಪಾವಧಿ ಟೆಂಡರ ಪ್ರಕಟಣೆ
(ಇ-ಪ್ರೊಕ್ಯೂರಮೆಂಟ್ ಮುಖಾಂತರ ಮಾತ್ರ)

ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಬೆಂಗಳೂರು ಇವರ ಪರವಾಗಿ ಕಾರ್ಯನಿರ್ವಾಹಕ ಇಂಜಿನೀಯರರು, ಕನೀನಿನಿ, ಜಿಆರ್‌ಬಿಸಿ ವಿಭಾಗ ನಂ. 2 ಹಿಡಕಲ್ ಡ್ಯಾಂ, ತಾ: ಹುಕ್ಕೇರಿ, ಜಿಲ್ಲೆ: ಬೆಳಗಾವಿ, ಕರ್ನಾಟಕ ಇವರು ಆಧಾರದ ಅಲ್ಪಾವಧಿ ಟೆಂಡರ್ ಆಧಾರದ ಮೇಲೆ ಇ-ಪ್ರೊಕ್ಯೂರಮೆಂಟ ಪೋರ್ಟಾಲ್ ಮುಖಾಂತರ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ ಈ ಕೆಳಗೆ ನಮೂದಿಸಿದ ಕಾಮಗಾರಿಗೆ ಕೆಟಿಪಿಪಿ ಕಾಯ್ದೆಯ ರೂಲ್ 28ರನ್ವಯ Single Cover System (ಏಕ-ಲಕೋಟೆ) ಪದ್ಧತಿಯಲ್ಲಿ ಟೆಂಡರನ್ನು ಅಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಗುತ್ತಿಗೆದಾರರು ತಮ್ಮ ಟೆಂಡರಗಳನ್ನು ಕೆಳಗೆ ತಿಳಿಸಿರುವ ದಿನಾಂಕದವರೆಗೆ ಕರ್ನಾಟಕ ಸರ್ಕಾರದ ಇ-ಪ್ರೊಕ್ಯೂರಮೆಂಟ ಪೋರ್ಟಲ್ (https://kppp.karnataka.gov.in) ಮುಖಾಂತರ ಅರ್ಹ ಗುತ್ತಿಗೆದಾರರು ಟೆಂಡರಗಳನ್ನು ಸಲ್ಲಿಸಬಹುದಾಗಿದೆ. ಕಾಮಗಾರಿಯ ವಿವರಗಳು ಕೆಳಗಿನಂತಿವೆ..

ಕಾಮಗಾರಿಗಳ ಸಂಖ್ಯೆ: 13, ಈ ಟೆಂಡರ್ ಬಿಡ್ ನ್ನು ವೀಕ್ಷಿಸಬಹುದಾಗಿದೆ/ ಡೌನ್‌ಲೋಡ್ ಮಾಡಬಹುದಾಗಿದೆ:17-02-2024 ರಿಂದ 26-02-2024 ವರೆಗೆ ಪಡೆಯಬಹುದು, ಇ-ಪ್ರೊಕ್ಯೂರಮೆಂಟ ಇಂಡೆಂಟ ಸಂಖ್ಯೆ:ಏಕ-ಲಕೋಟೆ (ಇಂಡೆಂಟ್ ನಂ.918,923,924,854,921, 843, 925, 926, 922,803 & 850) ಪರಿಶಿಷ್ಟ ಜಾತಿಯ ಮಿಸಲಾತಿ (ಇಂಡೆಂಟ್ ನಂ.920 & 929), ಅಂದಾಜು ಪತ್ರಿಕೆಯಂತೆ ಟೆಂಡರಿಗೆ ಇಡಲಾದ ಮೊತ್ತ ರೂ: ರೂ. 1.69 ರಿಂದ 25.54 ಲಕ್ಷಗಳಲ್ಲಿ, ಟೆಂಡರಿಗೆ ಇಡಲಾದ ಇಎಂಡಿ ಮೊತ್ತ ರೂ:ರೂ.2,500.00 ರಿಂದ 60,000.00, ಟೆಂಡರ ಕುರಿತ ಪ್ರಶ್ನೆಗಳಿಗಾಗಿ / ಸ್ಪಷ್ಟೀಕರಣಗಳಿಗಾಗಿ ಕೊನೆಯ ದಿನಾಂಕ & ಸಮಯ:20-02-2024 ರ 17:00 ಘಂಟೆಯವರೆಗೆ, ಭರ್ತಿ ಮಾಡಿದ ಟೆಂಡರಗಳನ್ನು ಇ-ಪೋರ್ಟಲ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕ & ಸಮಯ:26-02-2024ರ 17:30 ಘಂಟೆಯ ವರೆಗೆ, ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ:28-02-2024 ರ 10:30 ಘಂಟೆಯ ನಂತರ.

ಗುತ್ತಿಗೆದಾರರ ಅರ್ಹತೆ /ಟೆಂಡರಿನ ನಿಯಮಗಳು / ಟೆಂಡರ್ ಪ್ರೋಸೆಸ್ಸಿಂಗ್ ಇತ್ಯಾದಿ ವಿವರಗಳಿಗೆ http:// https://kppp.karnataka.gov.in ಮೂಲಕ ಮೇಲೆ ತೋರಿಸಿದ ಅವಧಿಯಲ್ಲಿ ಮಾಹಿತಿ ಪಡೆಯಬಹುದು ಅಥವಾ ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು. ಟೆಂಡರಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.


ಸಹಿ/-ಕಾರ್ಯನಿರ್ವಾಹಕ ಇಂಜಿನೀಯರು,
ಕನೀನಿನಿ, ಜಿಆರ್‌ಬಿಸಿ ವಿಭಾಗ ನಂ. 2 ಹಿಡಕಲ್ ಡ್ಯಾಂ

DIPR/BGM/RO-NO-1158/KSMCA/2023-24

# ಈ ಆರೋಗ್ಯ ಸಮಸ್ಯೆ ಇರುವವರು ಬಾಳೆಹಣ್ಣು ತಿನ್ನಬೇಡಿ, ತೊಂದರೆ ಹೆಚ್ಚಾಗಬಹುದು

ಬಾಳೆಹಣ್ಣು ಆರೋಗ್ಯಕರ ಆಹಾರ ಎಂದೇ ಪರಿಗಣಿಸಲಾಗಿದೆ, ಜಿಮ್‌ಗೆ ಹೋಗುವ ಯುವಕರು ಹಾಲಿನೊಂದಿಗೆ ಬಾಳೆಹಣ್ಣನ್ನು ಸೇವಿಸುತ್ತಾರೆ. ಬಾಳೆಹಣ್ಣು ಕ್ಯಾಲೋರಿಗಳಿಂದ ತುಂಬಿರುತ್ತದೆ. ಬಾಳೆಹಣ್ಣು ಆರೋಗ್ಯಕರ ಆಹಾರ ಎಂದೇ ಪರಿಗಣಿಸಲಾಗಿದೆ, ಜಿಮ್ ಗೆ ಹೋಗುವ ಯುವಕರು ಹಾಲಿನೊಂದಿಗೆ ಬಾಳೆಹಣ್ಣನ್ನು ಸೇವಿಸುತ್ತಾರೆ. ಬಾಳೆಹಣ್ಣು ಕ್ಯಾಲೋರಿಗಳಿಂದ ತುಂಬಿರುತ್ತದೆ. ಈ ಕಾರಣ-ಕ್ಕಾಗಿ ಇದನ್ನು ಶಕ್ತಿಯ ಉತ್ತಮ ಮೂಲವೆಂದು ಪರಿಗಣಿಸಲಾಗಿದೆ. ಸಾಮಾನ್ಯವಾಗಿ ಸಂಬಂಧಿಕರಿಗೆ ಹೋಗುವಾಗಲೂ ಬಾಳೆಹಣ್ಣನ್ನು ಹಣ್ಣಾಗಿ ಖರೀದಿಸಿ ತಮ್ಮೊಂದಿಗೆ ತೆಗೆದುಕೊಂಡು ಹೋಗುತ್ತಾರೆ.

ದೈಹಿಕ ದೌರ್ಬಲ್ಯ ಇದ್ದಾಗ ಬಾಳೆಹಣ್ಣು ತಿನ್ನಲು ವೈದ್ಯರು ಶಿಫಾರಸು ಮಾಡುತ್ತಾರೆ. ಬಾಳೆಹಣ್ಣು ತಿನ್ನುವುದರಿಂದ ಆಗುವ ಪ್ರಯೋಜನಗಳನ್ನು ನೀವೂ ಕೇಳಿರಬೇಕು.



ಇಹಾಗಾಗಿ ಬಾಳೆಹಣ್ಣು ತಿನ್ನುವುದರಿಂದ ಮಾತ್ರ ಪ್ರಯೋಜನಗಳಿವೆ. ಇದರ ಪ್ರಯೋಜನಗಳ ಬಗ್ಗೆ ತಿಳಿದುಕೊಳ್ಳುವುದು ಅಷ್ಟೇ ಮುಖ್ಯ. ಬಾಳೆಹಣ್ಣನ್ನು ನಿಯಮಿತವಾಗಿ ಸೇವಿಸಿದರೆ, ಅದರ ಅನನುಕೂಲಗಳನ್ನು ಸಹ ಎದುರಿಸಬೇಕಾಗುತ್ತದೆ ಎಂದು ತಿಳಿಯುವುದು ಅಷ್ಟೇ ಮುಖ್ಯ. ರಕ್ತದಲ್ಲಿನ ಸಕ್ಕರೆ ಮಟ್ಟವು ಹೆಚ್ಚಾಗಬಹುದು ಮಧುಮೇಹ ಸಮಸ್ಯೆ ಇರುವವರು.

ಬಾಳೆಹಣ್ಣು ತಿನ್ನಬೇಡಿ ಎಂದು ವೈದ್ಯರು ಸಲಹೆ ನೀಡುತ್ತಾರೆ. ವಾಸ್ತವವಾಗಿ, ಬಾಳೆಹಣ್ಣು ಸಕ್ಕರೆಯಿಂದ ತುಂಬಿರುತ್ತದೆ. ಇದನ್ನು ತಿಂದರೆ ರಕ್ತದಲ್ಲಿ ಸಕ್ಕರೆ ಅಂಶ ಹೆಚ್ಚುತ್ತದೆ. ಇದು ಮಧುಮೇಹದ ಸಮಸ್ಯೆಯನ್ನು ಇನ್ನಷ್ಟು ಗಂಭೀರವಾಗಿಸಬಹುದು.

ನಿಮಗೆ ಹೊಟ್ಟೆಯ ಸಮಸ್ಯೆಗಳಿದ್ದರೆ ತಿನ್ನುವುದನ್ನು ತಪ್ಪಿಸಿ ಲೂಸ್ ಮೋಷನ್ ಆಗುತ್ತಿದ್ದರೆ ಬಾಳೆಹಣ್ಣು ತಿನ್ನಲು ಸಲಹೆ ನೀಡಲಾಗುತ್ತದೆ. ಆದರೆ ಹೊಟ್ಟೆ ಸರಿಯಾಗಿದ್ದರೆ ಹೆಚ್ಚು ಬಾಳೆಹಣ್ಣು ಹೊಟ್ಟೆಯಲ್ಲಿ ಮಲಬದ್ಧತೆಯ ಸಮಸ್ಯೆಯನ್ನು ಉಂಟುಮಾಡುತ್ತದೆ. ಇದು ವಾಯು ಮತ್ತು ಗ್ಯಾಸ್ ಸಮಸ್ಯೆಗಳಿಗೆ ಕಾರಣವಾಗಬಹುದು. ಮಲಬದ್ಧತೆ ಇರುವ ರೋಗಿಗಳು ಬಾಳೆಹಣ್ಣು ತಿನ್ನುವುದನ್ನು ತಪ್ಪಿಸಬೇಕು.

ಮೈಗ್ರೇನ್ ಸಮಸ್ಯೆಯಾಗಬಹುದು ಮೈಗ್ರೇನ್ ಮೆದುಳಿನ ಸಮಸ್ಯೆ. ತಲೆಯ ಅರ್ಧಭಾಗದಲ್ಲಿ ನೋವು ಇರುತ್ತದೆ. ಇದನ್ನು ಅರ್ಧ ಸೀಸೆ ನೋವು ಎಂದೂ ಕರೆ-ಯುತ್ತಾರೆ. ನೀವು ಮೈಗ್ರೇನ್ ಸಮಸ್ಯೆಯಿಂದ ಬಳಲುತ್ತಿದ್ದರೆ ಮತ್ತು ಬಾಳೆಹಣ್ಣು ತಿನ್ನುತ್ತಿದ್ದರೆ ಅದರಿಂದ ದೂರವಿರಬೇಕು. ಇದು ಮೈಗ್ರೇನ್ ಸಮಸ್ಯೆಯನ್ನು ಹೆಚ್ಚಿಸಬಹುದು. ವಾಸ್ತವವಾಗಿ, ಅಮೈನೊ ಆಸಿಡ್ ಟೈರೋಸಿನ್ ಮೈಗ್ರೇನ್‌ನಲ್ಲಿ ಕಂಡುಬರುತ್ತದೆ. ದೇಹವನ್ನು ತಲುಪಿದ ನಂತರ, ಅದು ಟೈರಮೈನ್ ಆಗಿ ಬದಲಾಗುತ್ತದೆ. ಈ ಕಾರಣದಿಂದಾಗಿ, ಮೈಗ್ರೇನ್ ಹೆಚ್ಚಾಗುವ ಸಾಧ್ಯತೆಯಿದೆ.

ಉಸಿರಾಟ ಮತ್ತು ಅಲರ್ಜಿ ಸಮಸ್ಯೆಗಳು ಹೆಚ್ಚಾಗಬಹುದು ಬಾಳೆಹಣ್ಣಿನ ಸ್ವಭಾವವನ್ನು ತಂಪಾಗಿ ಪರಿಗಣಿಸಲಾಗುತ್ತದೆ. ನೀವು ಈಗಾಗಲೇ ಉಸಿರಾಟದ ಸಮಸ್ಯೆಗಳೊಂದಿಗೆ ಹೋರಾಡುತ್ತಿದ್ದರೆ, ನೀವು ಬಾಳೆಹಣ್ಣು ತಿನ್ನುವುದನ್ನು ತಪ್ಪಿಸಬೇಕು. ಬಾಳೆಹಣ್ಣು ತಿನ್ನುವುದರಿಂದ ರೋಗಿಗಳಲ್ಲಿ ಉಸಿರಾಟದ ತೊಂದರೆ ಹೆಚ್ಚಾಗುತ್ತದೆ. ಇದಲ್ಲದೇ ಬಾಳೆಹಣ್ಣು ತಿನ್ನುವುದರಿಂದ ಕೆಲವರಲ್ಲಿ ಅಲರ್ಜಿ ಸಮಸ್ಯೆ ಹೆಚ್ಚಾಗತೊಡಗುತ್ತದೆ.

# ವರ್ಷಕ್ಕೆ ಕನಿಷ್ಠ 200 ದಿನ ಕೆಲಸ ನೀಡಿ



ಬೆಳಗಾವಿ: 'ನರೇಗಾ ಯೋಜನೆಯಡಿ ದುಡಿಯುವ ಕೃಷಿ ಕಾರ್ಮಿಕರಿಗೆ ವಾರ್ಷಿಕ ಕನಿಷ್ಠ 200 ದಿನ ಕೆಲಸ ನೀಡಬೇಕು' ಎಂದು ಆಗ್ರಹಿಸಿ, ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯವರು ಇಲ್ಲಿನ ರಾಣಿ ಚನ್ನಮ್ಮನ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಶುಕ್ರವಾರ ಪ್ರತಿಭಟನೆ ನಡೆಸಿದರು. ಆರ್ಥಿಕ ಸಂಕಷ್ಟದಲ್ಲಿರುವ ರೈತರು ಹಾಗೂ ಕಾರ್ಮಿಕರ ಸಾಲ ಮನ್ನಾ ಮಾಡಬೇಕು. ಡಾ.ಸ್ವಾಮಿನಾಥನ್ ವರದಿ ಜಾರಿ ಗೊಳಿಸಬೇಕು. ದೇಶದಾದ್ಯಂತ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿಗೊಳಿಸಬೇಕು ಸೇರಿದಂತೆ ಅನೇಕ ಬೇಡಿಕೆ ಮಂಡಿಸಿದರು. ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಮೆರವಣಿಗೆ ನಡೆಸಿ, ಜಿಲ್ಲಾಡಳಿತ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಸಿದಗೌಡ ಮೋದಗಿ, ಡಾ.ಜನಾರ್ದನ್, ಮಂದಾ ನೇವಗಿ, ನಾಗೇಶ ಸಾತೇರಿ, ಮಲ್ಲಿಕಾರ್ಜುನ ಡೊಂಗರಗಾವಿ, ಸಂಜು ಡೊಂಗರಗಾವಿ, ಶಿವಲೀಲಾ ಮಿಸಾಳೆ, ಗೀತಾ ಧರೆಣ್ಣವರ ಇತರರಿದ್ದರು.

# ಕಾರ್ಯಕರ್ತೆಯರಿಗೆ ಸಿಗಲಿದೆ 'ಸ್ಮಾರ್ಟ್‌ಫೋನ್'

ಬೆಳಗಾವಿ: 'ಅಂಗನವಾಡಿ ಕೇಂದ್ರಗಳ ಮೂಲಕ ಕೈಗೊಳ್ಳುವ ಚಟುವಟಿಕೆ ಸುಗಮಗೊಳಿಸಲು 90 ಕೋಟಿ ವೆಚ್ಚದಲ್ಲಿ 75,938 ಸ್ಮಾರ್ಟ್‌ಫೋನ್‌ಗಳನ್ನು ಒದಗಿಸಲಾಗುವುದು' ಎಂದು ಬಜೆಟ್‌ನಲ್ಲಿ ಘೋಷಿಸಿದ್ದು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಮೇಲ್ವಿಚಾರಕಿಯರಿಗೆ ನಿರಾಳವಾಗಿಸಿದೆ. ರಾಜ್ಯದಲ್ಲಿ 63 ಸಾವಿರಕ್ಕೂ ಹೆಚ್ಚು ಅಂಗನವಾಡಿ ಕಾರ್ಯಕರ್ತೆಯರಿಗೆ ಕೇಂದ್ರ ಸರ್ಕಾರದಿಂದ 'ಪೋಷಣ' ಅಭಿಯಾನದಡಿ 2020–21 ಸಾಲಿನಲ್ಲಿ ಸ್ಮಾರ್ಟ್‌ಫೋನ್ ವಿತರಿಸಲಾಗಿತ್ತು. ಆರಂಭಿಕ ದಿನಗಳಲ್ಲಿ ಈ ಮೊಬೈಲ್ ಸಮರ್ಪಕವಾಗಿ ಕಾರ್ಯನಿರ್ವಹಿಸಿದ್ದವು.

'ದಿನಕಳೆದಂತೆ ವಿವಿಧ ಇಲಾಖೆಗಳ ಸಮೀಕ್ಷೆ ಮತ್ತು ಚುನಾವಣೆ ಕರ್ತವ್ಯದ ಚಟುವಟಿಕೆಗಳನ್ನು ದಾಖಲಿಸುವ ಕೆಲಸ ನಡೆಯಿತು. ದಾಖಲೆಗಳ 'ಭಾರ' ಹೆಚ್ಚಾದಂತೆ, ಮೊಬೈಲ್ ಕಾರ್ಯಸಾಮರ್ಥ್ಯ ಕುಂದಿತು. ಇದರೊಂದಿಗೆ ಇಂಟರ್‌ನೆಟ್ ಸಮಸ್ಯೆ ಕಾಡತೊಡಗಿತು. ಈಗ ಮೊಬೈಲ್ ಬಳಕೆಯೇ ಕಷ್ಟಕರವಾಗಿದೆ. ಪದೇಪದೆ ಸ್ಥಗಿತಗೊಳ್ಳುತ್ತಿದೆ' ಎಂದು ಕಾರ್ಯಕರ್ತೆಯರು ಅಳಲು ತೋಡಿಕೊಂಡಿದ್ದರು. ಅಂಗನವಾಡಿ ಕಾರ್ಯಕರ್ತೆಯರಿಗೆ ಕೊಟ್ಟಿದ್ದ ಸ್ಮಾರ್ಟ್‌ಫೋನ್ ಹಾಳಾದ ಕುರಿತು 2023 ಜುಲೈ 23ರ ಸಂಚಿಕೆಯಲ್ಲಿ ಕಾರ್ಯ'ಭಾರ'ಕ್ಕೆ ಸೋತ ಅಂಗನವಾಡಿ 'ಸ್ಮಾರ್ಟ್‌ಫೋನ್' ಎಂಬ ಮುಖಪುಟ ವಿಶೇಷ ವರದಿ ಪ್ರಕಟವಾಗಿತ್ತು. ಅಂಗನವಾಡಿ ಕಾರ್ಯಕರ್ತೆಯರಿಗೆ ಸ್ಮಾರ್ಟ್‌ಫೋನ್ ಕೊಡಲು ಮುಂದಾಗಿರುವುದು ಸ್ವಾಗತಾರ್ಹ ನಿರ್ಧಾರ.

# 'ಯುವನಿಧಿ ಯೋಜನೆ'ಗೆ ಭರ್ಜರಿ ರೆಸ್ಪಾನ್ಸ್

ಬೆಂಗಳೂರು: ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಯಲ್ಲಿ ಯುವನಿಧಿ ಯೋಜನೆಯೂ ಒಂದಾಗಿದೆ. ಈ ಯೋಜನೆಗೆ ಭರ್ಜರಿ ರೆಸ್ಪಾನ್ಸ್ ದೊರೆತಿದೆ. ಇದುವರೆಗೆ 1,30,785 ಮಂದಿ ಅರ್ಜಿ ಸಲ್ಲಿಸಿದ್ದಾರೆ.

ಈ ಕುರಿತಂತೆ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಜಂಟಿ ನಿರ್ದೇಶಕರು ಮಾಹಿತಿ ನೀಡಿದ್ದು, ಕರ್ನಾಟಕ ರಾಜ್ಯದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯನ್ನು ದಿನಾಂಕ 26–12–2023ರಂದು ಸಿಎಂ ಸಿದ್ಧರಾಮಯ್ಯ ಉದ್ಘಾಟಿಸಿ,




ಚಾಲನೆ ನೀಡಿದ್ದರು ಎಂದಿದ್ದಾರೆ.

ದಿನಾಂಕ 26–12–2023ರಿಂದ ಸೇವಾಸಿಂಧು ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಕೆ ಆರಂಭಗೊಂಡಿತ್ತು.

ಅರ್ಹ ಅಭ್ಯರ್ಥಿಗಳಿಂದ ನೋಂದಣಿಗಾಗಿ ಯುವನಿಧಿ ಯೋಜನೆಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಪ್ರತಿದಿನ ಅರ್ಜಿ ಸಲ್ಲಿಸುತ್ತಿದ್ದಾರೆ. ಇದ–ಕ್ಕೆ ಯಾವುದೇ ಅಡಚಣೆ ಇಲ್ಲದಂತೆ ಅಭ್ಯರ್ಥಿಗಳಿಗೆ ನೋಂದಣಿ ಮಾಡಲು ಅವಕಾಶ ಕಲ್ಪಿಸಲಾಗಿದೆ ಎಂದರು.

ದಿನಾಂಕ 16–02–2024ರ ಸಾಯಂಕಾಲ 5.30 ಗಂಟೆಯವರೆಗೆ 1,30,785 ಅರ್ಜಿಗಳು ಸೇವಾಸಿಂಧು ಪೋರ್ಟಲ್ ನಲ್ಲಿ ದಾಖಲಾಗಿರುತ್ತದೆ. ಈ ಮೂಲಕ ಯುವನಿಧಿ ಯೋಜನೆಗೆ ಭರ್ಜರಿ ರೆಸ್ಪಾನ್ಸ್ ದೊರೆತಿದೆ ಎಂಬುದಾಗಿ ತಿಳಿಸಿದ್ದಾರೆ.

ಅಂದಹಾಗೇ ಯುವನಿಧಿ ಯೋಜನೆ ಅಡಿಯಲ್ಲಿ ನಿರುದ್ಯೋಗಿ ಪದವೀಧರರಿಗೆ ಪ್ರತಿ ತಿಂಗಳು ರೂ.3000 ಹಾಗೂ ಡಿಪ್ಲೋಮಾ ಪದವೀಧರರಿಗೆ ರೂ.1,500 ನಿರುದ್ಯೋಗ ಭತ್ಯೆಯನ್ನು ಸರ್ಕಾರದಿಂದ ನೀಡಲಾಗುತ್ತದೆ.

# ಕಲಾದಗಿಯಲ್ಲಿ ರಂಭಾಪುರಿ ಶ್ರೀಗಳ ಕಾರಿನತ್ತ ಚಪ್ಪಲಿ ಎಸೆತ





ಕಲಾದಗಿ: ಗ್ರಾಮದ ಗುರುಲಿಂಗೇಶ್ವರ ಪಂಚಗ್ರಹ ಸಂಸ್ಥಾನ ಮಠದ ಪೀಠಾಧಿಪತಿ ಆಯ್ಕೆ ವಿಚಾರಕ್ಕೆ ಸಂಬಂಧಿಸಿದ ವಿವಾದ ತಾರಕಕ್ಕೇರಿದ್ದು, ಬಾಳೆಹೊನ್ನುರು ರಂಭಾಪುರಿ ಪೀಠದ ವೀರಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ವಿರುದ್ಧ ಮಠದ ಭಕ್ತರು ಶನಿವಾರ ಪ್ರತಿಭಟನೆ ನಡೆಸಿದರು. ಗುರುಲಿಂಗೇಶ್ವರ ಮಠದ ವಿವಾದ ನ್ಯಾಯಾಲಯದಲ್ಲಿರುವಾಗಲೇ ಗಂಗಾಧರ ಸ್ವಾಮಿ ಮಠದ ದುರಸ್ತಿ ಕಾರ್ಯ ಮಾಡುವುದಕ್ಕೆ, ಮಠದ ಹೊಲ ಉಳುಮೆ ಮಾಡಿದ್ದಕ್ಕೆ ಆಕ್ರೋಶ ವ್ಯಕ್ತಪಡಿಸಿದರು. ಈ ಹಿನ್ನಲೆಯಲ್ಲಿ ರಂಭಾಪುರಿ ಶ್ರೀಗಳ ವಿರುದ್ಧ ಕಲಾದಗಿಯಲ್ಲಿ ಮಠದ ಭಕ್ತರು ಪ್ರತಿಭಟನೆ ನಡೆಸಿದರು.

ಬಸವಣ್ಣನ ಹೆಸರಿನಲ್ಲಿ ಸಮಾಜ ಒಡೆಯುವ ಕೆಲಸ: ರಂಭಾಪುರಿ ಪೀಠದ ಶಿವಾಚಾರ್ಯ ಸ್ವಾಮೀಜಿ

ಉದಗಟ್ಟಿ ಗ್ರಾಮಕ್ಕೆ ಅಡ್ಡ ಪಲ್ಲಕ್ಕಿ ಕಾರ್ಯಕ್ರಮಕ್ಕೆ ತೆರಳುತ್ತಿದ್ದ ಶ್ರೀಗಳ ಕಾರನ್ನು ನಿಲ್ಲಿಸುವಂತೆ ಭಕ್ತರು ಮುತ್ತಿಗೆ ಹಾಕಿದರು. ತಳ್ಳಾಟ, ನೂಕಾಟ ಉಂಟಾಗಿ ಬಿಗುವಿನ ವಾತಾವರಣ ನಿರ್ಮಾಣವಾಯಿತು. ರಂಭಾಪುರಿ ಶ್ರೀಗಳ ವಿರುದ್ಧ ಧಿಕ್ಕಾರ ಕೂಗಿ ಭಕ್ತರು ಆಕ್ರೋಶ ವ್ಯಕ್ತಪಡಿಸಿದರು. ಆಗ ಮಧ್ಯೆ ಪ್ರವೇಶಿಸಿದ ಪೊಲೀಸರು ಶ್ರೀಗಳಿದ್ದ ವಾಹನ ಹೋಗಲು ಅನುವು ಮಾಡಿಕೊಟ್ಟರು. ಆಗ ಮಹಿಳೆಯೊಬ್ಬರು ಕಾರಿನತ್ತ ಚಪ್ಪಲಿ ಎಸೆದರು.

# 'ಪ್ರಸ್ತಾವ ಮಾಡಿದರೂ ಅನುದಾನ ಘೋಷಿಸಿಲ್ಲ'

ಬೆಳಗಾವಿ: ಬೆಳಗಾವಿ ನಗರದಲ್ಲಿ 450 ಕೋಟಿ ವೆಚ್ಚದಲ್ಲಿ ಫ್ಲೈ ಓವರ್ ನಿರ್ಮಾಣ, ಖಾನಾಪುರದಲ್ಲಿ 280 ಕೋಟಿ ವೆಚ್ಚದಲ್ಲಿ 100 ಹಾಸಿಗೆಗಳ ತಾಲ್ಲೂಕು ಆಸ್ಪತ್ರೆ; ಈ ಎರಡನ್ನು ಬಿಟ್ಟರೆ ಬಜೆಟ್‌ನಲ್ಲಿ ಬೆಳಗಾವಿ ಜಿಲ್ಲೆಗೆ ಯಾವುದೇ ಅನುದಾನ ಘೋಷಣೆ ಮಾಡಿಲ್ಲ. ಧಾರ್ಮಿಕ ಸ್ಥಳ ಹಾಗೂ ಪ್ರವಾಸೋದ್ಯಮ ವೃದ್ಧಿ ನೀರಾವರಿಗೆ ಆದ್ಯತೆ ನೀಡುವುದಾಗಿ ತಿಳಿಸಲಾಗಿದೆ. ಆದರೆ, ಅನುದಾನ ಎಷ್ಟೆಂದು ಹೇಳಿಲ್ಲ.

ಬೆಳಗಾವಿ ನಗರದಲ್ಲಿ ವಾಹನ ಸಂಚಾರ ದಟ್ಟಣೆ ನಿವಾರಿಸಲು ಮೇಲ್ಸೇತುವೆ ನಿರ್ಮಿಸುವುದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ಕನಸು. ಬಜೆಟ್‌ನಲ್ಲಿ 450 ಕೋಟಿ ಅನುದಾನ ಮೀಸಲಿಡುವ ಮೂಲಕ ಅವರು ನನಸು ಮಾಡಿಕೊಂಡಿದ್ದಾರೆ. ರಾಷ್ಟ್ರೀಯ ಹೆದ್ದಾರಿಯಿಂದ ರಾಣಿ ಚನ್ನಮ್ಮ ವೃತ್ತದವರೆಗೆ (ಅಂದಾಜು 4.50 ಕಿ.ಮೀ) ಮೇಲ್ಸೇತುವೆ ನಿರ್ಮಾಣವಾಗಲಿದೆ.

ಜಿಲ್ಲೆಯಲ್ಲಿ ಖಾನಾಪುರ ತಾಲ್ಲೂಕು ಬಹುಪಾಲು ಕಾಡಿನಿಂದ ಕೂಡಿದೆ. ಪ್ರತಿ ವರ್ಷ ಅತಿವೃಷ್ಟಿ, ಪ್ರವಾಹದಿಂದ ಜನ ತತ್ತರಿಸುತ್ತಾರೆ. ಆರೋಗ್ಯ ಸಮಸ್ಯೆ ಹೆಚ್ಚಾಗಿ ಕಾಡುತ್ತದೆ. ಇದನ್ನು ಗಮನಿಸಿದ ಸರ್ಕಾರ 280 ಕೋಟಿ ವೆಚ್ಚದಲ್ಲಿ 100 ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆ ನಿರ್ಮಾಣಕ್ಕೆ



ಮುಂದಾಗಿದ್ದು, ಜನತೆಗೆ ದೊಡ್ಡ ಕೊಡುಗೆಯೇ ಸರಿ.

ಪ್ರಮುಖ ಏತ ನೀರಾವರಿಗಳಾದ ಅಮ್ಮಾಜೇಶ್ವರಿ, ಶ್ರೀ ಚನ್ನವೃಷಭೇಂದ್ರ, ಮಹಾಲಕ್ಷ್ಮೀ ಸತ್ತಿಗೇರಿ, ಮಾರ್ಕಂಡೇಯ, ಬೈಲಹೊಂಗಲ ವಿಧಾನಸಭಾ ಕ್ಷೇತ್ರದ ಹಳೆಯ ಏತ ನೀರಾವರಿ ಯೋಜನೆಗಳ ಪುನಶ್ಚೇತನ ಮಾಡುವುದಾಗಿ ಘೋಷಣೆ ಮಾಡಲಾಗಿದೆ. ಕೆರೆ ತುಂಬಿಸುವ ಯೋಜನೆಗಳಾದ ಅರಬಾವಿ, ಹಿರೆಬಾಗೇವಾಡಿ, ಸಂತಿ ಬಸ್ತವಾಡ, ಕಾಗವಾಡಗಳಲ್ಲಿ ಅನುಷ್ಠಾನ ನೆಕ್ಕಿ ಮಾಡಲಾಗಿದೆ.

ಅಧಿವೇಶನಕ್ಕೆ ಸಾಂಸ್ಕೃತಿಕ ಸ್ಪರ್ಶ: ಮಹಾತ್ಮ ಗಾಂಧಿಯವರ ಅಧ್ಯಕ್ಷತೆಯಲ್ಲಿ ನಡೆದ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಬಂದಿದೆ. ಗಾಂಧಿ ಅಧ್ಯಕ್ಷತೆಯಲ್ಲಿ ನಡೆದ ಏಕೈಕ ಅಧಿವೇಶನ ಇದು. ಇದರ ಸ್ಮರಣಾರ್ಥ ಬೆಳಗಾವಿಯಲ್ಲಿ 2 ಕೋಟಿ ವೆಚ್ಚದಲ್ಲಿ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಎಂದು ಘೋಷಿಸಿದ್ದು ಜನರಲ್ಲಿ ಸಂಭ್ರಮ ಮೂಡಿಸುವಂಥದ್ದು.

ಕಿತ್ತೂರು ಕರ್ನಾಟಕ ಭಾಗದಲ್ಲೂ ನೂತನ ಜವಳಿ ಪಾರ್ಕ್, ಬೆಳಗಾವಿ ನಗರದ ಸಮೀಪ ಇಂಟಿಗ್ರೇಟೆಡ್ ಟೌನ್‌ಶಿಪ್, ಜಿಲ್ಲಾಸ್ಪತ್ರೆಯಲ್ಲಿ ಪ್ರಯೋಗಾಲಯ (ಐಪಿಎಚ್‌ಎಲ್), ಎಲ್ಲ ವಾಹನಗಳ ದಾಖಲಾತಿಗಳ ಡಿಜಿಟಲೀಕರಣಕ್ಕಾಗಿ ಬೆಳಗಾವಿಯಲ್ಲೂ ಪ್ರಾಯೋಗಿಕ ಕಚೇರಿ ಆರಂಭ, ಬೆಳಗಾವಿ ಮಹಾನಗರದಲ್ಲಿ ವ್ಯಾಪಾರ ವಹಿವಾಟಿಗೆ ಮಧ್ಯರಾತ್ರಿ 1ರವರೆಗೆ ಅವಕಾಶ... ಇವು ಈ ಬಾರಿ ಜಿಲ್ಲೆಗೆ ದೊರೆತ ಪ್ರಮುಖ ಸೌಕರ್ಯಗಳು.

# ತಬ್ಬಲಿಯಾದ 'ತಾಯಿ ಮಕ್ಕಳ ಆಸ್ಪತ್ರೆ'

ಖಾನಾಪುರ: ಇಲ್ಲಿನ ತಾಲ್ಲೂಕು ಆಸ್ಪತ್ರೆ ಆವರಣದಲ್ಲಿ 15 ಕೋಟಿ ವೆಚ್ಚದಲ್ಲಿ ನಿರ್ಮಿಸಿದ 60 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ಉದ್ಘಾಟನೆಗೆ ಕಾಯುತ್ತಿದೆ. ಕಟ್ಟಡ ಪೂರ್ಣಗೊಂಡು ವರ್ಷವಾದರೂ ಜನಪ್ರತಿನಿಧಿಗಳು ಇದನ್ನು ಜನರಿಗೆ ಸಮರ್ಪಿಸಲು ಸಿದ್ಧರಿಲ್ಲ.

ತಾಲ್ಲೂಕು ಆಸ್ಪತ್ರೆಯು 260 ಹಳ್ಳಿಗಳ ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿದೆ. ಆಸ್ಪತ್ರೆಯ ಅಂಗಳ ಸದಾ ಜನದಟ್ಟಣೆಯಿಂದ ಕೂಡಿರುತ್ತದೆ. ಸ್ಥಳಾವಕಾಶ, ಸಿಬ್ಬಂದಿ ಹಾಗೂ ವೈದ್ಯರ ಅಭಾವ ಎದುರಿಸುತ್ತಿದೆ. ಈ ಆಸ್ಪತ್ರೆಗೆ ದಾಖಲಾಗುವ ಗರ್ಭಿಣಿಯರು, ಬಾಣಂತಿಯರು, ನವಜಾತ



ಶಿಶುಗಳ ಚಿಕಿತ್ಸೆ ಹಾಗೂ ಆರೈಕೆಗೆ ಸಮಸ್ಯೆ ಉಂಟಾಗುತ್ತಿದೆ.

ಈ ಸಮಸ್ಯೆ ಮನಗಂಡ ಮಾಜಿ ಶಾಸಕಿ ಡಾ.ಅಂಜಲಿ ನಿಂಬಾಳಕರ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ತಾಲ್ಲೂಕು ಆಸ್ಪತ್ರೆ ಆವರಣದಲ್ಲೇ 60 ಹಾಸಿಗೆಗಳ ಸಾಮರ್ಥ್ಯದ ತಾಯಿ ಮತ್ತು ಮಗುವಿನ ಆಸ್ಪತ್ರೆ ಮಂಜೂರು ಮಾಡಿಸಿದ್ದರು. 2022ರಲ್ಲಿ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭವಾಗಿ, 2023ರ ಮಾರ್ಚ್‌ನಲ್ಲಿ ಪೂರ್ಣಗೊಂಡಿತ್ತು. ಈಗ ವೈದ್ಯಕೀಯ ಉಪಕರಣಗಳು ಮತ್ತು ಸಿಬ್ಬಂದಿ ಒದಗಿಸಿದರೆ, ಆಸ್ಪತ್ರೆ ಕಾರ್ಯಾರಂಭ ಮಾಡಲಿದೆ. ತಾಯಿ ಮತ್ತು ಮಗುವಿನ ಆಸ್ಪತ್ರೆ ಆರಂಭಗೊಂಡಲ್ಲಿ ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಪ್ರಸವಪೂರ್ವ ಹಾಗೂ ನಂತರದ ಚಿಕಿತ್ಸೆಗಳು, ಮಕ್ಕಳಿಗೆ ವಿಶೇಷ ಚಿಕಿತ್ಸೆ ಮತ್ತು ಆರೈಕೆ ಲಭ್ಯವಾಗಲಿದೆ. ಜತೆಗೆ ಈಗಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ಉಂಟಾಗುತ್ತಿರುವ ಜನದಟ್ಟಣೆಯೂ ನಿಯಂತ್ರಣಕ್ಕೆ ಬರಲಿದೆ.

'ಶಸ್ತ್ರ ಚಿಕಿತ್ಸಾ ಕೊಠಡಿ, ತೀವ್ರ ನಿಗಾ ಘಟಕದ ಪರಿಕರಗಳು, ನವಜಾತ ಶಿಶುಗಳಿಗೆ ಇನ್ಸುಲೇಟರ್, ಅಗತ್ಯ ಪೀಠೋಪಕರಣ ಮತ್ತು ವೈದ್ಯಕೀಯ ಉಪಕರಣಗಳು ಇನ್ನೂ ಬಂದಿಲ್ಲ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವೈದ್ಯರು ಮತ್ತು ಸಿಬ್ಬಂದಿ ನಿಯೋಜನೆ ಕಾರ್ಯ ಪೂರ್ಣವಾಗಿಲ್ಲ. ಹೀಗಾಗಿ ಆಸ್ಪತ್ರೆ ಕಾರ್ಯನಿರ್ವಹಣೆ ಆರಂಭವಾಗಲು ವಿಳಂಬವಾಗಿದೆ' ಎನ್ನುತ್ತವೆ ಮೂಲಗಳು.

'ಮಾಜಿ ಶಾಸಕಿ ಅಂಜಲಿ ಹಾಗೂ ಹಾಲಿ ಶಾಸಕ ವಿಠ್ಠಲ ಹಲಗೇಕರ ನಡುವಿನ ಶೀತಲ ಸಮರಕ್ಕೆ ಹೊಸ ಆಸ್ಪತ್ರೆ ಬಲಿಪಶುವಾಗಿದೆ' ಎಂದು ತಾಲ್ಲೂಕಿನ ಜನತೆ ಆರೋಪಿಸುತ್ತಾರೆ.

ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಕಾರಣ ಶಾಸಕ ವಿಠ್ಠಲ ಹಲಗೇಕರ ಆಸ್ಪತ್ರೆ ಉದ್ಘಾಟಿಸಲು ಮನಸ್ಸು ಮಾಡುತ್ತಿಲ್ಲ. ಇದಕ್ಕೆ ತದ್ವಿರುದ್ಧವಾಗಿ ಡಾ.ಅಂಜಲಿ ಸಹ ಕ್ಷೇತ್ರದಲ್ಲಿ ಬಿಜೆಪಿ ಶಾಸಕರಿಗೆ 'ಕ್ರೆಡಿಟ್' ಹೋಗುತ್ತದೆ ಎಂದು ಹಿಂಜರಿಯುತ್ತಿದ್ದಾರೆ' ಎಂಬುದು ಎಂಇಎಸ್ ಮುಖಂಡ ಮುರಳೀಧರ ಪಾಟೀಲ ಆರೋಪ.

# ನೆರವಿನ ನಿರೀಕ್ಷೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರು

ಹುಬ್ಬಳ್ಳಿ: ಲಿಂಗತ್ವ ಅಲ್ಪಸಂಖ್ಯಾತರು ಮುಖ್ಯವಾಹಿನಿಗೆ ಬರಲು ದೊಡ್ಡ ಪ್ರಮಾಣದ ನೆರವು ಸಿಗದ ಕಾರಣ ಅವರು ಜೀವನ ನಿರ್ವಹಣೆಗೆ ಪರದಾಡುವಂತಾಗಿದೆ. ಲಿಂಗತ್ವ ಅಲ್ಪಸಂಖ್ಯಾತರು ಸ್ವಾವಲಂಬಿಯಾಗಿ ಜೀವನ ನಡೆಸಲು ಈ ಮೊದಲು 25 ಸಾವಿರ ಸಹಾಯಧನ ಸೇರಿ ಒಟ್ಟು 50 ಸಾವಿರ ಸಾಲ ಸೌಲಭ್ಯ ಸಿಗುತಿತ್ತು. ಕೋವಿಡ್ ಕಾರಣ ಇದನ್ನು ಬದಲಿಸಿ, ಮೂರು ವರ್ಷಗಳಿಂದ 30 ಸಾವಿರ ಪ್ರೋತ್ಸಾಹಧನ ಮಾತ್ರ ನೀಡಲಾಗುತ್ತಿದೆ. 2023–24ಸಾಲಿನಲ್ಲಿ ಆನ್‌ಲೈನ್ ಮೂಲಕ ಸಲ್ಲಿಕೆಯಾದ 32 ಪೈಕಿ 29 ಅರ್ಜಿಗಳನ್ನು ಪ್ರೋತ್ಸಾಹಧನಕ್ಕೆ ಆಯ್ಕೆ ಮಾಡಲಾಗಿದೆ. 'ಮಹಿಳೆಯರಿಗೆ ಜಾರಿಗೆ ತಂದ 'ಉದ್ಯೋಗಿನಿ' ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತರಿಗೆ ಆರ್ಥಿಕ ನೆರವು ನೀಡಲಾಗುತ್ತಿತ್ತು. 2021ರಿಂದ

ಈ ಯೋಜನೆಯಿಂದ ಇವರನ್ನು ಹೊರಗಿಡಲಾಗಿದೆ. 'ಮೈತ್ರಿ' ಯೋಜನೆಯಡಿ ಮಾಸಿಕ 500 ಪಿಂಚಣಿ ನೀಡಲಾಗುತ್ತಿತ್ತು. ಸದ್ಯ 800ಕ್ಕೆ ಹೆಚ್ಚಿಸಲಾಗಿದೆ. ಪ್ರೋತ್ಸಾಹಧನ ಹಾಗೂ ಪಿಂಚಣಿ ಮೂಲಕ ಸರ್ಕಾರ ನೀಡುವ ಅಲ್ಪ ಮೊತ್ತದಲ್ಲಿ ಜೀವನ ನಿರ್ವಹಣೆ ಕಷ್ಟಸಾಧ್ಯ' ಎಂಬುದು ಲಿಂಗತ್ವ ಅಲ್ಪಸಂಖ್ಯಾತರ ಅಳಲು. 'ಜೋಗಪ್ಪ, ಹಿಜಡಾ, ಕೋಥಿ, ಡಿ.ಡಿ, ಬೈಸೆಕ್ಶುಯಲ್ ಸೇರಿ 2,000 ಮಂದಿ ಲಿಂಗತ್ವ ಅಲ್ಪಸಂಖ್ಯಾತರು ಧಾರವಾಡ ಜಿಲ್ಲೆಯಲ್ಲಿದ್ದಾರೆ. ಸರ್ಕಾರ ಹಾಗೂ ಸರ್ಕಾರೇತರ ಸಂಸ್ಥೆಗಳು ನೀಡಿದ ನೆರವಿನೊಂದಿಗೆ ಕೆಲವರು ಹೈನುಗಾರಿಕೆ, ತರಕಾರಿ, ಮಾರಾಟದಲ್ಲಿ ತೊಡಗಿಕೊಂಡಿದ್ದಾರೆ. ಸ್ವಾವಲಂಬಿ ಜೀವನಕ್ಕೆ ಅಗತ್ಯವಿರುವಷ್ಟು ಆರ್ಥಿಕ ನೆರವು ಅಗತ್ಯವಿದೆ' ಎಂದು ಮತ್ತು ಸಾಮಾಜಿಕ ಸೇವಾ ಸಂಸ್ಥೆ ಅಧ್ಯಕ್ಷ ಪೆದ್ದಣ್ಣ ವಿ.ಕೋನಾಪುರ ತಿಳಿಸಿದರು.

ಗುರುತಿಸಿಕೊಳ್ಳಲು ಹಿಂಜರಿಕೆ: 'ಈ ಹಿಂದೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಅಧಿಕಾರಿಗಳು, ಸಂಸ್ಥೆಗಳ ನೆರವಿನೊಂದಿಗೆ ಲಿಂಗತ್ವ ಅಲ್ಪಸಂಖ್ಯಾತರಿಂದ ಅರ್ಜಿ ಸ್ವೀಕರಿಸಿ, ಪ್ರೋತ್ಸಾಹಧನ ಯೋಜನೆಗೆ ಫಲಾನುಭವಿಗಳನ್ನು ಆಯ್ಕೆ ಮಾಡುತ್ತಿದ್ದೆವು. ಈ ವರ್ಷದಿಂದ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕಿದೆ. ಇದಕ್ಕಾಗಿ ಕರ್ನಾಟಕ ಒನ್, ಗ್ರಾಮ ಒನ್, ಸೇವಾ ಸಿಂಧು ಕೇಂದ್ರಕ್ಕೆ ತೆರಳಬೇಕಿರುವುದರಿಂದ ಹಲವರು ಹಿಂಜರಿಯುವಂತಾಗಿದೆ. ತಾವು ಲಿಂಗತ್ವ ಅಲ್ಪಸಂಖ್ಯಾತರು ಎಂದು ಸಾರ್ವಜನಿಕವಾಗಿ ಗುರುತಿಸಿಕೊಳ್ಳಲು ಈಗಲೂ ಕೆಲವರು ಮುಂದಾಗುವುದಿಲ್ಲ' ಎಂದು ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.

# ವಿಶ್ವ ಗರು ಬಸವಣ್ಣ ಸಾಂಸ್ಕೃತಿಕ ನಾಯಕರ ಭಾವಚಿತ್ರ ಅನಾವರಣ



ಬೆಳಗಾವಿ: ರಾಜ್ಯ ಸರಕಾರ ವಿಶ್ವ ಗರು ಬಸವಣ್ಣ ಸಾಂಸ್ಕೃತಿಕ ನಾಯಕರು ಎಂದು ಘೋಷಿಸಿರುವ ಹಿನ್ನಲೆಯಲ್ಲಿ ಬೆಳಗಾವಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿಯಲ್ಲಿ ಶನಿವಾರ (ಫೆ.17)ವಿಶ್ವ ಗರು ಬಸವಣ್ಣ ಸಾಂಸ್ಕೃತಿಕ ನಾಯಕರ ಭಾವಚಿತ್ರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಕೋಣಿ ಅನಾವರಣಗೊಳಿಸಿದರು.


ಈ ವೇಳೆ ಶ್ರೀ ಬಸವೇಶ್ವರರ ಜೀವನ ಮತ್ತು ಸಮಾಜ ಸುಧಾರಣೆ–ಯ ಕುರಿತು ಮಾತನಾಡಿದರು.

ಸದರಿ ಕಾರ್ಯಕ್ರಮದಲ್ಲಿ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂಧಿಯವರಿಂದ ಬಸವಣ್ಣರವರ ವಚನ ಗಾಯನ ಏರ್ಪಡಿಸಲಾಗಿತ್ತು. ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯವರು ಉಪಸ್ಥಿತರಿದ್ದರು.

# ಪ್ರವಾಸೋದ್ಯಮ ಅಭಿವೃದ್ಧಿಗೆ ಸಿಗದ 'ಬಜೆಟ್' ಬಲ

ಗದಗ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶುಕ್ರವಾರ ಮಂಡಿಸಿದ ರಾಜ್ಯ ಬಜೆಟ್ ಜಿಲ್ಲೆಯ ಜನರಿಗೆ ತೀವ್ರ ನಿರಾಸೆ ಮೂಡಿಸಿದೆ. ಸಿಎಂ ಸಿದ್ದರಾಮಯ್ಯ ಸಂಪುಟದಲ್ಲಿ ಎಚ್.ಕೆ.ಪಾಟೀಲ ಪ್ರಭಾವಿ ಸಚಿವರಾಗಿದ್ದರೂ ಜಿಲ್ಲೆಗೆ ಯಾವುದೇ ಪ್ರಮುಖ ಯೋಜನೆಗಳು ಪ್ರಕಟವಾಗಿಲ್ಲ. ಹೆಚ್ಚಿನ ಅನುದಾನವೂ ಸಿಕ್ಕಿಲ್ಲ.

ಎಚ್.ಕೆ.ಪಾಟೀಲ ಪ್ರವಾಸೋದ್ಯಮ ಸಚಿವರೂ ಆಗಿರುವುದರಿಂದ ಜಿಲ್ಲೆಯ ಪ್ರವಾಸೋದ್ಯಮ ಕ್ಷೇತ್ರದ ಅಭಿವೃದ್ಧಿಗೆ ಈ ಬಾರಿಯ ಬಜೆಟ್‌ನಲ್ಲಿ ಸಾಕಷ್ಟು ಅನುದಾನ ಸಿಗಬಹುದು ಎಂಬ ನಿರೀಕ್ಷೆ ಹೆಚ್ಚಾಗಿತ್ತು. ಆದರೆ, ರಾಜ್ಯ ಬಜೆಟ್ ಜಿಲ್ಲೆಯ ಜನರ ನಿರೀಕ್ಷೆಗಳನ್ನು ಹುಸಿಯಾಗಿಸಿದೆ. ಪಕ್ಕದ ಜಿಲ್ಲೆಯಲ್ಲಿರುವ ಅಂಜನಾದ್ರಿ ಅಭಿವೃದ್ಧಿಗೆ ಬಜೆಟ್‌ನಲ್ಲಿ 100 ಕೋಟಿ ಪ್ರಕಟಿಸಲಾಗಿದೆ. ಆದರೆ, ಜಿಲ್ಲೆಯ ಲಕ್ಕುಂಡಿ ಅಭಿವೃದ್ಧಿಗೆ



ಬಿಡಿಗಾಸು ಕೊಟ್ಟಿಲ್ಲ ಎಂಬ ಕೊರಗು ಜಿಲ್ಲೆಯ ಜನರನ್ನು ಕಾಡಿದೆ.

ಜಿಲ್ಲೆಯ ಪ್ರವಾಸೋದ್ಯಮ ಕ್ಷೇತ್ರಗಳ ಸಮಗ್ರ ಅಭಿವೃದ್ಧಿಗಾಗಿ ಸಚಿವ ಎಚ್. ಕೆ.ಪಾಟೀಲ ಅವರು ವೈಯಕ್ತಿಕ ಆಸಕ್ತಿ ಪ್ರಕಟಿಸಿ, ಅದಕ್ಕಾಗಿಯೇ ಒಂದು ಸಮಿತಿ ರಚನೆ ಮಾಡಿ, ಜಿಲ್ಲೆಯಲ್ಲಿನ ಸತ್ವಯುತ ಪ್ರವಾಸಿತಾಣಗಳ ಬಗ್ಗೆ ತಿಂಗಳುಗಟ್ಟಲೆ ಅಧ್ಯಯನ ಮಾಡಿಸಿ, ಅವರಿಂದ ವರದಿ ಪಡೆದುಕೊಂಡು ಸರ್ಕಾರಕ್ಕೆ ಸಲ್ಲಿಸಿದ್ದರು.

ಗದಗ ಜಿಲ್ಲೆಯ ಪ್ರವಾಸೋದ್ಯಮ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ 804 ಕೋಟಿ ಅವಶ್ಯಕತೆ ಇದೆ ಎಂದು ಸಮಿತಿ ವರದಿ ನೀಡಿತ್ತು. ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಒಮ್ಮೆಲೆ 804 ಕೋಟಿ ಅನುದಾನ ಘೋಷಿಸಲು ಸಾಧ್ಯವಾಗದಿದ್ದರೂ; ಅದರಲ್ಲಿ ಕಾಲು ಭಾಗ ಹಣವನ್ನಾದರೂ ಕೊಟ್ಟಿದ್ದರೆ ಜಿಲ್ಲೆಯ ಪ್ರವಾಸೋದ್ಯಮ ಅಭಿವೃದ್ಧಿ ಕನಸಿಗೆ ರೆಕ್ಕೆ ಮೂಡುತ್ತಿತ್ತು. ಆದರೆ, ಅದು ಆಗಿಲ್ಲ. ಈ ಬಾರಿಯ ಬಜೆಟ್‌ನಲ್ಲಿ 'ಗದಗ ಜಿಲ್ಲೆಯ ಕಪ್ಪತ್ತಗುಡ್ಡದಲ್ಲಿ ಪರಿಸರ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗುವುದು' 'ಜವಳಿ ಪಾರ್ಕ್‌ಗಳು ಇಲ್ಲದಿರುವ ರಾಜ್ಯದ 25 ಜಿಲ್ಲೆಗಳಲ್ಲಿ ಮಿನಿ ಜವಳಿ ಪಾರ್ಕ್‌ಗಳನ್ನು ಸ್ಥಾಪಿಸುವ ಮೂಲಕ ಉದ್ದಿಮೆದಾರರಿಗೆ ಮೂಲಸೌಕರ್ಯಕ್ಕಾಗಿ ಜವಳಿ ನೀತಿ ಅನ್ವಯ ಸಹಾಯಧನ ನೀಡಲಾಗುವುದು' ಎಂದು ತಿಳಿಸಲಾಗಿದೆ. ಆದರೆ, ಗದಗ ಜಿಲ್ಲೆಗೂ ಮಿನಿ ಜವಳಿ ಪಾರ್ಕ್ ಬರುತ್ತದೆ–ಯೇ ಎಂಬುದರ ಬಗ್ಗೆ ಸ್ಪಷ್ಟತೆ ಇಲ್ಲ.

350 ಕೋಟಿ ವೆಚ್ಚದಲ್ಲಿ ರಾಜ್ಯದ ಆರು ಕಡೆಗಳಲ್ಲಿ ರೈಲ್ವೆ ಮೇಲು ಹಾಗೂ ಕೆಳಸೇತುವೆಗಳ ನಿರ್ಮಾಣಕ್ಕೆ ಹಣ ಮೀಸಲಿಟ್ಟಿದ್ದು, ಈ ಪೈಕಿ ಗದಗ ಜಿಲ್ಲೆಯ ರೋಣ ತಾಲ್ಲೂಕಿನ ಮಲ್ಲಾಪುರ ಕೂಡ ಸೇರಿದೆ. ಅದೇರೀತಿ, 50 ಕೋಟಿ ವೆಚ್ಚದಲ್ಲಿ ರಾಜ್ಯದ ಐದು ಕಡೆಗಳಲ್ಲಿ ಶೀತಲಗೃಹ ನಿರ್ಮಾಣ ಮಾಡುವುದಾಗಿ ಪ್ರಕಟಿಸಿದ್ದು, ಅದರಲ್ಲಿ ಗದಗ ಎಪಿಎಂಸಿ ಹೆಸರಿದೆ. ಕಳೆದ ಬಜೆಟ್‌ನಲ್ಲೇ ಪ್ರಕಟಿಸಿದಂತೆ ಈ ಬಾರಿ ಶಿರಹಟ್ಟಿಯಲ್ಲಿ 100 ಹಾಸಿಗೆ ಸಾಮರ್ಥ್ಯದ ತಾಲ್ಲೂಕು ಆಸ್ಪತ್ರೆ ನಿರ್ಮಾಣ ಮಾಡುವುದಾಗಿ ತಿಳಿಸಲಾಗಿದೆ. ಗದಗ ಜಿಲ್ಲೆಯ ರೋಣದಲ್ಲಿ ನಬಾರ್ಡ್ ಸಹಯೋಗದಲ್ಲಿ ಹಾಗೂ ಬಳ್ಳಾರಿ ಮತ್ತು ಚಿತ್ರದುರ್ಗದಲ್ಲಿ ಜಿಲ್ಲಾ ಖನಿಜ ನಿಧಿಯ ಮೂಲಕ ಒಟ್ಟು 150 ಕೋಟಿ ವೆಚ್ಚದಲ್ಲಿ ಹೊಸ ಜಿಟಿಟಿಸಿ ಪ್ರಾರಂಭಿಸಲಾಗುವುದು ಎಂದು ತಿಳಿಸಲಾಗಿದೆ.

# ಭವಿಷ್ಯದ ಪೀಳಿಗೆಯ ಆರೋಗ್ಯ ವೃತ್ತಿಪರರನ್ನು ರೂಪಿಸುವಲ್ಲಿ ವೈದ್ಯಕೀಯ ಶಿಕ್ಷಕರ ಪಾತ್ರ ಅತ್ಯಂತ ನಿರ್ಣಾಯಕ

ಬೆಳಗಾವಿ: ಭವಿಷ್ಯದ ಪೀಳಿಗೆಯ ಆರೋಗ್ಯ ವೃತ್ತಿಪರರನ್ನು ರೂಪಿಸುವಲ್ಲಿ ವೈದ್ಯಕೀಯ ಶಿಕ್ಷಕರ ಪಾತ್ರ ಅತ್ಯಂತ ನಿರ್ಣಾಯಕವಾಗಿದೆ. ವೈದ್ಯಕೀಯ ಮಹಾವಿದ್ಯಾಲಯ ಪ್ರವೇಶಿಸುವ ಯುವ ಮನಸ್ಸುಗಳನ್ನು ಪೋಷಿಸಿ ಕೌಶಲ್ಯಭರಿತ ತರಬೇತಿ ನೀಡಿ, ಸಮಗ್ರವಾಗಿ ಅಭಿವೃದ್ಧಿಪಡಿಸುವ ಅಗತ್ಯವಿದೆ ಎಂದು ಜೆಎನ್ ವೈದ್ಯಕೀಯ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯರಾದ ಡಾ. ಎ. ಎಸ್ ಗೋಧಿ ಅವರು ಹೇಳಿದರು.

ಆಂಧ್ರಪ್ರದೇಶದ ವಿಶಾಖಪಟ್ಟಣಂನಲ್ಲಿ ಇತ್ತೀಚೆಗೆ ನಡೆದ ಅಸೋಸಿಯೇಶನ್ ಆಫ್ ಸರ್ಜನ್ಸ್ ಆಫ್ ಇಂಡಿಯಾ (ಎಎಸ್‌ಐ) ಏರ್ಪಡಿಸಿದ್ದ ರಾಷ್ಟ್ರೀಯ ಸಮ್ಮೇಳನದಲ್ಲಿ ದತ್ತಿ



ಉಪನ್ಯಾಸ ನೀಡಿದ ಅವರು, ವೈದ್ಯಕೀಯ ವಿದ್ಯಾರ್ಥಿಗಳಿಗೆ ಕಳೆದ 45 ವರ್ಷಗಳಿಂದ ಉಪನ್ಯಾಸ ನೀಡುತ್ತಿದ್ದೇನೆ. ಇಷ್ಟು ವರ್ಷಗಳಲ್ಲಿ ವೈದ್ಯವಿಜ್ಞಾನ ಸಾಕಷ್ಟು ಅಭಿವೃದ್ಧಿ ಕಂಡಿದೆ. ಅದರಂತೆ ವೈದ್ಯಕೀಯ ಶಿಕ್ಷಣದಲ್ಲಿಯೂ ಕೂಡ ಹಲವು ಬದಲಾವಣೆಗಳಾಗಿವೆ. ಅದರಂತೆ ಶೀಘ್ರ ರೋಗ ನಿರ್ಣಯ ಹಾಗೂ ತ್ವರಿತ ಚಿಕಿತ್ಸೆವರೆಗೂ ತಂತ್ರಜ್ಞಾನ ಸಾಕಷ್ಟು ಸಹಕಾರ ನೀಡುತ್ತಿದೆ ಎಂದರು.

ಸಾಂಪ್ರದಾಯಿಕ ಬೋಧನಾ ವಿಧಾನಗಳಿಂದ ಕಪ್ಪು ಹಲಗೆಗಳ ಮೇಲಿನ ರೇಖಾಚಿತ್ರ ವಿವರಣೆಗಳು, ತಾಂತ್ರಿಕ ಪ್ರಗತಿಗಳು ಮತ್ತು ಮಲ್ಟಿಮೀಡಿಯಾ ಉಪಕರಣಗಳ ಪ್ರಸ್ತುತ ಯುಗ–ಕ್ಕೆ ವಿಕಾಸಕ್ಕೆ ಅನುಕೂಲವನ್ನು ಕಲ್ಪಿಸಿವೆ. ರೋಗ ನಿರ್ಣಯದಲ್ಲಿ ತೀವ್ರತರವಾದ ಅಭಿವೃದ್ಧಿ ಹೊಂದಿದ್ದು, ಚಿಕಿತ್ಸೆ ನೀಡಿ ಜೀವ ಉಳಿಸುವಲ್ಲಿ ಪ್ರಮುಖಪಾತ್ರವಹಿಸುತ್ತಿದೆ. ಸಮಕಾಲೀನ ವೈದ್ಯಕೀಯ ಶಿಕ್ಷಣದಲ್ಲಿ ಸಿಮ್ಯುಲೇಶನ ಸಾಕಷ್ಟು ಪ್ರಾಮುಖ್ಯತೆ ಪಡೆಯುತ್ತಿದೆ. ಭವಿಷ್ಯದಲ್ಲಿ ಕೃತಕ ಬುದ್ಧಿಮತ್ತೆಯ ವರ್ಚುವಲ್ ಮತ್ತು ವರ್ಧಿತ ರಿಯಾಲಿಟಿಯು ಶಸ್ತ್ರಚಿಕಿತ್ಸಾ ವಿಧಾನದಲ್ಲಿ ಪ್ರಾಬಲ್ಯವನ್ನು ಸಾಧಿಸಲಿದೆ.

ಆದ್ದರಿಂದ ತಂತ್ರಜ್ಞಾನದೊಂದಿಗೆ ನಾವೂ ಕೂಡ ಮುನ್ನಡೆಯಬೇಕು ಎಂದು ಕರೆ ನೀಡಿದರು.ನಾಲ್ಕು ದಶಕಗಳಿಂದ ಉತ್ತೀರ್ಣರಾದ ವಿದ್ಯಾರ್ಥಿಗಳಿಂದ ನನಗೆ ಸಾಕಷ್ಟು ಮೆಚ್ಚುಗೆ ಹಾಗೂ ಮನ್ನಣೆ ಲಭಿಸಿದ್ದು ಸಾಕಷ್ಟು ಕೃತಜ್ಞನಾಗಿದ್ದೇನೆ ಎಂದ ಅವರು, ವೈದ್ಯಕೀಯ ಶಿಕ್ಷಣದ ವಿಕಾಸ ಮತ್ತು ಮೌಲ್ಯಯುತ ದೃಷ್ಟಿಕೋನಗಳನ್ನು ಒದಗಿಸುತ್ತಿದೆ. ಆರೋಗ್ಯ ಕ್ಷೇತ್ರದಲ್ಲಿ ಕ್ರಿಯಾತ್ಮಕವಾದ ಅವಶ್ಯಕತೆಗಳನ್ನು ಪೂರೈಸಲು ಬೋಧನಾ ತಂತ್ರಗಳನ್ನು ಅಳವಡಿಸಿಕೊಳ್ಳುವದು ಮುಖ್ಯವಾಗಿದೆ ಎಂದು ತಿಳಿಸಿದರು.ಎಎಸ್‌ಐ ಉಪಾಧ್ಯಕ್ಷರಾದ ಡಾ.ಪ್ರವೀಣ್ ಸೂರ್ಯವಂಶಿ ಮತ್ತು ಕೆಎಂಸಿ ಮಣ ಪಾಲದ ಡಾ.ರಾಜಗೋಪಾಲ್ ಶೆಣೈ ಅವರು ಡಾ.ಅಶೋಕ್ ಗೋಧಿ ಅವರನ್ನು ಸನ್ಮಾನಿಸಿದರು. ಸಮ್ಮೇಳನದಲ್ಲಿ 800 ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದರು.

# ಮಧ್ವನವಮಿ ಆಚರಣೆ



ಬೆಳಗಾವಿ: ಇಲ್ಲಿಯ ರೈಲ್ವೆ ಮೇಲ್ಸೇತುವೆ ಬಳಿಯ ವಿದ್ಯಾ ವಿಹಾರ ವಿದ್ಯಾಪೀಠ, ಶ್ರೀ ರಾಘವೇಂದ್ರ ಸ್ವಾಮಿಗಳಮಠದಲ್ಲಿ ಶ್ರೀ ಮಧ್ವನವಮಿ ಮಹೋತ್ಸವ ನಡೆಯಲಿದೆ.

ಫೆ.18ರಂದು ವಿಶೇಷ ಪೂಜೆ, ಪಂಚಾಮೃತ, ವಿಶೇಷ ಅಲಂಕಾರ, ಭಜನೆ,ಪಾರಾಯಣ, ಅರ್ಚನೆ, ಪ್ರವಚನ , ಮಹಾಪ್ರಸಾದ ಜರುಗುವುದು. ಶ್ರೀ ಮಧ್ವನವಮಿ ಮಹೋತ್ಸವದಲ್ಲಿ ಪಾಲ್ಗೊಂಡು

ಶ್ರೀ ಗುರುಗಳ ಅನುಗ್ರಹಕ್ಕೆ ಪಾತ್ರರಾಗುವಂತೆ ಸಂಘಟಕರು ಕೋರಿದ್ದಾರೆ.

## ನೂತನ ಪದಾಧಿಕಾರಿಗಳ ಆಯ್ಕೆ



ಬೆಳಗಾವಿ: ನಗರದ ತುಕಾರಾಮ ಸಭಾಂಗಣದಲ್ಲಿ ಗುರುವಾರ ರಾಜಮಾತಾ ಜಿಜಾವು ಸಾಂಸ್ಕೃತಿಕ ಪ್ರತಿಷ್ಠಾನದ ಪದಗ್ರಹಣ ಕಾರ್ಯಕ್ರಮ ಜರುಗಿತು.

ಕಾಂಚನ ಚೌಗುಲೆ, ಗೀತಾಂಜಲಿ ಚೌಗುಲೆ, ನಮ್ರತಾ ಹುಂಡ್ರೆ, ಆಶಾರಾಣಿ ನಿಂಬಾಳ್ಕರ್, ನೀನಾ ಕಾಕತ್ಕರ್ ಅವರನ್ನು ಬೆಳಗಾವಿ ಜಿಲ್ಲೆಯ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ಕಾರ್ಯದರ್ಶಿಗಳಾಗಿ ಮಂಗಲ ಪಾಟೀಲ, ನಿಶಿತಾ ಕದಮ್, ಚಂದ್ರ ಚೋಪ್ರಾ, ಲಕ್ಷ್ಮೀ ಗೌಂಡಾಡ್ಕರ್ ಅವರು, ಉಪಾಧ್ಯಕ್ಷರಾಗಿ ದೀಪಾಲಿ ಮಲ್ಕರಿ, ಸ್ವಾತಿ ಫಡ್ಕೆ, ವೃಷಾಲಿ ಮೋರೆ ಅವರು ಆಯ್ಕೆಯಾಗಿದರು. ಪ್ರತಿಷ್ಠಾನದ ಸಂಸ್ಥಾಪಕಿ ಡಾ.ಸೋನಾಲಿ ಸರ್ನೋಬತ್ ಮಾತನಾಡಿ, 2000ರಲ್ಲಿ ಪ್ರತಿಷ್ಠಾನ ಸ್ಥಾಪಿಸಲಾಗಿದೆ.

ಇದು ರಾಜಕೀಯ ವೇದಿಕೆಯಲ್ಲ. ನಮ್ಮ ಗಮನ ಸಾಮಾಜಿಕ ಕಲ್ಯಾಣ ಮತ್ತು ಸಂಸ್ಕೃತಿ ಪ್ರಚಾರದ ಮೇಲೆ ಇರುತ್ತದೆ. ಮಹಿಳೆಯರ ಮೇಲಿನ ಅನ್ಯಾಯ ಸಹಿಸುವುದಿಲ್ಲ. ಪ್ರತಿ ಜಿಲ್ಲೆ ಮತ್ತು ರಾಜ್ಯದಲ್ಲಿ ಶಾಖೆ ತೆರೆಯುವ ಉದ್ದೇಶ ಹೊಂದಿದ್ದೇವೆ ಎಂದರು. ಸುನೀತಾ ಪಟಾಂಕರ್, ಮನೀಷಾ ನೇಸರ್ಕರ್ ಮಾತನಾಡಿದರು. ಕಿಶೋರ್ ಕಾಕಡೆ ನಿರೂಪಿಸಿದರು. 300ಕ್ಕೂ ಅಧಿಕ ಮಹಿಳೆಯರು ಪಾಲ್ಗೊಂಡಿದ್ದರು.

## ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024–25ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ತೋಟಗಾರಿಕೆ ಬೆಳೆಗಳಾದ ಬಾಳೆ, ದ್ರಾಕ್ಷಿ, ದಾಳಿಂಬೆ, ಮಾವು, ಅಂಜೂರ, ಡ್ರಾಗನ್ ಹಣ್ಣು, ಗೇರು, ಸ್ಟ್ರಾಬೇರಿ, ಜಾಮುನು, ಪೇರಲ, ಬೆಣ್ಣೆ ಹಣ್ಣು, ಹೈಬ್ರಿಡ್ ತರಕಾರಿ ಹಾಗೂ ವಿವಿಧ ಹೂವು ಬೆಳೆಗಳ ಮೇಲೆ ಸಹಾಯಧನವನ್ನು ನೀಡಲು ಅರ್ಜಿಯನ್ನು ಆಹ್ವಾನಿಸಲಾಗಿದೆ.

ಬೆಳೆಗಳ ಅನುಗುಣವಾಗಿ ರೂ. 10,000 ಗಳಿಂದ ರೂ. 30,000 ಪ್ರತಿ ಹೆಕ್ಟೇರ್ ಸಹಾಯಧನವನ್ನು ಹಾಗೂ ನೀರಾವರಿ ವ್ಯವಸ್ಥೆಗಾಗಿ ಸಮುದಾಯ ಕೃಷಿ ಹೊಂಡಕ್ಕೆ ರೂ. 4.00 ರಿಂದ 5.32 ಲಕ್ಷಗಳ ವರೆಗೆ ಹಾಗೂ ವೈಯಕ್ತಿಕ ಕೃಷಿಹೊಂಡಕ್ಕೆ ರೂ. 75,000 ಗಳ ಸಹಾಯಧನ ನೀಡಲಾಗುವುದು.

ಸಂರಕ್ಷಿತ ಬೇಸಾಯ ಪದ್ಧತಿ ಅಳವಡಿಸಿಕೊಂಡು ಪಾಲಿಮನೆ ನಿರ್ಮಿಸಲು ಪ್ರತಿ 10 ಗುಂಟೆಗೆ ರೂ. 4.70 ಲಕ್ಷಗಳ ಹಾಗೂ ಪ್ಲಾಸ್ಟಿಕ್ ಹೊದಿಕೆಗಾಗಿ ರೂ. 16,000 ಪ್ರತಿ ಹೆಕ್ಟೇರ್‌ರಂತೆ ಸಹಾಯಧನವನ್ನು ನೀಡಲಾಗುವುದು.

ಅಷ್ಟೇ ಅಲ್ಲದೆ ಕೋಯ್ಲೋತ್ತರ ನಿರ್ವಹಣೆಗಾಗಿ ಪ್ಯಾಕ್‌ಹೌಸ್ ನಿರ್ಮಿಸಿಕೊಳ್ಳಲು ಗರಿಷ್ಠ 2 ಲಕ್ಷ, ಪ್ರಾಥಮಿಕ ಸಂಸ್ಕರಣಾ ಘಟಕ ನಿರ್ಮಿಸಲು ಗರಿಷ್ಠ 10 ಲಕ್ಷ, ಹಣ್ಣು ಮಾಗಿಸುವ ಘಟಕಕ್ಕೆ ಪ್ರತಿ ಟನ್‌ಗೆ ರೂ. 35,000 ರಂತೆ ಗರಿಷ್ಠ 300 ಟನ್ ಸಾಮರ್ಥ್ಯದ ವರೆಗೆ ಪ್ರತಿ ಫಲಾನುಭವಿಗಳಿಗೆ ಸಹಾಯಧನ ನೀಡಲಾಗುವುದು.

ತರಕಾರಿ ಮತ್ತು ಹಣ್ಣು ಮಾರಾಟ ಮಾಡಲು ತಳ್ಳುವ ಗಾಡಿಗೆ ರೂ. 15,000 ಸಹಾಯಧನವನ್ನು ಮಾರ್ಗಸೂಚಿಯನ್ವಯ ವೆಚ್ಚವನ್ನು ಪರಿಗಣಿಸಿ ಸಹಾಯಧನ ನೀಡಲಾಗುವುದು. ಆಸಕ್ತ ರೈತರು ತಮ್ಮ ತಾಲೂಕಿನ ತೋಟಗಾರಿಕೆ ಇಲಾಖೆಗೆ ಬೇಟಿ ನೀಡಿ ಹೆಚ್ಚಿನ ಮಾಹಿತಿ ಪಡೆದುಕೊಂಡು ಅರ್ಜಿ ಸಲ್ಲಿಸಲು ಬೆಳಗಾವಿ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಲ್ಪಸಂಖ್ಯಾತರಿಗೆ ಸ್ವಯಂ ಉದ್ಯೋಗ ಮಾಡುಲು ಸಾಲ ಹಾಗೂ ಸಹಾಯಧನಕ್ಕೆ ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿಗೆ ಅಲ್ಪಸಂಖ್ಯಾತರ ಜನಾಂಗದವರಾಗಿದ ಮುಸ್ಲಿಂ,ಜೈನ, ಕ್ರಿಶ್ಚಿಯನ್, ಬೌದ್ಧ, ಸಿಖ್ಖ, ಪಾರ್ಸಿ ಸಮುದಾಯದವರು ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ವ್ಯಾಪಾರ, ಸಣ್ಣ ಪ್ರಮಾಣದ ಗುಡಿ ಕೈಗಾರಿಕೆ, ಸೇವಾ ಕ್ಷೇತ್ರ, ಕೃಷಿ ಆಧಾರಿತ ಚಟುವಟಿಕೆಗಳು ಮುಂತಾದವುಗಳನ್ನು ಪ್ರಾರಂಭಿಸಲು ಸಾಲ ಮತ್ತು ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತರು ಫೆ. 29 ಒಳಗಾಗಿ ವೆಬ್‌ಸೈಟ್ kmdconline.karnataka.gov.in ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಬೆಳಗಾವಿಯ ರಾಮತೀರ್ಥ ನಗರದಲ್ಲಿ ಮೌಲಾನಾ ಆಝಾದ ಅಲ್ಪಸಂಖ್ಯಾತರ ಭವನವನಕ್ಕೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಅಥವಾ ದೂರವಾಣಿ 0831–2950794 ಸಂಖ್ಯೆಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ, ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: 2024–25 ನೇ ಸಾಲಿಗೆ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಗಳ 6 ನೇ ತರಗತಿಗಳಿಗೆ ಪ್ರವೇಶ ಪಡೆಯಲು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬುದ್ದಿಸ್ಟ್, ಸಿಖ್, ಪಾರ್ಸಿ, ಪ.ಜಾತಿ/ಪ.ಪಂಗಡ ಹಾಗೂ ಇತರೆ ಹಿಂದುಳಿತ ವರ್ಗಗಳ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ವಿದ್ಯಾರ್ಥಿಗಳು ಹಾಗೂ ಪಾಲಕರು ಮಾ.15 ರ ಒಳಗಾಗಿ ಸೇವಾ ಸಿಂಧು ಪೋರ್ಟಲ್ ಲಿಂಕ್ https://sevasindhuservices.karnataka.gov.in ಮುಖಾಂತರ ಅರ್ಜಿ ಸಲ್ಲಿಸಬಹುದು. ಇತರೆ ವಿವರಗಳನ್ನು https://dom.karnataka.gov.in ಲಿಂಕ್‌ನಲ್ಲಿ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು, ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಜಿಲ್ಲಾ ಅಥವಾ ತಾಲ್ಲೂಕು ಕಛೇರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಡಾ. ಅಬ್ದುಲರಶೀದ ಮಿರ್ಜನ್ನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 15 ಕೋಟಿ ವೆಚ್ಚದಲ್ಲಿ 60 ಹಾಸಿಗೆಗಳ ಅಸ್ಪತ್ರೆ ಸಿದ್ಧ; ಶಾಸಕ ಮಾಜಿ ಶಾಸಕಿ ನಿರಾಸಕ್ತಿಯಿಂದ ಹಿನ್ನಡೆ

# ಖಾನಾಪುರ: ತಬ್ಬಲಿಯಾದ 'ತಾಯಿ ಮತ್ತು ಮಕ್ಕಳ ಆಸ್ಪತ್ರೆ'

ಖಾನಾಪುರದಲ್ಲಿ ನಿರ್ಮಿಸಿದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ



ಖಾನಾಪುರ: ಇಲ್ಲಿನ ತಾಲ್ಲೂಕು ಆಸ್ಪತ್ರೆ ಆವರಣದಲ್ಲಿ 15 ಕೋಟಿ ವೆಚ್ಚದಲ್ಲಿ ನಿರ್ಮಿಸಿದ 60 ಹಾಸಿಗೆಗಳ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಕಟ್ಟಡ ಉದ್ಘಾಟನೆಗೆ ಕಾಯುತ್ತಿದೆ. ಕಟ್ಟಡ ಪೂರ್ಣಗೊಂಡು ವರ್ಷವಾದರೂ ಜನಪ್ರತಿನಿಧಿಗಳು ಇದನ್ನು ಜನರಿಗೆ ಸಮರ್ಪಿಸಲು ಸಿದ್ಧರಿಲ್ಲ.

ತಾಲ್ಲೂಕು ಆಸ್ಪತ್ರೆಯು 260 ಹಳ್ಳಿಗಳ ಜನರಿಗೆ ಆರೋಗ್ಯ ಸೇವೆ ಒದಗಿಸುತ್ತಿದೆ. ಆಸ್ಪತ್ರೆಯ ಅಂಗಳ ಸದಾ ಜನದಟ್ಟಣೆಯಿಂದ ಕೂಡಿರುತ್ತದೆ. ಸ್ಥಳಾವಕಾಶ, ಸಿಬ್ಬಂದಿ ಹಾಗೂ ವೈದ್ಯರ ಅಭಾವ ಎದುರಿಸುತ್ತಿದೆ. ಈ ಆಸ್ಪತ್ರೆಗೆ ದಾಖಲಾಗುವ ಗರ್ಭಿಣಿಯರು, ಬಾಣಂತಿಯರು, ನವಜಾತ ಶಿಶುಗಳ ಚಿಕಿತ್ಸೆ ಹಾಗೂ ಆರೈಕೆಗೆ ಸಮಸ್ಯೆ ಉಂಟಾಗುತ್ತಿದೆ.

ಈ ಸಮಸ್ಯೆ ಮನಗಂಡ ಮಾಜಿ ಶಾಸಕಿ ಡಾ.ಅಂಜಲಿ ನಿಂಬಾಳಕರ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ತಾಲ್ಲೂಕು ಆಸ್ಪತ್ರೆ ಆವರಣದಲ್ಲೇ 60 ಹಾಸಿಗೆಗಳ ಸಾಮರ್ಥ್ಯದ ತಾಯಿ ಮತ್ತು ಮಗುವಿನ ಆಸ್ಪತ್ರೆ ಮಂಜೂರು ಮಾಡಿಸಿದ್ದರು. 2022ರಲ್ಲಿ ಆಸ್ಪತ್ರೆ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭವಾಗಿ, 2023ರ ಮಾರ್ಚ್‌ನಲ್ಲಿ ಪೂರ್ಣಗೊಂಡಿತ್ತು.

ಈಗ ವೈದ್ಯಕೀಯ ಉಪಕರಣಗಳು ಮತ್ತು ಸಿಬ್ಬಂದಿ ಒದಗಿಸಿದರೆ, ಆಸ್ಪತ್ರೆ ಕಾರ್ಯಾರಂಭ ಮಾಡಲಿದೆ. ತಾಯಿ ಮತ್ತು ಮಗುವಿನ ಆಸ್ಪತ್ರೆ ಆರಂಭಗೊಂಡಲ್ಲಿ ಗರ್ಭಿಣಿಯರಿಗೆ ಮತ್ತು ಬಾಣಂತಿಯರಿಗೆ ಪ್ರಸವಪೂರ್ವ ಹಾಗೂ ನಂತರದ ಚಿಕಿತ್ಸೆಗಳು, ಮಕ್ಕಳಿಗೆ ವಿಶೇಷ ಚಿಕಿತ್ಸೆ ಮತ್ತು ಆರೈಕೆ ಲಭ್ಯವಾಗಲಿದೆ. ಜತೆಗೆ ಈಗಿರುವ ತಾಲ್ಲೂಕು ಆಸ್ಪತ್ರೆಯಲ್ಲಿ ಉಂಟಾಗುತ್ತಿರುವ

> ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಅಗತ್ಯ ವ್ಯವಸ್ಥೆ ಮಾಡಿ ಉದ್ಘಾಟಿಸಬೇಕು. ಶೀಘ್ರ ಕಾರ್ಯಾರಂಭಕ್ಕೆ ಕ್ರಮ ಕೈಗೊಳ್ಳಬೇಕು ಎಂದು ಮುಖ್ಯಮಂತ್ರಿ ಅವರಿಗೆ ಒತ್ತಾಯಿಸಲಾಗುವುದು
> **ವಿಠ್ಠಲ ಹಲಗೇಕರ ಶಾಸಕ**
>
> ಆಸ್ಪತ್ರೆ ಇನ್ನೂ ಇಲಾಖೆಗೆ ಹಸ್ತಾಂತರಗೊಂಡಿಲ್ಲ. ಸಿಬ್ಬಂದಿ ನಿಯೋಜನೆ ವೈದ್ಯಕೀಯ ಉಪಕರಣಗಳ ವ್ಯವಸ್ಥೆ ಸಹ ಬಾಕಿ ಇದೆ. ಹೊಸ ಶಾಸಕರು ಇತ್ತ ಗಮನಹರಿಸುತ್ತಿಲ್ಲ
> **ಡಾ.ಅಂಜಲಿ ನಿಂಬಾಳಕರ ಮಾಜಿ ಶಾಸಕಿ**

ಜನದಟ್ಟಣೆಯೂ ನಿಯಂತ್ರಣಕ್ಕೆ ಬರಲಿದೆ.

'ಶಸ್ತ್ರ ಚಿಕಿತ್ಸಾ ಕೊಠಡಿ, ತೀವ್ರ ನಿಗಾ ಘಟಕದ ಪರಿಕರಗಳು, ನವಜಾತ ಶಿಶುಗಳಿಗೆ ಇನ್ಸುಲೇಟರ್, ಅಗತ್ಯ ಪೀಠೋಪಕರಣ ಮತ್ತು ವೈದ್ಯಕೀಯ ಉಪಕರಣಗಳು ಇನ್ನೂ ಬಂದಿಲ್ಲ. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವೈದ್ಯರು ಮತ್ತು ಸಿಬ್ಬಂದಿ ನಿಯೋಜನೆ ಕಾರ್ಯ ಪೂರ್ಣವಾಗಿಲ್ಲ. ಹೀಗಾಗಿ ಆಸ್ಪತ್ರೆ ಕಾರ್ಯನಿರ್ವಹಣೆ ಆರಂಭವಾಗಲು ವಿಳಂಬವಾಗಿದೆ' ಎನ್ನುತ್ತವೆ ಮೂಲಗಳು.

'ಮಾಜಿ ಶಾಸಕಿ ಅಂಜಲಿ ಹಾಗೂ ಹಾಲಿ ಶಾಸಕ ವಿಠ್ಠಲ ಹಲಗೇಕರ ನಡುವಿನ ಶೀತಲ ಸಮರಕ್ಕೆ ಹೊಸ ಆಸ್ಪತ್ರೆ ಬಲಿಪಶುವಾಗಿದೆ' ಎಂದು ತಾಲ್ಲೂಕಿನ ಜನತೆ ಆರೋಪಿಸುತ್ತಾರೆ.

'ಸದ್ಯ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವ ಕಾರಣ ಶಾಸಕ ವಿಠ್ಠಲ ಹಲಗೇಕರ ಆಸ್ಪತ್ರೆ ಉದ್ಘಾಟಿಸಲು ಮನಸ್ಸು ಮಾಡುತ್ತಿಲ್ಲ. ಇದಕ್ಕೆ ತದ್ವಿರುದ್ಧವಾಗಿ ಡಾ.ಅಂಜಲಿ ಸಹ ಕ್ಷೇತ್ರದಲ್ಲಿ ಬಿಜೆಪಿ ಶಾಸಕರಿಗೆ 'ಕ್ರೆಡಿಟ್' ಹೋಗುತ್ತದೆ ಎಂದು ಹಿಂಜರಿಯುತ್ತಿದ್ದಾರೆ' ಎಂಬುದು ಎಂಇಎಸ್ ಮುಖಂಡ ಮುರಳೀಧರ ಪಾಟೀಲ ಆರೋಪ.

## ಗ್ಯಾಸ್ ಸ್ಟೌ ಅಂಗಡಿಯಲ್ಲಿ ಬೆಂಕಿ ಅವಘಡ

ಬೆಳಗಾವಿ: ಇಲ್ಲಿನ ಖಡೇಬಜಾರ್‌ನ ಎಲ್‌ಪಿಜಿ ಗ್ಯಾಸ್ ಸ್ಟೌ ಅಂಗಡಿಯಲ್ಲಿ ಶುಕ್ರವಾರ ಬೆಂಕಿ ಹೊತ್ತಿಕೊಂಡು ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಯಿತು.

ಮಾರುಕಟ್ಟೆ ಪ್ರದೇಶದಲ್ಲೇ ಅವಘಡ ಸಂಭವಿಸಿದ್ದರಿಂದ ಸುತ್ತಲಿನ ವ್ಯಾಪಾರಿಗಳು ಹಾಗೂ ಗ್ರಾಹಕರು ಚೆಲ್ಲಾಪಿಲ್ಲಿಯಾಗಿ ಓಡಿದರು.

ಘಟನಾ ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ತ್ವರಿತವಾಗಿ ಬೆಂಕಿ ನಂದಿಸಿ, ಹೆಚ್ಚಿನ ಅನಾಹುತ ತಪ್ಪಿಸಿದರು.

'ಈ ಅಂಗಡಿಯಲ್ಲಿ ಸಿಲಿಂಡರ್‌ಗೆ ಅಡುಗೆ ಅನಿಲ ಭರ್ತಿ ಮಾಡಿಕೊಡಲಾಗುತ್ತಿತ್ತು. ಗ್ಯಾಸ್ ಸ್ಟೌ ದುರಸ್ತಿ ಮತ್ತು ಮಾರಾಟ ಮಾಡಲಾಗುತ್ತಿತ್ತು. ಆಕಸ್ಮಿಕವಾಗಿ ಅಗ್ನಿ ಅವಘಡ ಸಂಭವಿಸಿದೆ. ಮೂರ್ನಾಲ್ಕು ಸಿಲಿಂಡರ್ ಸ್ಫೋಟಗೊಂಡಿರುವ ಸಾಧ್ಯತೆ ಇದೆ' ಎಂದು ಅಗ್ನಿಶಾಮಕ ಠಾಣೆ ಅಧಿಕಾರಿಗಳು ತಿಳಿಸಿದರು.

ಈ ಪ್ರದೇಶ ಸದಾ ಜನದಟ್ಟಣೆಯಿಂದ ಕೂಡಿರುತ್ತದೆ. ನೂರಾರು ಜನರು ವ್ಯಾಪಾರ ವಹಿವಾಟು ಕೈಗೊಳ್ಳುತ್ತಾರೆ. ಬೆಂಕಿ ಅವಘಡ ಸಂಭವಿಸಿದ ಕಾರಣ, ಪೊಲೀಸರು ಕೆಲಹೊತ್ತು ಜನಸಂಚಾರ ತಡೆದರು.

ಮುನ್ನೆಚ್ಚರಿಕೆ ಕ್ರಮವಾಗಿ ವಿದ್ಯುತ್ ಸಂಪರ್ಕವನ್ನೂ ಕಡಿತಗೊಳಿಸಲಾಗಿತ್ತು. ಕೆಲವು ವ್ಯಾಪಾರಸ್ಥರು ಅಂಗಡಿಗಳನ್ನು ಮುಚ್ಚಿ, ರಕ್ಷಣಾ ಕಾರ್ಯಾಚರಣೆಗೆ ನೆರವಾದರು.

## ವರ್ಷಕ್ಕೆ ಕನಿಷ್ಠ 200 ದಿನ ಕೆಲಸ ನೀಡಿ–ಪ್ರತಿಭಟನೆ

ಬೆಳಗಾವಿ: 'ನರೇಗಾ ಯೋಜನೆಯಡಿ ದುಡಿಯುವ ಕೃಷಿ ಕಾರ್ಮಿಕರಿಗೆ ವಾರ್ಷಿಕ ಕನಿಷ್ಠ 200 ದಿನ ಕೆಲಸ ನೀಡಬೇಕು' ಎಂದು ಆಗ್ರಹಿಸಿ, ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯವರು ಇಲ್ಲಿನ ರಾಣಿ ಚನ್ನಮ್ಮನ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಶುಕ್ರವಾರ ಪ್ರತಿಭಟನೆ ನಡೆಸಿದರು.



ಆರ್ಥಿಕ ಸಂಕಷ್ಟದಲ್ಲಿರುವ ರೈತರು ಹಾಗೂ ಕಾರ್ಮಿಕರ ಸಾಲ ಮನ್ನಾ ಮಾಡಬೇಕು. ಡಾ.ಸ್ವಾಮಿನಾಥನ್ ವರದಿ ಜಾರಿಗೊಳಿಸಬೇಕು. ದೇಶದಾದ್ಯಂತ ಕನಿಷ್ಠ ಬೆಂಬಲ ಬೆಲೆ ಖಾತ್ರಿ ಕಾನೂನು ಜಾರಿಗೊಳಿಸಬೇಕು ಸೇರಿದಂತೆ ಅನೇಕ ಬೇಡಿಕೆ ಮಂಡಿಸಿದರು.

ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿಯವರೆಗೆ ಮೆರವಣಿಗೆ ನಡೆಸಿ, ಜಿಲ್ಲಾಡಳಿತ ಮೂಲಕ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಸಿದಗೌಡ ಮೋದಗಿ, ಡಾ.ಜನಾರ್ದನ್, ಮಂದಾ ನೇವಗಿ, ನಾಗೇಶ ಸಾತೇರಿ, ಮಲ್ಲಿಕಾರ್ಜುನ ಡೊಂಗರಗಾವಿ, ಸಂಜು ಡೊಂಗರಗಾವಿ, ಶಿವಲೀಲಾ ಮಿಸಾಳೆ, ಗೀತಾ ಧರೆಣ್ಣವರ ಇತರರಿದ್ದರು.

## ಫೆಬ್ರವರಿ 2024 ಮಾಹೆಯಲ್ಲಿ ಆಹಾರ ಧಾನ್ಯವನ್ನು ಪಡಿತರಗೆ ವಿತರಣೆ

ಬೆಳಗಾವಿ: ಬೆಳಗಾವಿ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ ಪ್ರಧಾನ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿಯಲ್ಲಿ ಬಿಡುಗಡೆಯಾದ ಆಹಾರ ಧಾನ್ಯವನ್ನು ಫೆಬ್ರವರಿ 2024 ಮಾಹೆಯಲ್ಲಿ ಫಲಾನುಭವಿಗಳಿಗೆ ಸಾರ್ವಜನಿಕ ವಿತರಣಾ ಪದ್ಧತಿಯಡಿಯಲ್ಲಿ ಪಡಿತರ ವಿತರಣೆ ಮಾಡಲಾಗುವುದು.

ಅಂತ್ಯೋದಯ (ಎಎವೈ) ಪ್ರತಿ ಪಡಿತರ ಚೀಟಿಗೆ ಅಕ್ಕಿ 35 ಕೆ.ಜಿ ಮತ್ತು ಪಿ.ಎಚ್.ಎಚ್ (ಬಿಪಿಎಲ್) ಆದ್ಯತಾ ಪ್ರತಿ ಸದಸ್ಯರಿಗೆ ಅಕ್ಕಿ 5 ಕೆ.ಜಿ ಉಚಿತವಾಗಿ ನೀಡಾಗುವುದು. ಹಾಗೂ ಎನ್‌ಪಿಹೆಚ್‌ಹೆಚ್ (ಎಪಿಎಲ್) (ಆದ್ಯತೇತರ) (ಒಪ್ಪಿತ ಪಡಿತರ ಚೀಟಿ) ಏಕ ಸದಸ್ಯ ಪಡಿತರ ಚೀಟಿಗೆ ಅಕ್ಕಿ 5 ಕೆ.ಜಿ 2 ಮತ್ತು ಹೆಚ್ಚಿನ ಸದಸ್ಯರಿರುವ ಪಡಿತರ ಚೀಟಿಗೆ ಅಕ್ಕಿ–10 ಕೆ.ಜಿ. ಪ್ರತಿ ಕೆ.ಜಿ.ಗೆ ರೊ 15 ಹಾಗೂ ಅಂತರರಾಜ್ಯ ಪೋರ್ಟೆಬಿಲಿಟಿ ಮೂಲಕ ಪಡಿತರ ಪಡೆಯುವವರಿಗೆ ಕೇಂದ್ರ ಸರ್ಕಾರದ ಪಡಿತರ ವಿತರಣಾ ಪ್ರಮಾಣ 5 ಕೆ.ಜಿ ಪ್ರತಿ ಸದಸ್ಯರಿಗೆ ಮತ್ತು ದರ ಪ್ರತಿ ಕೆ.ಜಿ ರೊ 3 ರಂತೆ ಅನ್ವಯಿಸುತ್ತದೆ.

ಜಿಲ್ಲೆಯಲ್ಲಿ 68,147 ಅಂತ್ಯೋದಯ, 10,72,147 ಬಿಪಿಎಲ್ ಹಾಗೂ 3.23,176 ಎಪಿಎಲ್ ಪಡಿತರ ಚೀಟಿಗಳು ಸೇರಿ ಒಟ್ಟು 14,36,375 ಪಡಿತರ ಚೀಟಿಗಳು ಚಾಲ್ತಿಯಲ್ಲಿರುತ್ತದೆ.

ಈ ಮಾಹೆ 1ನೇ ತಾರೀಖಿನಿಂದ ತಿಂಗಳ ಕೊನೆಯವರೆಗೆ ಬೆಳಗ್ಗೆ 7 ರಿಂದ ರಾತ್ರಿ 9 ಗಂಟೆಯವರೆಗೆ ಬಾಕಿ ಉಳಿದಿರುವ ಪಡಿತರ ಚೀಟಿಯಲ್ಲಿನ ಸದಸ್ಯರುಗಳು ಇ–ಕೆವೈಸಿ ಮಾಡುವ ಹಾಗೂ ಪಡಿತರ ವಿತರಣೆ ಕಾರ್ಯ ಜರುಗಲಿದೆ, ಕಾರಣ ಪಡಿತರ ಚೀಟಿದಾರರು ಬಯೋ ನೀಡಿದ ತಕ್ಷಣವೇ ಪಡಿತರ ಪಡೆಯಲು ತಿಳಿಸಿದೆ.

ಇ–ಕೆವೈಸಿ ಮಾಡಿಸಲು ಪಡಿತರ ಚೀಟಿ–ದಾರರಿಗೆ ಈ ಮಾಹೆ ಅಂತಿಮ ಗಡುವು ನೀಡಲಾಗಿರುತ್ತದೆ ಹಾಗೂ ಇ–ಕೆವೈಸಿ ಮಾಡಿಸಲು ಪಡಿತರ ಚೀಟಿದಾರರು ಯಾವುದೇ ಶುಲ್ಕ ನೀಡುವಂತಿಲ್ಲ.

ಪಡಿತರ ಚೀಟಿದಾರರು ತಮಗೆ ಹಂಚಿಕೆ ಮಾಡಿದ ಆಹಾರಧಾನ್ಯವನ್ನು ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಅಂತಹವರ ಪಡಿತರ ಚೀಟಿಯನ್ನು ರದ್ದುಪಡಿಸಲು ಕ್ರಮವಹಿಸಲಾಗುವುದು. ಕಾಳಸಂತೆಯಲ್ಲಿ ಅನಧಿಕೃತವಾಗಿ ಆಹಾರಧಾನ್ಯವನ್ನು ದಾಸ್ತಾನು/ಸಾಗಾಣಿಕೆ ಮಾಡುವವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆ–1955 ರಡಿ ಕ್ರಮ ಜರುಗಿಸಲಾಗುವುದು.

ಪಡಿತರ ವಿತರಣೆ ಕುರಿತು ಏನಾದರೂ ದೂರುಗಳು ಇದ್ದಲ್ಲಿ, ಸಂಬಂಧಿಸಿದ ತಹಶೀಲ್ದಾರ ಕಚೇರಿ ಅಥವಾ ಜಂಟಿ ನಿರ್ದೇಶಕರ ಕಚೇರಿ ಆಹಾರ ಇಲಾಖೆ ಇವರಿಗೆ ದೂರು ಸಲ್ಲಿಸಬಹುದಾಗಿದೆ ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೊಸ ಬಸ್ಸುಗಳ ಲೋಕಾರ್ಪಣೆ ಕಾರ್ಯಕ್ರಮ ಫೆ.18 ರಂದು

ಬೆಳಗಾವಿ: ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ನೂತನ ಪರಿಸರ ಸ್ನೇಹಿ ಬಿ.ಎಸ್–6 (ಸುರಕ್ಷತೆಗೆ cc canera & electronic vehicle stability control ಜಿವಲ್ಫ ನಿವಿUಎಶ on Bord diagnostics-2 ವ್ಯವಸ್ಥೆ ಹೊಂದಿದ) ಬಸ್ಸುಗಳ ಲೋಕಾರ್ಪಣೆ ಹಾಗೂ ಅಪಘಾತ ರಹಿತ ಚಾಲಕರಿಗೆ ಬೆಳ್ಳಿ ಪದಕ ವಿತರಣಾ ಸಮಾರಂಭವನ್ನು ಫೆ.18 ರಂದು ಬೆಳಗ್ಗೆ 11 ಗಂಟೆಗೆ ಬೆಳಗಾವಿ ಕೇಂದ್ರ ಬಸ್ ನಿಲ್ದಾಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಘನ ಉಪಸ್ಥಿತಿ ಇರಲಿದ್ದಾರೆ. ಉತ್ತರ ವಿಧಾನಸಭೆ ಶಾಸಕರಾದ ಆಸೀಫ್ (ರಾಜು) ಸೇಠ್ ಅಧ್ಯಕ್ಷತೆ ವಹಿಸಲಿದ್ದಾರೆ. ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಅಧ್ಯಕ್ಷರಾದ ರಾಮಲಿಂಗಾರೆಡ್ಡಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಅತಿಥಿಗಳಾಗಿ ವಿಧಾನಸಭೆ ಸಚೇತಕರು ಅಶೋಕ ಪಟ್ಟಣ, ನವದೆಹಲಿಯ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಹುಬ್ಬಳ್ಳಿಯ ವಾ.ಕ.ರಾ.ಸಾ.ಸಂಸ್ಥೆಯ ಅಧ್ಯಕ್ಷರಾದ ಭರಮಗೌಡ ಅಲಗೌಡ ಕಾಗೆ, ಹಣಕಾಸು ಸಂಸ್ಥೆಯ ಶಾಸಕ ಮಹಾಂತೇಶ ಕೌಜಲಗಿ, ಜಿಲ್ಲಾ ವ್ಯಾಪ್ತಿಯ ಶಾಸಕರು, ಜನಪ್ರತಿನಿಧಿಗಳು, ಹಿರಿಯ ಅಧಿಕಾರಿಗಳು ಹಾಗೂ ಇನ್ನಿತರೆ ಗಣ್ಯರು ಆಗಮಿಸಲಿದ್ದಾರೆ.

## ವಿದ್ಯುತ್ ವ್ಯತ್ಯಯ

ಬೆಳಗಾವಿ: 110 ಕೆವಿ ನೆಹರು ನಗರ ಉಪಕೇಂದ್ರ ಮತ್ತು 33ಕೆವಿ ಸದಾಶಿವ ನಗರದಲ್ಲಿ 4 ನೇ ತ್ರೈಮಾಸಿಕ ಕೆಲಸ ನಿರ್ವಹಿಸುವ ಸಲುವಾಗಿ ವಿದ್ಯುತ್ ಉಪಕೇಂದ್ರದಿಂದ ಬೆಳಗಾವಿ ನಗರದ ಕೆಲವು ನಗರದಲ್ಲಿ ಫೆ.18 ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಎಫ್1 ಇಂಡಾಲದ ಇಂಡಸ್ಟ್ರೀಯನ್ ಏರಿಯಾ, ಸದರಿ ಫೀಡರ ಮೇಲೆ ಬರುವ ಇಲ್ಲಾ ಪ್ರದೇಶಗಳು. ವೈಭವ ನಗರ, ನ್ಯೂ ವೈಭವ ನಗರ, ವಿದ್ಯಾಗಿರಿ, ಅನ್ನಪೂರ್ಣವಾಡಿ, ಬಸವ ಕಾಲೋನಿ, ಅಜಮ್ ನಗರ, ಸಂಗಮೇಶ್ವರ ನಗರ, ಕೆಎಲ್‌ಇ ಏರಿಯಾ, ಶಾಹುನಗರ, ವಿನಾಯಕ ನಗರ, ಜ್ಯೋತಿ ನಗರ, ಎಪಿಎಂಸಿ, ಉಷಾ ಕಾಲೋನಿ, ಸಿದ್ದೇಶ್ವರ ನಗರ, ಬಾಕ್ಸೈಟರೋಡ, ಇಂಡಾಲ ಏರಿಯಾ ಸಿವಿಲ್ ಹಾಸ್ಪಿಟಲ್ ಏರಿಯಾ, ಅಂಬೇಡ್ಕರ್ ನಗರ, ಚೆನ್ನಮ್ಮಾ ಸರ್ಕಲ್, ಕಾಲೇಜ ರೋಡ, ಡಿಸ್ಟ್ರಿಕ್ಟ ಕೋರ್ಟ್, ಡಿಸಿ ಕಂಪೌಂಡ ಏರಿಯಾ, ಸಿಟಿ ಪೊಲೀಸ್ ಲೈನ್, ಕಾಕತಿವೇಸ ಕಾಳೀ ಅಂಬ್ರಾಯಿ, ಕ್ಲಬ್ ರೋಡ, ಶಿವಬಸವ ನಗರ, ರಾಮನಗರ, ಗ್ಯಾಂಗವಾಡಿ, ಅಯೋಧ್ಯಾನಗರ, ಕೆಎಲ್‌ಇ ಕಾಂಪ್ಲೇಕ್ಷ, ಕೆಇಬಿ ಕ್ವಾಟರ್ಸ್, ಸುಭಾಶ ನಗರ, ಕಾರ್ಪೋರೇಶನ್ ಆಫೀಸ್, ಪೊಲೀಸ್ ಕಮಿಶನರ್ ಆಫೀಸ್, ಶಿವಾಜಿನಗರ, ವೀರಭದ್ರನಗರ, ಆರ್‌ಟಿಓ ವೃತ್ತ, ತ್ರೀವಣಿ, ರೇಲ್ ನಗರ, ಸಂಪಿಗೆ ರೋಡ, ಸದಾಶಿವನಗರ, ವಿಶ್ವೇಶ್ವರಯ್ಯಾ ನರಗ, ಕ್ಲಬ್ ರೋಡ, ಟಿವಿ ಸೆಂಟರ್, ಪಿ&ಟಿ ಕಾಲೋನಿ,(ಹನುಮಾನ ನಗರ), ಮುರಳಿಧರ ಕಾಲೋನಿ, ಜಿನಾಬಕುಲ ಏರಿಯಾ, ರೋಹನ್ ರೆಸಿಡೆನ್ಸಿ, ಆದಿತ್ಯ ಆರ್ಕಿಡ್ ಕೋಲ್ಲಾಪೂರ ಸರ್ಕಲ್ ಸಿವಲ್ ರಸ್ತೆ, ಸುಭಾಸ್ ನಗರ, ರಾಮದೇವ ಏರಿಯಾ, ಎಪಿ ಆಫೀಸ್ ರಸ್ತೆ, ಹನುಮಾನ ಮಂದಿರ ನೆಹರು ನಗರ ಏರಿಯಾ, ಎಫ್15 ವಿಶ್ವೇರಯ್ಯಾ ನಗರದ ವಿಶ್ವೇಶ್ವರಯ್ಯ ನಗರ, ಹನುಮಾನ ನಗರ, ರೇಲ್ ನಗರ, ಸದಾಶಿವ ನಗರ. 33ಕೆವಿ ಕೆ.ಎಲ್. ಇ.ಹೆಚ್.ಟಿ ಸ್ಥಾವರ, ಇ.ಹೆಚ್ ಸ್ಥಾವರಗಳಲ್ಲಿ ವಿದ್ಯುತ್ ವ್ಯತ್ಯಯ ಆಗಲಿದೆ.


## ಗ್ರಾಮ ಪಂಚಾಯತಿಗಳಲ್ಲಿ ಸಂವಿಧಾನ ಜಾಥಕ್ಕೆ ಅದ್ದೂರಿ ಸ್ವಾಗತ

ಬೆಳಗಾವಿ: ಸಂವಿಧಾನದ ಮೌಲ್ಯ ಮತ್ತು ಆಶಯಗಳನ್ನು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಿಗೆ ಸ್ಥಬ್ದ ಚಿತ್ರಗಳನ್ನೊಳಗೊಂಡ ವಿಶೇಷ ರಥಗಳೆರೆಡು ಏಕ ಕಾಲಕ್ಕೆ ಎರಡು ಮಾರ್ಗದಲ್ಲಿ ಸಂಚರಿಸುವದರ ಮೂಲಕ ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಳ್ಳಲಾಗಿತು.

ಸದರಿ ಕಾರ್ಯಕ್ರಮವನ್ನು ಗಣರಾಜ್ಯೋತ್ಸವದ ದಿನದಂದು ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಚಾಲನೆಗೊಳ್ಳಿಸಿದ್ದರು.

ಸ್ಥಬ್ದಚಿತ್ರದ ಮೆರವಣಿಗೆಯು ಜಿಲ್ಲಾದ್ಯಾಂತ ಎರಡು ಮಾರ್ಗಗಳ ನಡೆಯುತು. ಮೊದಲನೆ ಮಾರ್ಗದರಥವು ಬೆಳಗಾವಿ, ಹುಕ್ಕೇರಿ, ನಿಪ್ಪಾಣಿ, ಚಿಕ್ಕೋಡಿ, ಕಾಗವಾಡ, ಅಥಣಿ, ರಾಯಬಾಗ ತಾಲೂಕುಗಳಲ್ಲಿ ಹಾಗೂ ಎರಡನೇ ಮಾರ್ಗದರಥವು ಗೋಕಾಕ, ಮೂಡಲಗಿ, ರಾಮದುರ್ಗ, ಸವದತ್ತಿ, ಬೈಲಹೊಂಗಲ, ಚನ್ನಮ್ಮನಕಿತ್ತೂರ, ಖಾನಾಪೂರ ತಾಲೂಕುಗಳಿಗೆ ಸ್ಥಬ್ದ ಚಿತ್ರಗಳ ಮೆರವಣಿಗೆಯು ಸಂಚರಿಸಿತು.

ಸಂವಿಧಾನದ ಮೂಲ ಆಶಯಗಳಾದ ಸರ್ವಧರ್ಮಗಳ ಸಮಭಾವ, ಸಮಸ್ತ ನಾಗರೀಕರಿಗೆ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ ಕುರಿತು, ವಿಚಾರ, ಅಭಿವ್ಯಕ್ತಿ, ವಿಶ್ವಾಸ ಮತ್ತು ಧರ್ಮ ಶೃದ್ಧೆಯ ಸ್ವಾತಂತ್ರ್ಯತೆಯ ಅರಿವು, ಸ್ಥಾನಮಾನ ಹಾಗೂ ಅವಕಾಶಗಳ ಸಮಾನತೆಯನ್ನು ದೊರಕಿಸಲು, ರಾಷ್ಟ್ರದ ಏಕತೆ ಮತ್ತು ಅಖಂಡತೆಯನ್ನು ಬಲಗೊಳಿಸಲು, ಎಲ್ಲರಲ್ಲೂ ಭಾತೃತ್ವ ಭಾವನೆಯನ್ನು ವೃದ್ಧಿಗೊಳಿಸಲು ಈ ಎಲ್ಲಾ



ಆಶಯಗಳನ್ನು ಪ್ರತಿ ಮನೆ–ಮನೆಗಳಿಗೂ, ಮನ–ಮನಗಳಿಗೂ ತಲುಪಿಸುವದು ಈ ಕಾರ್ಯಕ್ರಮದ ಮೂಲ ಧ್ಯೇಯವಾಗಿದೆ.

ಫೆ.15 ರಂದು ಮೊದಲ ಮಾರ್ಗದ ರಥವು ಅಥಣಿ ತಾಲೂಕಿನ ಗುಂಡೆವಾಡಿ, ಪಾರ್ಥನಹಳ್ಳಿ, ಚಮಕೇರಿ, ಅಡಹಳ್ಳಿ, ಹೋಹಳ್ಳಿ, ಕಕಮರಿ, ಕೊಟ್ಟಲಗಿ, ಕನ್ನಲಾ, ತೇಲಸಂಗ, ಅರಟಾಳ ಮತ್ತು ಐಗಳಿ ಗ್ರಾಮ ಪಂಚಾಯತಿ ಮೂಲಕ ಸಂಚರಿಸಿ ಫೆ.16 ರಂದು ಅಥಣಿ ತಾಲೂಕಿನ ಎಲಿ ಹಡಗಲಿ, ಬಡಚಿ, ಕಟಗೇರಿ, ಕೊಕಟನೂರ, ಸುಟ್ಟಟ್ಟಿ, ಜಂಬರವಾಡಿ, ನಂದಗಾಂವ, ಶಿರಹಟ್ಟಿ, ಸವದಿ, ರಡ್ಡೇರಟ್ಟಿ ಮತ್ತು ನಾಗನೂರ ಪಿ.ಕೆ ಗ್ರಾಮ ಪಂಚಾಯತಿಗಳಿಗೆ ತೆರಳಿತು.

ಅದೇ ರೀತಿಯಾಗಿ ಎರಡನೇ ಮಾರ್ಗ ದರಥವು ಕಿತ್ತೂರ ತಾಲೂಕಿನ ಹಿರೇನಂದಿಹಳ್ಳಿ, ಕಲಬಾವಿ, ತುರಮುರಿ, ಹುಣಸಿಕಟ್ಟಿ, ಕಾದ್ರೋಳಿ, ಎಂ.ಕೆ.ಹುಬ್ಬಳಿ, ದಾಸ್ತಿಕೊಪ್ಪ, ವೀರಾಪೂರ, ಡಿ.ಶೀಗೇಹಳ್ಳಿ ಮತ್ತು ಅಂಬಡಗಟಿ ಗ್ರಾಮ ಪಂಚಾಯತಿಗಳ ಮೂಲಕ ಸಂಚರಿಸಿ ಕಿತ್ತೂರ ತಾಲೂಕಿನ ತಿಗಡೊಳ್ಳಿ, ಕಿತ್ತೂರ, ಕುಲವಳ್ಳಿ, ದೇಗಾಂವ್, ಬೈಲೂರ ಹಾಗೂ ಖಾನಾಪೂರ ತಾಲೂಕಿನ ಕೇರವಾಡ, ಲಿಂಗನಮಠ ಮತ್ತು ಗೊದೋಳಿ ಗ್ರಾಮ ಪಂಚಾಯತಿಗಳಿಗೆ ತೆರಳಿತು.

ಸಂವಿಧಾನ ಜಾಗೃತಿ ಜಾಥದಲ್ಲಿ ಅಧಿಕ ಸಂಖ್ಯೆಯಲ್ಲಿ ಗ್ರಾಮ ಪಂಚಾಯತಿಗಳ ಅಧ್ಯಕ್ಷರು, ಉಪಾಧ್ಯಕ್ಷರು, ಸರ್ವ ಸದಸ್ಯರು, ಗ್ರಾಮದ ಮುಖಂಡರು, ವಿವಿಧ ಸಂಘಟನೆಗಳ ಮುಖಂಡರು, ಸ್ವ–ಸಹಾಯ ಸಂಘಗಳು, ಮತ್ತು ಸಾರ್ವಜನಿಕರು ಭಾಗವಹಿಸುವಿಕೆಯಿಂದ"ಸಂವಿಧಾನ ಜಾಗೃತಿ ಜಾಥವನ್ನು ಯಶಸ್ವಿಗೊಳಿಸಲಾಯಿತು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089